VOLUME: 16 | 17 MARCH 2026 | ಮಂಗಳವಾರ | RS: 2 | PAGE: 06 ISSUE: 51 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಭಾರತೀಯ ಚಿತ್ರರಂಗದ ಖ್ಯಾತ ತಾರೆ ಮಧುಬಾಲ ಜೀವನ ಆಧರಿಸಿದ ಸಿನಿಮಾ ಬಾಲಿವುಡ್‌ನಲ್ಲಿ ನಿರ್ಮಾಣ ಆಗುತ್ತಿದ್ದು, ನಟಿ ಸಾಯಿ ಪಲ್ಲವಿ, ಮಧುಬಾಲ ಅವರ ಪಾತ್ರದಲ್ಲಿ ನಟಿಸಲಿದ್ದಾರೆ. ಯಾವುದೇ ನಟಿಗಾದರೂ ಮಧುಬಾಲ ಅಂಥಹಾ ಐಕಾನಿಕ್ ನಟಿಯ ಪಾತ್ರದಲ್ಲಿ ನಟಿಸುವುದು ಕನಸೇ ಸರಿ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



# ಹೋಟೆಲ್‌ಗಳಿಗೆ ಸದ್ಯಕ್ಕೆ ಗ್ಯಾಸ್ ಪೂರೈಕೆ ಇಲ್ಲ

ಬೆಂಗಳೂರು: ಮಧ್ಯಪ್ರಾಚ್ಯ ಸಂಘರ್ಷದಿಂದ ತತ್ತರಿಸಿರುವ ಹೋಟೆಲ್ ಉದ್ಯಮಕ್ಕೆ ಕರ್ನಾಟಕ ಸರ್ಕಾರ ಮತ್ತೆ ಶಾಕ್ ಕೊಟ್ಟಿದೆ. ಹೋಟೆಲ್‌ಗಳಿಗೆ ಸದ್ಯಕ್ಕೆ ಗ್ಯಾಸ್ ಪೂರೈಕೆ ಇಲ್ಲ ಎಂದು ಸಚಿವ ಕೆ.ಹೆಚ್.ಮುನಿಯಪ್ಪ ತಿಳಿಸಿದ್ದಾರೆ.

ತೈಲ ಪೂರೈಕೆ ಕಂಪನಿಗಳ ಜೊತೆ ಇಂದು ಮಹತ್ವದ ಸಭೆ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಸಿಎಂ ಎರಡನೇ ಪತ್ರ ಬರೆಯುತ್ತಿದ್ದಾರೆ. ಪರಿಸ್ಥಿತಿ ಗಂಭೀರವಾಗಿದೆ. ಕೇಂದ್ರ ಸರ್ಕಾರ ಹೆಚ್ಚಿನ ಗಮನ ಕೊಡಬೇಕು. ಇಂದು ಸೆಕ್ರೆಟರಿ, ಕಮಿಷನರ್ ಹಾಗೂ ತೈಲ ಕಂಪನಿಗಳ ಮುಖ್ಯಸ್ಥರು ಜೊತೆ ಸಭೆ ನಡೆಸಲಾಯಿತು ಎಂದರು.

ಒಂದು ಗಂಟೆಯ ತನಕ ಸಭೆಯಾಗಿದೆ. ವಿನಾಕಾರಣ ಆತಂಕಕ್ಕೆ ಒಳಗಾಗಬಾರದು ಎಂದು ಗ್ರಾಹಕರಲ್ಲಿ ಮನವಿ ಮಾಡುತ್ತೇವೆ.



ಗ್ಯಾಸ್ ಡಬಲ್ ಬುಕ್ಕಿಂಗ್ ಬೇಡ.

ಮಿತವ್ಯಯದಲ್ಲಿ ಬಳಕೆ ಮಾಡಿ. ಹಡಗುಗಳ ಮೂವ್‌ಮೆಂಟ್ ಆರಂಭವಾಗಿದೆ. ಆಸ್ಪತ್ರೆ, ಶೈಕ್ಷಣಿಕ ಸಂಸ್ಥೆಗಳು, ಏರ್‌ಲೈನ್ಸ್, ರೈಲ್ವೆ ಕ್ಯಾಂಟೀನ್‌ಗಳಿಗೆ 100% ರಷ್ಟು ಸಿಲಿಂಡರ್ ನೀಡಲು ಒಪ್ಪಿಗೆ ನೀಡಲಾಗಿದೆ. ಆರೂವರೆ ಸಾವಿರ ಸಿಲಿಂಡರ್ ಗಳ ಪ್ರತಿದಿನ ಖರ್ಚಿಗೆ ಕೇಂದ್ರ ಒಪ್ಪಿಗೆ ನೀಡಿದೆ. ಇದರಲ್ಲಿ 4200 ಸಿಲಿಂಡರ್ ಎಸೆನ್ಷಿಯಲ್ ವಲಯಕ್ಕೆ ಪೂರೈಕೆ ಮಾಡಲು ನಿರ್ಧಾರ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಆಸ್ಪತ್ರೆ, ಶೈಕ್ಷಣಿಕ ಸಂಸ್ಥೆಗಳು, ಇಂದಿರಾ ಕ್ಯಾಂಟೀನ್‌ಗಳಿಗೆ 4200+1200, ಎಸೆನ್ಷಿಯಲ್ ಸರ್ವಿಸ್ ವಲಯಕ್ಕೆ 5200 ಪೂರೈಕೆ, 2250 ಸಿಲಿಂಡರ್‌ಗಳು ಆಟೋಗಳಿಗೆ ಪೂರೈಕೆ ಮಾಡಲಾಗ್ತಿದೆ. ಹೊಟೇಲ್‌ಗಳಿಗೆ ಸದ್ಯಕ್ಕೆ ಪೂರೈಕೆ ಆಗಲ್ಲ. ಎಲೆಕ್ಟ್ರಿಕ್ ಸ್ಟವ್ ಬಳಕೆ ಮಾಡುವಂತೆ ಸಚಿವರು ಮನವಿ ಮಾಡಿದರು.

1 ಸಾವಿರ ಸಿಲಿಂಡರ್ ಒಂದು ದಿನಕ್ಕೆ ಪೂರೈಕೆ ಮಾಡಲಾಗುವುದು. ಇದರಲ್ಲಿ ಹೋಟೆಲ್ ಅಸೋಸಿಯೇಷನ್ ಕೂಡ ಇದೆ. ಹೋಟೆಲ್ ಸರ್ವಿಸರ್‌ಗಳ ಬಳಕೆಗೆಯಾದ್ರೂ ಸಿಲಿಂಡರ್ ಬೇಕಾಗುತ್ತೆ. ರಾಜ್ಯದಲ್ಲಿ 44 ಸಾವಿರ ಸಿಲಿಂಡರ್‌ಗಳು ಹೊಟೇಲ್‌ಗಳಿಗೆ ಪೂರೈಕೆ ಆಗ್ತಿತ್ತು ಎಂದು ವಿವರಿಸಿದರು.

## 550ಕ್ಕೂ ಹೆಚ್ಚು ಭಾರತೀಯರ ರಕ್ಷಣೆ

ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಸಂಘರ್ಷದ ಮಧ್ಯೆ ಕೇಂದ್ರ ಸರ್ಕಾರ ತನ್ನ ನಾಗರಿಕರಿಗೆ ಸಹಾಯಮಾಡುವ ಪ್ರಯತ್ನಗಳನ್ನು ಚುರುಕುಗೊಳಿಸಿರುವುದರಿಂದ, 550ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಇರಾನ್‌ನಿಂದ ಅರ್ಮೇನಿಯಾ ಮೂಲಕ ಸ್ಥಳಾಂತರಿಸಲಾಗಿದೆ.

ಭೂ–ಗಡಿ ಸಾಗಣೆಯನ್ನು ಸುಗಮಗೊಳಿಸಿದ್ದಕ್ಕಾಗಿ ವಿದೇಶಾಂಗ ಸಚಿವ ಎಸ್. ಜೈಶಂಕರ್ ಅವರು ಸೋಮವಾರ ಅರ್ಮೇನಿಯಾ ಸರ್ಕಾರ ಮತ್ತು ಜನರಿಗೆ ಧನ್ಯವಾದ ಅರ್ಪಿಸಿದ್ದಾರೆ.

"ಇರಾನ್‌ನಿಂದ ಇಲ್ಲಿಯವರೆಗೆ 550ಕ್ಕೂ ಹೆಚ್ಚು ಭಾರತೀಯ ಪ್ರಜೆಗಳನ್ನು ಸುರಕ್ಷಿತವಾಗಿ ಸ್ಥಳಾಂತರಿಸಲು ಅನುಕೂಲ ಮಾಡಿಕೊಟ್ಟಿದ್ದಕ್ಕಾಗಿ ಸರ್ಕಾರ ಮತ್ತು ಅರ್ಮೇನಿಯಾ ಜನರಿಗೆ ಧನ್ಯವಾದಗಳು. ಈ ಸವಾಲಿನ ಸಮಯದಲ್ಲಿ ನಿಮ್ಮ ಬೆಂಬಲ ಶ್ಲಾಘನೀಯ" ಎಂದು ಜೈಶಂಕರ್ ಅವರು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದಾರೆ.

ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಅವರ ಪ್ರಕಾರ, ಟೆಹ್ರಾನ್‌ನಲ್ಲಿರುವ ಭಾರತೀಯ ರಾಯಭಾರ ಕಚೇರಿಯು ಸ್ಥಳಾಂತರಿಸುವಿಕೆಯನ್ನು ಸಂಘಟಿಸಿತು.

ಇದು ಭೂ ಗಡಿಗಳಲ್ಲಿ ವೀಸಾ ಮತ್ತು ವಲಸೆ ಔಪಚಾರಿಕತೆಗಳೊಂದಿಗೆ ನಾಗರಿಕರಿಗೆ ಸಹಾಯ ಮಾಡಿತು.

## ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ನಿಗದಿತ ಸಮಯಕ್ಕೆ ಉತ್ತರ ಒದಗಿಸದವರ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ

ಬೆಂಗಳೂರು: ವಿಧಾನಸಭೆಯಲ್ಲಿ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಗಳನ್ನು ಕಡಿಮೆ ಸಂಖ್ಯೆಯಲ್ಲಿ ಉತ್ತರಿಸಲಾಗುತ್ತಿದೆ. ಹಲವು ಇಲಾಖೆಗಳಿಂದ ಉತ್ತರಗಳು ನಿಗದಿತ ಸಂಖ್ಯೆಯಲ್ಲಿ ಒದಗಿಸುತ್ತಿಲ್ಲದಿರುವುದು ಗಮನಕ್ಕೆ ಬಂದಿದ್ದು, ಈ ಬಗ್ಗೆ ಸಭೆ ನಡೆಸಿ ಅಂತಹ ಅಧಿಕಾರಿಗಳ ವಿರುದ್ಧ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಇಂದು ವಿಧಾನಸಭೆಯಲ್ಲಿ ತಿಳಿಸಿದರು.

ವಿಧಾನಸಭೆಯ ಅಧಿವೇಶನದಲ್ಲಿ ವಿರೋಧಪಕ್ಷದ ನಾಯಕರಾದ ಆರ್.ಅಶೋಕ್ ಹಾಗೂ ಶಾಸಕ ಎಸ್. ಸುರೇಶ್ ಕುಮಾರ್ ರವರು ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ನಿಗದಿತ ಸಂಖ್ಯೆಯಲ್ಲಿ ಉತ್ತರಗಳನ್ನು ಒದಗಿಸದೇ ಇರುವುದು ಗಮನಕ್ಕೆ ಬಂದಿದೆ.

ಈ ಬಗ್ಗೆ ಸಭಾಧ್ಯಕ್ಷರು ಗಮನಹರಿಸಬೇಕೆಂದು ಕಳೆದ 4–5 ವಿಧಾನಸಭೆಯ ಅಧಿವೇಶನದಲ್ಲಿ ಕೋರಿದ್ದಾಗ್ಯೂ ನಿಗದಿತ ಸಂಖ್ಯೆಯಲ್ಲಿ ಉತ್ತರಗಳು ಬರುತ್ತಿಲ್ಲ. ಈ ಬಗ್ಗೆ ಸಭಾಧ್ಯಕ್ಷರು ನಿರ್ದೇಶನ ನೀಡಬೇಕೆಂದು ಸದನವನ್ನು ಕೋರಿದ್ದರು.

ಇಂದಿನ ಸದನದ ಕಲಾಪದಲ್ಲಿ ಮತ್ತೆ ನಿರೀಕ್ಷಿತ ಸಂಖ್ಯೆಯಲ್ಲಿ ಉತ್ತರಗಳು ಬಾರದ ಹಿನ್ನೆಲೆಯಲ್ಲಿ ಸದನಕ್ಕೆ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳಿಗೆ ಉತ್ತರಿಸುವ ಮಂತ್ರಿಗಳ ಹಾಗೂ ಇಲಾಖೆಯ ಅಧಿಕಾರಿಗಳ ಆದ್ಯ ಕರ್ತವ್ಯವಾಗಿರುತ್ತದೆ. ಇದು ಗಂಭೀರವಾದ ವಿಷಯವಾಗಿದ್ದು ಈ ಬಗ್ಗೆ ಚರ್ಚೆ ಅಗತ್ಯವೆಂದು ಸದನವನ್ನು ಸಭಾಧ್ಯಕ್ಷರು ಮೊಟಕುಗೊಳಿಸಿರುವುದು ಇತಿಹಾಸ ಎಂದು ಡಾ: ಜಿ.ಪರಮೇಶ್ವರ್ ತಿಳಿಸಿದರು.

ಸರ್ಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಕೂಡಲೇ ಈ ಕುರಿತು ಸಭಾಧ್ಯಕ್ಷರು ಸಭೆ ನಡೆಸಿ, ಮುಖ್ಯಮಂತ್ರಿಗಳು, ಸರ್ಕಾರದ ಕಾರ್ಯದರ್ಶಿಗಳು, ವಿರೋಧ ಪಕ್ಷದ ನಾಯಕರೊಂದಿಗೆ ಸಭೆ ನಡೆಸಲಾಯಿತು.



45,000 ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ಶಿವಾಲಿಕ್ ಹಡಗು ಗುಜರಾತ್‌ನ ಮುಂದ್ರಾ ಬಂದರಿಗೆ ಬಂದು ತಲುಪಲಿದೆ. ಈ ಬಗ್ಗೆ ಮಾಹಿತಿ ನೀಡಿದ್ದ ಬಂದರು, ಹಡಗು ಮತ್ತು ಜಲಮಾರ್ಗಗಳ ಸಚಿವಾಲಯ, ಸುಮಾರು 92,700 ಮೆಟ್ರಿಕ್ ಟನ್ ಎಲ್‌ಪಿಜಿ ಹೊತ್ತ ನಂದಾ ದೇವಿ ಮತ್ತು ಶಿವಾಲಿಕ್ ಎಂಬ ಎರಡು ಹಡಗುಗಳು ಹಾರ್ಮುಜ್ ಜಲಸಂಧಿಯನ್ನು ದಾಟಿ ಭಾರತಕ್ಕೆ ಬರುತ್ತಿವೆ. ಶಿವಾಲಿಕ್ ಮಾರ್ಚ್ 16 ರಂದು ಮತ್ತು ನಂದಾ ದೇವಿ ಮಾರ್ಚ್ 17 ರಂದು ಆಗಮಿಸುವ ನಿರೀಕ್ಷೆಯಿದೆ ಎಂದು ತಿಳಿಸಿತ್ತು.

## ಸ್ಪೀಕರ್ ಗರಂ: ಅಧಿಕಾರಿಗಳಿಗೆ ನೋಟೀಸ್??

ಬೆಂಗಳೂರು: ಶಾಸಕರು ಕೇಳಿದ ಪ್ರಶ್ನೆಗಳಿಗೆ ಸಚಿವರು ಆಯಾ ಇಲಾಖೆಗಳಿಂದ ಸರಿಯಾಗಿ ಉತ್ತರ ನೀಡದೇ ಇದ್ದ ಮೇಲೆ ಯಾವ ಕಾರಣಕ್ಕೆ ಸದನ ನಡೆಸಬೇಕು ಎಂದು ಅಸಮಾಧಾನ ವ್ಯಕ್ತಪಡಿಸಿದ ಸಭಾಧ್ಯಕ್ಷ ಯು.ಟಿ.ಖಾದರ್ ಕಲಾಪವನ್ನು ಮುಂದೂಡಿ ಹೊರ ನಡೆದ ಅಪರೂಪದ ಪ್ರಸಂಗ ವಿಧಾನಸಭೆಯಲ್ಲಿ ಜರುಗಿತು.

ವಿಧಾನಸಭಾಧ್ಯಕ್ಷರ ಪೀಠಕ್ಕೆ ಅಗೌರವ ತೋರಿದ ಸರ್ಕಾರದ ಧೋರಣೆಗೆ ಬೇಸತ್ತು ಸದನದಿಂದ ಹೊರ ನಡೆದಿರುವುದು ಭಾರೀ ಚರ್ಚೆಗೆ ಕಾರಣವಾಗಿದೆ.

ಪ್ರಶ್ನೋತ್ತರದ ಬಳಿಕ ಲಿಖಿತವಾಗಿ ಉತ್ತರ ಮಂಡಿಸುವ 230 ಪ್ರಶ್ನೆಗಳಿಗೆ ಸರ್ಕಾರದ ಪರವಾಗಿ ಗೃಹ ಸಚಿವ ಡಾ. ಜಿ ಪರಮೇಶ್ವರ್ 84 ಪ್ರಶ್ನೆಗಳಿಗೆ ಉತ್ತರ ಮಂಡಿಸಿದರು. ಬಿಜೆಪಿಯ ಸುರೇಶ್ ಕುಮಾರ್ ಮತ್ತು ವಿರೋಧ ಪಕ್ಷದ ನಾಯಕ ಆರ್. ಅಶೋಕ್ 250 ಪ್ರಶ್ನೆಗಳು ಎಂದರೆ ಕನಿಷ್ಠ 125 ಉತ್ತರಗಳಾದರೂ ಬರಬೇಕಿತ್ತು. ಆಗ ಶೇ.50ರಷ್ಟಾಗುತ್ತದೆ. ಆದರೆ ಇಲ್ಲಿ 84 ಯಾವ ಲೆಕ್ಕಕ್ಕೆ ಎಂದು ಆಕ್ಷೇಪಿಸಿದರು.

ಸಭಾಧ್ಯಕ್ಷರು ಇಂದು ನೀಡುವ ಎಚ್ಚರಿಕೆ ಸೇರಿದರೆ ಐದು ಬಾರಿ ಸರ್ಕಾರಕ್ಕೆ ಚಾಟಿ ಬೀಸಿದ್ದಾರೆ. ಆದರೆ ಸರ್ಕಾರ ಅದನ್ನು ಗಂಭೀರವಾಗಿ ತೆಗೆದುಕೊಂಡಿಲ್ಲ ಎಂದು ಆರ್. ಅಶೋಕ್ ತೀಕ್ಷ್ಣವಾಗಿ ಆಕ್ಷೇಪಿಸಿದರು.

ಸಭಾಧ್ಯಕ್ಷ ಯು.ಟಿ.ಖಾದರ್ ಮಧ್ಯ ಪ್ರವೇಶ ಮಾಡಿ, ಸರ್ಕಾರದ ಈ ಧೋರಣೆಗೆ ಪರಿಹಾರ ಕಂಡುಕೊಳ್ಳಬೇಕಿದೆ. ಈವರೆಗೂ ತಾವು ನಾಲ್ಕು ಬಾರಿ ಪೀಠದಿಂದ ಸ್ಪಷ್ಟ ಆದೇಶ ನೀಡಿದರೂ ಪರಿಸ್ಥಿತಿ ಸುಧಾರಣೆಯಾಗಿಲ್ಲ ಎಂದಾದರೆ, ಇದನ್ನು ಹಗುರವಾಗಿ ತೆಗೆದುಕೊಳ್ಳಲಾಗುವುದಿಲ್ಲ ಎಂದರು.

ಮೂರು ತಿಂಗಳಿಗೊಮ್ಮೆ ಅಧಿವೇಶನ ನಡೆಸುವುದು ಶಾಸಕರು ತಮ ಸಮಸ್ಯೆಗಳನ್ನು ಚರ್ಚಿಸಲಿಕ್ಕಾಗಿ. ಇಲ್ಲಿ



ಎಲ್ಲರೂ, ಎಲ್ಲಾ ಪಕ್ಷದವರು ಪ್ರಶ್ನೆಗಳನ್ನು ಕೇಳುತ್ತಾರೆ. ಪ್ರತಿದಿನ 15 ಪ್ರಶ್ನೆಗಳನ್ನು ಮಾತ್ರ ಚುಕ್ಕೆ ಗುರುತು ಎಂದು ಪರಿಗಣಿಸಿ ಇಲ್ಲಿ ಚರ್ಚೆ ಮಾಡಲು ಅವಕಾಶ ನೀಡಲಾಗುತ್ತದೆ.

ಉಳಿದ ಪ್ರಶ್ನೆಗಳನ್ನು ಚುಕ್ಕೆ ರಹಿತ ಎಂದು ಪರಿಗಣಿಸಿ ಲಿಖಿತ ಉತ್ತರ ನೀಡಲಾಗುವುದು. ಗಮನ ಸೆಳೆಯುವ ಸೂಚನೆಯಡಿಯ 15ಕ್ಕಿಂತ ಹೆಚ್ಚು ಸದಸ್ಯರ ಅರ್ಜಿಗಳನ್ನು ಪರಿಗಣಿಸಬಾರದು ಎಂದು ಸಚಿವರು ಹೇಳುತ್ತಾರೆ. ಬೆಳಗ್ಗೆ ನಿಗದಿತ ಸಮಯಕ್ಕೆ ಕಲಾಪ ಆರಂಭಿಸಲು ಕೊರತೆ ಇರುತ್ತದೆ.

ಈ ರೀತಿಯಾದರೆ ಸದನ ನಡೆಸಲಾಗುವುದಿಲ್ಲ. ಈ ಅಧಿವೇಶನಗಳು ನಡೆಯುವುದು ಸಚಿವರಿಗಾಗಿ ಅಲ್ಲ ಶಾಸಕರಿಗಾಗಿ ಎಂದು ಸಭಾಧ್ಯಕ್ಷರು ಒತ್ತಿ ಹೇಳಿದರು.

ಲಿಖಿತವಾಗಿ ಮಂಡಿಸಬೇಕಾದ ಉತ್ತರಗಳನ್ನು ಕಡೆಗಣಿಸುತ್ತಿರುವುದು ಸರಿಯಲ್ಲ. ಸಚಿವರು ಮತ್ತು ಆಯಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು ತಮ ಬಳಿ ಬಂದು ಸಮಸ್ಯೆಯ ಬಗ್ಗೆ ಸ್ಪಷ್ಟ ವಿವರಣೆ ನೀಡಿದ ಹೊರತು, ತಾವು ಸದನ ನಡೆಸುವುದಿಲ್ಲ ಎಂದು ಹೇಳಿ ಸಭಾಧ್ಯಕ್ಷ ಯು.ಟಿ.ಖಾದರ್ ಕಲಾಪವನ್ನು ಮುಂದೂಡಿ ಹೊರ ನಡೆದರು.

ಆಡಳಿತ ಪಕ್ಷದವರೇ ಆಗಿರುವ ಸಭಾಧ್ಯಕ್ಷರು ಈ ರೀತಿ ಕಲಾಪವನ್ನು ಮುಂದೂಡಿರುವುದು ಸರ್ಕಾರಕ್ಕೆ ಭಾರಿ ಮುಜುಗರ ತಂದಿದೆ. ಸಾಮಾನ್ಯವಾಗಿ ವಿರೋಧಪಕ್ಷದವರು ಗದ್ದಲ ಅಥವಾ ಸದನ ನಡೆಯಲು ಸಾಧ್ಯವಿಲ್ಲದಂತಹ ಕೋಲಾಹಲದ ವಾತಾವರಣ ಇದ್ದಾಗ ಅಧಿವೇಶನ ಮುಂದೂಡಿಕೆಯಾಗುತ್ತದೆ. ಆದರೆ ಸರ್ಕಾರದ ವಿರುದ್ಧವೇ ಸ್ಪೀಕರ್ ಅವರು ಸಿಟ್ಟಾಗಿ ಅಧಿವೇಶನ ಮುಂದೂಡಿದ್ದು ಕರ್ನಾಟಕ ವಿಧಾನಸಭೆಯ ಇತಿಹಾಸದಲ್ಲೇ ನಮೂದಾಗಿದೆ.

ಈ ಮೊದಲು ಕಾಗೋಡು ತಿಮಪ್ಪ ಸ್ಪೀಕರ್ ಆಗಿದ್ದಾಗ ಈ ರೀತಿ ನಡೆದಿತ್ತು ಎನ್ನಲಾಗಿದೆ. ಸ್ಪೀಕರ್ ಆಗಿದ್ದ ರಮೇಶ್ ಕುಮಾರ್ ಅವರು ಸಹ ಒಮ್ಮೆ ಕಾರಣ ನೀಡದೇ ಅಧಿವೇಶನದಿಂದ ಎದ್ದು ಹೊರ ನಡೆದಿದ್ದರು.

ಸಾಮಾನ್ಯವಾಗಿ ಸಭಾಧ್ಯಕ್ಷರು ಸರ್ಕಾರದ ಲೋಪಗಳನ್ನು ಸರಿದೂಗಿಸಿಕೊಂಡು ಅಧಿವೇಶನವನ್ನು ನಡೆಸುತ್ತಾರೆ. ವಿರೋಧ ಪಕ್ಷದವರು ಸ್ಪೀಕರ್ ಅವರು ನಿಷ್ಪಕ್ಷಪಾತವಾಗಿರಬೇಕು ಸರ್ಕಾರವನ್ನು ಸಹಿಸಬಾರದು ಎಂದು ಪದೇ ಪದೇ ಹೇಳುತ್ತಿರುತ್ತಾರೆ. ಈ ಬಾರಿ ವಿರೋಧ ಪಕ್ಷದ ನಾಯಕರು ಪ್ರಶ್ನೋತ್ತರದ ಸಂಬಂಧ ಪಟ್ಟಂತೆ ಸರ್ಕಾರವನ್ನು ಕಟು ಶಬ್ದಗಳಲ್ಲಿ ತೆಗೆದುಕೊಂಡಿದ್ದು ತರಾಟೆಗೆ ತೆಗೆದುಕೊಂಡಿದ್ದರು.

ಆದರೆ ಸ್ಪೀಕರ್ ಅವರು ಒಂದು ಹೆಜ್ಜೆ ಮುಂದೆ ಹೋಗಿ ಕಲಾಪವನ್ನೇ ಮುಂದೂಡುವ ಮೂಲಕ ಹೊಸ ಪರಂಪರೆಗೆ ನಾಂದಿ ಹಾಡಿದ್ದಾರೆ. ಇದು ಸರ್ಕಾರಕ್ಕೆ ತೀವ್ರ ಮುಜುಗರ ಉಂಟುಮಾಡಿದೆ.

## ಅಮೆರಿಕಾ ಜೊತೆ ಚರ್ಚೆ ಇಲ್ಲ: ಭಾರತ

ನವದೆಹಲಿ: ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ, ಹಾರ್ಮುಜ್ ಜಲಸಂಧಿಯ ಮೂಲಕ ವ್ಯಾಪಾರಿ ಹಡಗುಗಳ ಸುರಕ್ಷಿತ ಸಾಗಣೆಯನ್ನು ಖಚಿತಪಡಿಸಿಕೊಳ್ಳಲು ನೌಕಾ ಪಡೆಗಳನ್ನು ನಿಯೋಜಿಸುವ ಕುರಿತು ಅಮೆರಿಕದೊಂದಿಗೆ ತಾನು ದ್ವಿಪಕ್ಷೀಯ ಚರ್ಚೆಗಳನ್ನು ನಡೆಸಿಲ್ಲ ಎಂದು ಭಾರತ ಸೋಮವಾರ ಹೇಳಿದೆ.

ಚೀನಾ, ಫ್ರಾನ್ಸ್, ಜಪಾನ್, ದಕ್ಷಿಣ ಕೊರಿಯಾ ಮತ್ತು ಯುಕೆ ಸೇರಿದಂತೆ ದೇಶಗಳು ಆಯಕಟ್ಟಿನ ಮಹತ್ವದ ಹಡಗು ಮಾರ್ಗವನ್ನು "ಸುರಕ್ಷಿತ ಮತ್ತು ಮುಕ್ತ"ವಾಗಿಡಲು ಯುದ್ಧನೌಕೆಗಳನ್ನು ಕಳುಹಿಸುವಂತೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕರೆ ನೀಡಿರುವ ಕುರಿತಾದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಮಾಧ್ಯಮಗೋಷ್ಠಿಯಲ್ಲಿ ಈ ಹೇಳಿಕೆ ನೀಡಿದ್ದಾರೆ.

'ಈ ನಿರ್ದಿಷ್ಟ ವಿಷಯವನ್ನು ಹಲವಾರು ದೇಶಗಳು ಚರ್ಚಿಸುತ್ತಿರುವ ಬಗ್ಗೆ ನಮಗೆ ತಿಳಿದಿದೆ. ನಾವು ಇನ್ನೂ ದ್ವಿಪಕ್ಷೀಯ ಸನ್ನಿವೇಶದಲ್ಲಿ ಚರ್ಚಿಸಿಲ್ಲ. ಈ ವಿಷಯದ ಕುರಿತು ಭಾರತವು ಬಹು ಪಾಲುದಾರರೊಂದಿಗೆ ಚರ್ಚೆಗಳನ್ನು ಮುಂದುವರಿಸಲಿದೆ' ಎಂದು ಜೈಸ್ವಾಲ್ ಹೇಳಿದರು.

ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ಹಿಂದೆ ಫೈನಾನ್ಷಿಯಲ್ ಟೈಮ್ಸ್ ಜೊತೆ ಮಾತನಾಡುವಾಗ, 'ಭಾರತವು ಭಾರತೀಯ ಧ್ವಜ ಹೊಂದಿರುವ ಹಡಗುಗಳ ಸಾಗಣೆಗೆ ಇರಾನ್‌ನೊಂದಿಗೆ "ಒಪ್ಪಂದ" ಹೊಂದಿಲ್ಲ. ಈ ನಿರ್ದಿಷ್ಟ ವಿಷಯವನ್ನು ಹಲವಾರು ದೇಶಗಳು ಚರ್ಚಿಸುತ್ತಿರುವ ಬಗ್ಗೆ ನಮಗೆ ತಿಳಿದಿದೆ. 'ಈ ನಿರ್ದಿಷ್ಟ ವಿಷಯವನ್ನು ಹಲವಾರು ದೇಶಗಳು ಚರ್ಚಿಸುತ್ತಿರುವ ಬಗ್ಗೆ ನಮಗೆ ತಿಳಿದಿದೆ. ನಾವು ಇನ್ನೂ ದ್ವಿಪಕ್ಷೀಯ ಸನ್ನಿವೇಶದಲ್ಲಿ ಚರ್ಚಿಸಿಲ್ಲ. ಈ ವಿಷಯದ ಕುರಿತು ಭಾರತವು ಬಹು ಪಾಲುದಾರರೊಂದಿಗೆ ಚರ್ಚೆಗಳನ್ನು ಮುಂದುವರಿಸಲಿದೆ' ಎಂದು ಜೈಸ್ವಾಲ್ ಹೇಳಿದರು.

ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ಹಿಂದೆ ಫೈನಾನ್ಷಿಯಲ್ ಟೈಮ್ಸ್ ಜೊತೆ ಮಾತನಾಡುವಾಗ, 'ಭಾರತವು ಭಾರತೀಯ ಧ್ವಜ ಹೊಂದಿರುವ ಹಡಗುಗಳ ಸಾಗಣೆಗೆ ಇರಾನ್‌ನೊಂದಿಗೆ "ಒಪ್ಪಂದ" ಹೊಂದಿಲ್ಲ. ಈ ನಿರ್ದಿಷ್ಟ ವಿಷಯವನ್ನು ಹಲವಾರು ದೇಶಗಳು ಚರ್ಚಿಸುತ್ತಿರುವ ಬಗ್ಗೆ ನಮಗೆ ತಿಳಿದಿದೆ.ವಿದೇಶಾಂಗ ಸಚಿವ ಎಸ್. ಜೈಶಂಕರ್ ಈ ಹಿಂದೆ ಫೈನಾನ್ಷಿಯಲ್ ಟೈಮ್ಸ್ ಜೊತೆ ಮಾತನಾಡುವಾಗ, 'ಭಾರತವು ಭಾರತೀಯ ಧ್ವಜ ಹೊಂದಿರುವ ಹಡಗುಗಳ ಸಾಗಣೆಗೆ ಇರಾನ್‌ನೊಂದಿಗೆ "ಒಪ್ಪಂದ" ಹೊಂದಿಲ್ಲ. ಈ ನಿರ್ದಿಷ್ಟ ವಿಷಯವನ್ನು ಹಲವಾರು ದೇಶಗಳು ಚರ್ಚಿಸುತ್ತಿರುವ ಬಗ್ಗೆ ನಮಗೆ ತಿಳಿದಿದೆ.

'ನಾವು ಇನ್ನೂ ದ್ವಿಪಕ್ಷೀಯ ಸನ್ನಿವೇಶದಲ್ಲಿ ಚರ್ಚಿಸಿಲ್ಲ. ಈ ವಿಷಯದ ಕುರಿತು ಭಾರತವು ಬಹು ಪಾಲುದಾರ ರೊಂದಿಗೆ ಚರ್ಚೆಗಳನ್ನು ಮುಂದುವರಿಸಲಿದೆ. ಆದರೆ ಟೆಹ್ರಾನ್‌ನೊಂದಿಗೆ ಸುರಕ್ಷಿತ ಸಾಗಣೆಯ ಕುರಿತು ಮಾತುಕತೆಗಳು "ನಡೆಯುತ್ತಿವೆ" ಮತ್ತು ಅದು "ಫಲಿತಾಂಶಗಳನ್ನು ನೀಡುತ್ತಿವೆ" ಎಂದಿದ್ದರು.

## ಮಂತ್ರಿಗೆ ಇಡಿ ಶಾಕ್...!

ಬೆಂಗಳೂರು: ಬೆಂಗಳೂರು ನಗರದ ಪ್ರಸಿದ್ಧ ರಿಯಲ್ ಎಸ್ಟೇಟ್ ಸಂಸ್ಥೆಯಾದ ಮಂತ್ರಿ ಡೆವೆಲಪರ್ಸ್ ಮೇಲೆ ಜಾರಿ ನಿರ್ದೇಶನಾಲಯ ಅಧಿಕಾರಿಗಳು ದಾಳಿ ನಡೆಸಿ ದಾಖಲೆಗಳ ಪರಿಶೀಲನೆ ನಡೆಸುತ್ತಿದ್ದಾರೆ.

ಅಕ್ರಮ ಹಣ ವರ್ಗಾವಣೆ ಆರೋಪದ ಹಿನ್ನೆಲೆ ಇಡಿ ಅಧಿಕಾರಿಗಳು ಸಂಸ್ಥೆಯ ಕಚೇರಿ ಹಾಗೂ ಸಂಸ್ಥಾಪಕ ಸುನಿಲ್ ಮಂತ್ರಿ ನಿವಾಸಗಳಲ್ಲಿ ಶೋಧ ನಡೆಸಿದ್ದಾರೆ.

1999ರಲ್ಲಿ ಸ್ಥಾಪನೆಯಾದ ಮಂತ್ರಿ ಡೆವಲಪರ್ಸ್ ಸಂಸ್ಥೆ ಬೆಂಗಳೂರು ಕೇಂದ್ರ ಕಚೇರಿಯೊಂದಿಗೆ ಚೆನ್ನೈ, ಹೈದರಾಬಾದ್ ಮತ್ತು ಪುಣೆ ನಗರಗಳಲ್ಲಿ ಕಾರ್ಯನಿರ್ವಹಿಸುತ್ತಿದೆ.

ವಸತಿ, ವಾಣಿಜ್ಯ, ರಿಟೇಲ್ ಹಾಗೂ ಇತರೆ ಕ್ಷೇತ್ರಗಳಲ್ಲಿ ಹಲವು ಯೋಜನೆಗಳನ್ನು ಸಂಸ್ಥೆ ಕೈಗೊಂಡಿದೆ. ಇದೀಗ ಬೆಂಗಳೂರಿನ ವಿಠ್ಠಲ ಮಲ್ಯ ರಸ್ತೆಯಲ್ಲಿರುವ ಕಚೇರಿ ಹಾಗೂ ಸಂಸ್ಥಾಪಕರ ಮನೆ ಮೇಲೂ ದಾಳಿ ನಡೆಸಿದೆ.

ಬೆಳಗ್ಗೆ ದೆಹಲಿ ಕಚೇರಿಯಿಂದ ಬಂದ ಸುಮಾರು 10ಕ್ಕೂ ಹೆಚ್ಚು ಅಧಿಕಾರಿಗಳು ಆರು ವಾಹನಗಳಲ್ಲಿ ಆಗಮಿಸಿ ಕಚೇರಿ ಹಾಗೂ ಸಂಬಂಧಿತ ಸ್ಥಳಗಳಲ್ಲಿ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ.

## ಮಗುಚಿಬಿದ್ದ ಗ್ಯಾಸ್‌ಟ್ಯಾಂಕರ್

ಉಡುಪಿ: ಮಧ್ಯಪ್ರಾಚ್ಯ ಯುದ್ಧದಿಂದ ಉಂಟಾಗಿರುವ ಗ್ಯಾಸ್ ಅಭಾವದ ಹೊತ್ತಲ್ಲೇ ಉಡುಪಿಯ ಕಟಪಾಡಿಯಲ್ಲಿ ಗ್ಯಾಸ್ ಟ್ಯಾಂಕರ್ ಮಗುಚಿ ಬಿದ್ದಿದೆ. ಮಂಗಳೂರಿನಿಂದ ಉಡುಪಿ ಕಡೆಗೆ ಸಾಗುತ್ತಿದ್ದ ಗ್ಯಾಸ್ ಟ್ಯಾಂಕರ್ ಪಲ್ಟಿಯಾಗಿದೆ.



ಟ್ಯಾಂಕರ್ ಎಲ್‌ಪಿಜಿ ಗ್ಯಾಸ್ ಸಾಗಾಟ ಮಾಡುತ್ತಿತ್ತು. ಕಾಮಗಾರಿ ನಡೆಯುತ್ತಿರುವ ರಾಷ್ಟ್ರೀಯ ಹೆದ್ದಾರಿಯಲ್ಲೇ ಟ್ಯಾಂಕರ್ ಮಗುಚಿ ಬಿದ್ದಿದೆ. ಪರಿಣಾಮ ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಸಂಚಾರ ಅಸ್ತವ್ಯಸ್ತವಾಯಿತು.

ಸ್ಥಳಕ್ಕೆ ಧಾವಿಸಿದ ಅಗ್ನಿಶಾಮಕ ಸಿಬ್ಬಂದಿ, ಟ್ಯಾಂಕರ್‌ನಲ್ಲಿ ಸೋರಿಕೆ ಇದೆಯೇ ಎಂಬ ಬಗ್ಗೆ ಪರಿಶೀಲನೆ ನಡೆಸಿದರು. ಪಲ್ಟಿಯಾದ ಟ್ಯಾಂಕರ್‌ನಲ್ಲಿ ಅನಿಲ ಸೋರಿಕೆ ತಡೆಯಲು ನಿರಂತರ ನೀರು ಹಾಯಿಸಿದರು.

ಮಂಗಳೂರಿನಿಂದ ಇನ್ನೊಂದು ಟ್ಯಾಂಕರ್ ಬಂದ ಬಳಿಕ ಗ್ಯಾಸ್ ಶಿಫ್ಟ್ ಕಾರ್ಯ ಆರಂಭಿಸಲಾಗಿದೆ.

## ದರ್ಶನ್ ಕುರಿತ ಚಿತ್ರಕ್ಕೆ ಸಂಕಷ್ಟ

ಬೆಂಗಳೂರು: ಬಾಸ್ ಚಿತ್ರತಂಡಕ್ಕೆ ಇದೀಗ ಸಂಕಷ್ಟ ಎದುರಾಗಿದೆ. ಇತ್ತೀಚೆಗಷ್ಟೇ ಚಿತ್ರದ ಟೀಸರ್ ಬಿಡುಗಡೆಯಾಗಿದ್ದು ಈ ಸಂಬಂಧ ನಟ ದರ್ಶನ್ ಪರ ವಕೀಲರು ದೂರು ದಾಖಲಿಸಿದ್ದಾರೆ. ರೇಣುಕಾಸ್ವಾಮಿ ಕೊಲೆ ಪ್ರಕರಣದ ಕಥಾಹಂದರ ಹೊಂದಿರುವ 'ಬಾಸ್' ವಿರುದ್ಧ ಪ್ರಕರಣ ಇನ್ನೂ ನ್ಯಾಯಾಲಯದಲ್ಲಿದೆ. ಸತ್ಯಾಸತ್ಯತೇ ತಿಳಿಯದೇ ಸಿನಿಮಾ ಮೂಲಕ ಘಟನೆಯನ್ನು ವೈಭವೀಕರಿಸುವುದು ಸರಿಯಲ್ಲ ಎಂದು ದರ್ಶನ್ ಪರ ವಕೀಲರು ವಾದಿಸಿದರು. ನೈಜ ಘಟನೆಗಳನ್ನು ಆಧರಿಸಿ ಚಿತ್ರ ನಿರ್ಮಾಣವಾಗಿದೆ ಎನ್ನಲಾದ ಬಾಸ್ ಚಿತ್ರದ ಬಿಡುಗಡೆಗೆ ಈಗ ಕಾನೂನು ಸಂಕಷ್ಟ ಎದುರಾಗಿದೆ.

ಭಾರತ ಸಾರಥಿ
17/03/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಸ್ಪ್ರಿಂಗ್ ರೆಡಿನೆಸ್ ಇಂಡೆಕ್ಸ್ ಬಿಡುಗಡೆ

ಬೆಂಗಳೂರು

ಕ್ಲೂಕ್ ಭಾರತೀಯ ಪ್ರಯಾಣಿಕರು ಹೇಗೆ ಈ ವಸಂತ ಋತುವಿನಲ್ಲಿ ಜಪಾನ್ ಮತ್ತು ದಕ್ಷಿಣ ಕೊರಿಯಾಗಳಿಗೆ ಪ್ರಯಾಣ ಮಾಡುತ್ತಾರೆ ಎಂಬ ಸ್ಪ್ರಿಂಗ್ ರೆಡಿನೆಸ್ ಇಂಡೆಕ್ಸ್ ಬಿಡುಗಡೆ ಮಾಡಿದೆ.

ಇದು ಒಂಬತ್ತು ಏಷ್ಯಾ ಮಾರುಕಟ್ಟೆಗಳಲ್ಲಿ 900 ಪ್ರಯಾಣಿಕರಿಂದ ಪಡೆದ ಒಳನೋಟಗಳನ್ನು ಆಧರಿಸಿದ್ದು ಅದರಲ್ಲಿ ಶೇ.78ರಷ್ಟು ಜಪಾನ್ ಅವರ ಆದ್ಯತೆ ಎಂದು ಹೆಸರಿಸಿದ್ದು ನಂತರ ದಕ್ಷಿಣ ಕೊರಿಯಾಗೆ ಶೇ.52ರಷ್ಟು ಮಂದಿ ಹೆಸರಿಸಿದ್ದಾರೆ.

ಭಾರತದ ಪ್ರಯಾಣಿಕರಿಗೆ ಈ ಮಾರ್ಚ್-ಏಪ್ರಿಲ್ ಪ್ರಯಾಣಕ್ಕೆ ಈ ಋತುವಿನ ಆಕರ್ಷಣೆಗಳು ಕಾರಣವಾಗಿದ್ದು ಅದು ನೈಸರ್ಗಿಕ ನೋಟಗಳು, ಸಾಂಸ್ಕೃತಿಕ ಕ್ಷಣಗಳು ಮತ್ತು ಸೀಮಿತ ಸಮಯದ ಅವಕಾಶಗಳನ್ನು ಹೊಂದಿದ ಅನುಭವಪೂರ್ವಕ ಪ್ರಯಾಣದತ್ತ ಬದಲಾವಣೆಯಾಗುತ್ತಿದೆ. ಇದು ಕ್ಲೂಕ್ ಪ್ಲಾಟ್ ಫಾರಂನಲ್ಲಿ ಡಿಸೆಂಬರ್ 2025ರಿಂದ ಫೆಬ್ರವರಿ 2026ರವರೆಗೆ "ಚೆರ್ರಿ ಬ್ಲಾಸಂ" ಮತ್ತು "ಸಕುರಾ" ಎಂಬ ಹುಡುಕಾಟ ಶೇ.57ರಷ್ಟು ಹೆಚ್ಚಾಗಿರುವುದು ಕಂಡು ಬಂದಿದ್ದು ಇದು ಈ ಋತುವಿನ ಪ್ರಯಾಣಕ್ಕೆ ಸದೃಢ ಆವೇಗ ತಂದಿದೆ.

"ಇಂದು ನಿಜ ಜೀವನದ ಅನುಭವಗಳು ಮತ್ತು ಅನ್ವೇಷಣೆಯ ಕ್ಷಣಗಳು ಹೇಗೆ ಮತ್ತು ಏಕೆ ಜನರು ಪ್ರಯಾಣಿಸುತ್ತಾರೆ ಎನ್ನುವುದನ್ನು ರೂಪಿಸುತ್ತಿವೆ" ಎಂದು ಕ್ಲೂಕ್ ನ ಹೆಡ್ ಆಫ್ ಮಾರ್ಕೆಟಿಂಗ್ ಶಿವಂ ತ್ಯಾಗಿ ಹೇಳಿದರು. "ಚೆರ್ರಿ ಅರಳುವ ಋತುವು ಭಾರತೀಯ ಪ್ರಯಾಣಿಕರಿಗೆ ಜೀವಿತಕಾಲದಲ್ಲಿ ಒಮ್ಮೆ ದೊರಕುವ ಅವಕಾಶವಾಗಿದೆ. ನಾವು ಇಲ್ಲಿ ಕಾಣುತ್ತಿರುವುದು ತಾಣಗಳಿಗೆ ಬೇಡಿಕೆಯಲ್ಲ, ಬದಲಿಗೆ ಹೆಚ್ಚು ಅರ್ಥಪೂರ್ಣ ಪ್ರಯಾಣವಾಗಿಸುವ ಸಕಾಲಿಕ, ಋತು ಆಧರಿತ ಅನುಭವಗಳು" ಎನ್ನುತ್ತಾರೆ.

ಕ್ಲೂಕ್ ಫಲಿತಾಂಶಗಳ ಪ್ರಕಾರ ಭಾರತೀಯ ಪ್ರಯಾಣಿಕರು ಹೆಚ್ಚಿನ ಅನುಕೂಲ ಮತ್ತು ವಿಶ್ವಾಸದಿಂದ ವಸಂತಋತುವಿನ ಪ್ರವಾಸಗಳನ್ನು ಕೈಗೊಳ್ಳುತ್ತಿದ್ದಾರೆ, ಇದರಿಂದ ಪ್ರಾಯೋಗಿಕ ಯೋಜನೆಯೊಂದಿಗೆ ಋತು ಆಧರಿತ ಸ್ವಾಂಟೇನಿಟಿಯನ್ನು ಸಮತೋಲನಗೊಳಿಸಿದೆ.

## ವಾಸನ್ ಐ ಕೇರ್, ಜಯನಗರದಲ್ಲಿ ಮಹಿಳಾ ದಿನಾಚರಣೆ

ಬೆಂಗಳೂರು

ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಅಂಗವಾಗಿ ವಾಸನ್ ಐ ಕೇರ್ ಆಸ್ಪತ್ರೆ, ಜಯನಗರ ಶಾಖೆಯ ವತಿಯಿಂದ ಇಂದು ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಈ ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಜಯನಗರ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕಿ ಹಾಗೂ ಕರ್ನಾಟಕ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಮತಿ ಸೌಮ್ಯಾ ರೆಡ್ಡಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಮಹಿಳೆಯರ ಆರೋಗ್ಯದ ಜಾಗೃತಿ ಹೆಚ್ಚಿಸುವ ಉದ್ದೇಶದಿಂದ "ಗೋಲ್ಡ್ ಪ್ರಿವಿಲೇಜ್ ಕಾರ್ಡ್" ಎಂಬ ವಿಶೇಷ ಆರೋಗ್ಯ ಕಾರ್ಡ್ ಅನ್ನು ವಾಸನ್ ಐ ಕೇರ್ ಆಸ್ಪತ್ರೆ ಬಿಡುಗಡೆ ಮಾಡಿತು.

ಈ ಕಾರ್ಡ್ ಮೂಲಕ ಮಹಿಳೆಯರಿಗೆ ಕಡಿಮೆ ವೆಚ್ಚದಲ್ಲಿ ಕಣ್ಣಿನ ಚಿಕಿತ್ಸಾ ಸೇವೆಗಳನ್ನು ಒದಗಿಸುವುದು ಉದ್ದೇಶವಾಗಿದೆ.

ಕಾರ್ಯಕ್ರಮದಲ್ಲಿ ಡಾ. ಅಂಬೇಡ್ಕರ್ ಮಹಿಳಾ ಸಂಘದ ಅಧ್ಯಕ್ಷರು ಹಾಗೂ ಸದಸ್ಯರು, ಜೊತೆಗೆ ಹಲವು ಆಶಾ ಕಾರ್ಯಕರ್ತೆಯರು ಮತ್ತು ಸಂಘದ ಸದಸ್ಯರು ಭಾಗವಹಿಸಿದ್ದರು.




## ಪೋಕೋ ಇಂಡಿಯಾದಿಂದ ಪೋಕೋ ಸಿ85ಎಕ್ಸ್ ಐದು ಜಿ ಸ್ಮಾರ್ಟ್‌ಫೋನ್ ಬಿಡುಗಡೆ

**ಭಾರತ:** ಪ್ರತಿನಿತ್ಯದ ಬಳಕೆದಾರರ ಅಗತ್ಯಗಳನ್ನು ಗಮನದಲ್ಲಿಟ್ಟುಕೊಂಡು ಶಕ್ತಿಶಾಲಿ ಕಾರ್ಯಕ್ಷಮತೆ, ದೀರ್ಘಕಾಲ ಬಾಳಿಕೆ ಬರುವ ಬ್ಯಾಟರಿ ಹಾಗೂ ನಯವಾದ ಡಿಸ್ಪ್ಲೇ ಹೊಂದಿರುವ ಪೋಕೋ ಸಿ85ಎಕ್ಸ್ ಐದು ಜಿ ಸ್ಮಾರ್ಟ್‌ಫೋನ್ ಅನ್ನು ಪೋಕೋ ಇಂಡಿಯಾ ಬಿಡುಗಡೆ ಮಾಡಿದೆ.

ವಿದ್ಯಾರ್ಥಿಗಳು, ಮೊದಲ ಬಾರಿಗೆ ಸ್ಮಾರ್ಟ್‌ಫೋನ್ ಖರೀದಿಸುವವರು ಹಾಗೂ ವಿಶ್ವಾಸಾರ್ಹ ಪ್ರತಿನಿತ್ಯದ ಕಾರ್ಯಕ್ಷಮತೆಯನ್ನು ಬಯಸುವ ಬಳಕೆದಾರರಿಗಾಗಿ ಈ ಫೋನ್ ವಿನ್ಯಾಸಗೊಳಿಸಲಾಗಿದೆ. ಸಮರ್ಥ ಹಾರ್ಡ್‌ವೇರ್ ಹಾಗೂ ದೀರ್ಘಾವಧಿಯ ಸಾಫ್ಟ್‌ವೇರ್ ಬೆಂಬಲದ ಸಂಯೋಜನೆಯೊಂದಿಗೆ ಈ ಸಾಧನವನ್ನು ಮಾರುಕಟ್ಟೆಗೆ ಪರಿಚಯಿಸಲಾಗಿದೆ.

ಪ್ರತಿನಿತ್ಯದ ಬಳಕೆಗಾಗಿ ವಿಶ್ವಾಸಾರ್ಹ ಕಾರ್ಯಕ್ಷಮತೆ ಪೋಕೋ ಸಿ85ಎಕ್ಸ್ ಐದು ಜಿ ಸ್ಮಾರ್ಟ್‌ಫೋನ್‌ನಲ್ಲಿ ಆರು ನ್ಯಾನೋಮೀಟರ್ ತಂತ್ರಜ್ಞಾನದಲ್ಲಿ ನಿರ್ಮಿತವಾಗಿರುವ ಶಕ್ತಿಶಾಲಿ ಆಕ್ಟಾ ಕೋರ್ ಪ್ರೊಸೆಸರ್ ಅಳವಡಿಸಲಾಗಿದೆ. ಇದು ಕಾರ್ಯಕ್ಷಮತೆ ಮತ್ತು ವಿದ್ಯುತ್ ಬಳಕೆಯನ್ನು ಸಮತೋಲನಗೊಳಿಸುವ ರೀತಿಯಲ್ಲಿ ವಿನ್ಯಾಸಗೊಳಿಸಲಾಗಿದೆ.

2.2 ಗಿಗಾಹರ್ಟ್ಜ್ ವೇಗದವರೆಗೆ ಕಾರ್ಯನಿರ್ವಹಿಸುವ ಎ78 ಕೋರ್ ಹಾಗೂ ಮಾಲಿ ಜಿ-57 ಜಿಪಿಯು ಹೊಂದಿರುವ ಈ ಸಾಧನವು ಬ್ರೌಸಿಂಗ್, ಸಾಮಾಜಿಕ ಜಾಲತಾಣ ಬಳಕೆ, ವೀಡಿಯೋ ಸ್ಟ್ರೀಮಿಂಗ್ ಹಾಗೂ ಸಾಮಾನ್ಯ ಗೇಮಿಂಗ್ ಕಾರ್ಯಗಳನ್ನು ಸುಗಮವಾಗಿ ನಿರ್ವಹಿಸಲು ಸಹಾಯ ಮಾಡುತ್ತದೆ.

ಈ ಸ್ಮಾರ್ಟ್‌ಫೋನ್ ನಾಲ್ಕು ಜಿಬಿ + ಅರವತ್ನಾಲ್ಕು ಜಿಬಿ ಮತ್ತು ನಾಲ್ಕು ಜಿಬಿ + ನೂರ ಇಪ್ಪತ್ತೆಂಟು ಜಿಬಿ ಸಂಗ್ರಹ ಸಾಮರ್ಥ್ಯದ ಆಯ್ಕೆಗಳಲ್ಲಿ ಲಭ್ಯವಿದೆ. ವೇಗವಾದ ಆಪ್ ಲೋಡಿಂಗ್ ಮತ್ತು ಸುಗಮ ಮಲ್ಟಿಟಾಸ್ಕಿಂಗ್ ಅನುಭವಕ್ಕಾಗಿ ಇದರಲ್ಲಿ ಎಲ್‌ಪಿಡಿಡಿಆರ್ ನಾಲ್ಕು ಎಕ್ಸ್ ಮೆಮೊರಿ ಹಾಗೂ ಯುಎಫ್‌ಎಸ್ ಎರಡು ಪಾಯಿಂಟ್ ಎರಡು ಸ್ಟೋರೇಜ್ ಬಳಸಲಾಗಿದೆ.

ಇದರ ಜೊತೆಗೆ, ಫೋಟೋಗಳು, ವೀಡಿಯೊಗಳು, ಆಪ್‌ಗಳು ಹಾಗೂ ಫೈಲ್‌ಗಳನ್ನು ಸಂಗ್ರಹಿಸಲು ಬಳಕೆದಾರರು ಸ್ಟೋರೇಜ್ ಅನ್ನು ಎರಡು ಟೆರಾಬೈಟ್ ವರೆಗೆ ವಿಸ್ತರಿಸಿಕೊಳ್ಳುವ ಅವಕಾಶ ಕೂಡ ಹೊಂದಿದ್ದಾರೆ.

## ಫೋನ್‌ಪೇಯಿಂದ ಬಯೋಮೆಟ್ರಿಕ್ ದೃಢೀಕರಣದೊಂದಿಗೆ ಯುಪಿಐ ಪಾವತಿ ಆರಂಭ

ಭಾರತದ ಪ್ರಮುಖ ಡಿಜಿಟಲ್ ಪಾವತಿ ವೇದಿಕೆಗಳಲ್ಲೊಂದಾದ ಫೋನ್‌ಪೇ ಇದೀಗ ಯುಪಿಐ ಪಾವತಿಗಳಿಗೆ ಬಯೋಮೆಟ್ರಿಕ್ ದೃಢೀಕರಣ ವ್ಯವಸ್ಥೆಯನ್ನು ಪರಿಚಯಿಸಿದೆ. ಈ ಹೊಸ ವ್ಯವಸ್ಥೆಯ ಮೂಲಕ ಗ್ರಾಹಕರು 5,000 ವರೆಗೆ ಇರುವ ವಹಿವಾಟುಗಳಿಗೆ ಯುಪಿಐ ಪಿನ್ ನಮೂದಿಸುವ ಬದಲಿಗೆ ಫಿಂಗರ್‌ಪ್ರಿಂಟ್ ಅಥವಾ ಮುಖ ಗುರುತಿಸುವಿಕೆಯಂತಹ ಬಯೋಮೆಟ್ರಿಕ್ ವಿಧಾನಗಳನ್ನು ಬಳಸಿ ಪಾವತಿಗಳನ್ನು ಸುಲಭವಾಗಿ ಮಾಡಬಹುದು.

ಈ ವೈಶಿಷ್ಟ್ಯವು ಬಳಕೆದಾರರಿಗೆ ವೇಗವಾದ ಮತ್ತು ಸುಗಮವಾದ "ಒನ್-ಟಚ್" ಪಾವತಿ ಅನುಭವವನ್ನು ನೀಡುವ ಉದ್ದೇಶದಿಂದ ರೂಪಿಸಲಾಗಿದೆ. ಸ್ಮಾರ್ಟ್‌ಫೋನ್‌ನಲ್ಲಿರುವ ಫಿಂಗರ್‌ಪ್ರಿಂಟ್ ಅಥವಾ ಫೇಸ್ ರಿಕಗ್ನಿಷನ್ ಬಳಸಿ ವಹಿವಾಟುಗಳನ್ನು ದೃಢೀಕರಿಸಲು ಸಾಧ್ಯವಾಗುವುದರಿಂದ ಪಿನ್ ನಮೂದಿಸುವ ಅಗತ್ಯ ಕಡಿಮೆಯಾಗುತ್ತದೆ.

ಡಿಜಿಟಲ್ ಪಾವತಿಗಳನ್ನು ಇನ್ನಷ್ಟು ಸುರಕ್ಷಿತ ಮತ್ತು ವಿಶ್ವಾಸಾರ್ಹವಾಗಿಸಲು ಈ ವೈಶಿಷ್ಟ್ಯವನ್ನು ಅಭಿವೃದ್ಧಿಪಡಿಸಲಾಗಿದೆ. ಜನಸಂದಣಿ ಇರುವ ಸಾರ್ವಜನಿಕ ಸ್ಥಳಗಳಲ್ಲಿಯೂ ಬಳಕೆದಾರರು ಸುರಕ್ಷಿತವಾಗಿ ಪಾವತಿಗಳನ್ನು ಮಾಡಲು ಇದರಿಂದ ನೆರವಾಗುತ್ತದೆ. ಇದರಿಂದ ಪಿನ್ ಯಾರಿಗಾದರೂ ಗೋಚರಿಸುವ ಅಥವಾ ದುರುಪಯೋಗವಾಗುವ ಸಾಧ್ಯತೆ ಕಡಿಮೆಯಾಗುತ್ತದೆ.

ಇದೇ ವೇಳೆ, ತಪ್ಪಾಗಿ ಪಿನ್ ನಮೂದಿಸುವುದು ಅಥವಾ ಪಿನ್ ಮರೆತುಹೋಗುವುದರಿಂದ ಉಂಟಾಗುವ ವಹಿವಾಟು ವೈಫಲ್ಯಗಳ ಸಂಖ್ಯೆಯೂ ಕಡಿಮೆಯಾಗಲಿದೆ ಎಂದು ಕಂಪನಿ ತಿಳಿಸಿದೆ.

ಬಯೋಮೆಟ್ರಿಕ್ ದೃಢೀಕರಣವು ಕೆಲವು ಸಂದರ್ಭಗಳಲ್ಲಿ ಕಾರ್ಯನಿರ್ವಹಿಸದಿದ್ದರೆ, ಬಳಕೆದಾರರು ತಕ್ಷಣವೇ ತಮ್ಮ ಸಾಮಾನ್ಯ ಯುಪಿಐ ಪಿನ್ ಬಳಸಿ ವಹಿವಾಟು ಪೂರ್ಣಗೊಳಿಸಲು ಅವಕಾಶ ನೀಡುವ ಫಾಲ್ಬ್ಯಾಕ್ ವ್ಯವಸ್ಥೆಯನ್ನೂ ಫೋನ್‌ಪೇ ಒದಗಿಸಿದೆ.

ಈ ವೈಶಿಷ್ಟ್ಯವನ್ನು ದೊಡ್ಡ ಪ್ರಮಾಣದಲ್ಲಿ ಪರಿಚಯಿಸಿದ ಮೊದಲ ಪ್ರಮುಖ ಡಿಜಿಟಲ್ ಪಾವತಿ ವೇದಿಕೆಗಳಲ್ಲಿ ಫೋನ್‌ಪೇ ಒಂದು ಎಂದು ಕಂಪನಿ ಹೇಳಿದೆ.

## ಚುನಾವಣಾ ದಿನಾಂಕ ಘೋಷಣೆಯ ನಂತರ ಕಠಿಣ ಮಾದರಿ ನೀತಿ ಜಾರಿ

ನವದೆಹಲಿ


ಚುನಾವಣಾ ವೇಳಾಪಟ್ಟಿ ಘೋಷಣೆಯ ಮರುದಿನವೇ, ನಾಲ್ಕು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದಲ್ಲಿ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಲು ಭಾರತೀಯ ಚುನಾವಣಾ ಆಯೋಗ ಹಲವಾರು ನಿರ್ದೇಶನಗಳನ್ನು ನೀಡಿದೆ. ಚುನಾವಣಾ ಪ್ರಚಾರದ ಜೊತೆಗೆ ಸರ್ಕಾರದ ಅಧಿಕೃತ ಕೆಲಸಗಳನ್ನು ಮಾಡುವಂತಿಲ್ಲ, ಸರ್ಕಾರದ ಸಾರಿಗೆ ವಾಹನ ಅಥವಾ ಸಿಬ್ಬಂದಿಯನ್ನು ಪ್ರಚಾರ ಉದ್ದೇಶಗಳಿಗಾಗಿ ಬಳಸುವಂತಿಲ್ಲ ಎಂದು ಆಯೋಗವು ಸಚಿವರಿಗೆ ತಾಕೀತು ಮಾಡಿದೆ. ಅಸ್ಸೋಂ, ಕೇರಳ, ಪುದುಚೇರಿ, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದ ವಿಧಾನಸಭೆ ಚುನಾವಣಾ ದಿನಾಂಕವನ್ನು ಭಾನುವಾರ ಪ್ರಕಟಿಸಿತು.

## ಫಾಸ್ಟ್ ಅಂಡ್ ಫ್ಯಾಬ್ಯುಲಸ್ ತಮ್ಮ ಛಾಪು ಮೂಡಿಸಲು ಸಜ್ಜು

ಬೆಂಗಳೂರು

ಏಪ್ರಿಲ್ 26ರ ಭಾನುವಾರ ನಡೆಯಲಿರುವ ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರಿನ 18ನೇ ಆವೃತ್ತಿಗಾಗಿ ವಿಶ್ವದ ಕೆಲವು ಅತ್ಯುತ್ತಮ ಓಟಗಾರರು ಬೆಂಗಳೂರಿಗೆ ಆಗಮಿಸಲಿದ್ದಾರೆ. ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್ ಒಟ್ಟು 210,000 ಯುಎಸ್ ಡಾಲರ್ ಬಹುಮಾನವನ್ನು ಹೊಂದಿದೆ. ಪುರುಷರ ಮತ್ತು ಮಹಿಳೆಯರ ವಿಭಾಗಗಳಲ್ಲಿ ವಿಜೇತರಿಗೆ 26,000 ಯುಎಸ್ ಡಾಲರ್ ಮತ್ತು ಕೋರ್ಸ್(ಕೂಟ) ದಾಖಲೆಯ ಪ್ರದರ್ಶನಗಳಿಗೆ ಗಮನಾರ್ಹ ಬೋನಸ್ ಬಹುಮಾನ ಇದೆ.

ಪುರುಷರ ವಿಭಾಗದಲ್ಲಿ ಉಗಾಂಡಾದ ಹಾರ್ಬರ್ಟ್



ಕಿಬೆಟ್ ಮುಖ್ಯ ಸ್ಥಾನದಲ್ಲಿದ್ದಾರೆ. ಎರಡು ವರ್ಷಗಳ ಹಿಂದೆ ವಿಶ್ವ ಜೂನಿಯರ್ ಅಥ್ಲೆಟಿಕ್ಸ್ ಚಾಂಪಿಯನ್ ಷಿಪ್ ನಲ್ಲಿ ಫೈನಲಿಸ್ಟ್(ರನ್ನರ್ ಅಪ್) ಆಗಿದ್ದ 20 ವರ್ಷದ ಕಿಬೆಟ್, ಈ ವರ್ಷದ ಆರಂಭದಲ್ಲಿ 10ಕೆಯಲ್ಲಿ ಮೊದಲ ಬಾರಿಗೆ ಕಾಣಿಸಿಕೊಂಡರು. ಸ್ಪ್ಯಾನಿಷ್ ಪಟ್ಟಣವಾದ ಕ್ಯಾಸ್ಟೆಲ್ಲನ್ ನಲ್ಲಿ ವಿಶ್ವದ ಪ್ರಮುಖರೊಂದಿಗೆ 26:39 ನಿಮಿಷಗಳಲ್ಲಿ ಜಯಗಳಿಸಿದ್ದರು. ಇದು ಪ್ರಾಸಂಗಿಕವಾಗಿ, ಕೂಟದ ಆರನೇ ವೇಗದ ಸಮಯವಾಗಿದೆ.

ಈ ವರ್ಷ 27 ನಿಮಿಷಗಳ ಅವಧಿಗೆ ಪ್ರವೇಶಿಸಿದ ಐವರು ಕ್ರೀಡಾಪಟುಗಳಲ್ಲಿ ಕಿಬೆಟ್ ಸಹ ಒಬ್ಬರಾಗಿದ್ದರೆ, ಬೆಂಗಳೂರು ಕೂಟ ದಾಖಲೆಗಿಂತ ವೇಗವಾಗಿ ವೈಯಕ್ತಿಕ ಅತ್ಯುತ್ತಮ ಪ್ರದರ್ಶನ ನೀಡಿದ ಒಟ್ಟು 11 ಕ್ರೀಡಾಪಟುಗಳು ಸಹ ಕಣದಲ್ಲಿದ್ದಾರೆ.

## ಕ್ರೀಡೆಯೆಂಬುದು ಸ್ಪರ್ಧೆಯಲ್ಲ: ಆರೋಗ್ಯ ಕಾಪಾಡುವ ಅಸ್ತ್ರ: ವಿಜಯನಗರ ಜಿಲ್ಲಾ ಪಂಚಾಯತ್ ಸಿಇಓ

**ಹೊಸಪೇಟೆ**

ಕ್ರೀಡೆಯೆಂದರೆ ಕೇವಲ ಸ್ಪರ್ಧೆಯಲ್ಲ, ಅದು ಆರೋಗ್ಯವನ್ನು ಕಾಪಾಡುವ ಒಂದು ಅಸ್ತ್ರವಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾ ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವತಿಯಿಂದ ಸೋಮವಾರ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಸಿಬ್ಬಂದಿಗಳಿಗೆ ಏರ್ಪಡಿಸಿದ ವಾರ್ಷಿಕ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ದೈನಂದಿನ ಕೆಲಸದ ಒತ್ತಡದಲ್ಲಿ ಕ್ರೀಡೆಯು ದೈಹಿಕ ಮತ್ತು ಮಾನಸಿಕ ಸದೃಢತೆಗೆ ಸಹಕಾರಿಯಾಗಿದೆ. ಆರೋಗ್ಯವಂತ ದೇಹದಲ್ಲಿ ಆರೋಗ್ಯಯುತವಾದ ಮನಸ್ಸು ನೆಲೆಸಿರುತ್ತದೆ ಎಂಬ ನಾಣ್ಣುಡಿಯಂತೆ ಸಿಬ್ಬಂದಿ ಸಹ ಸದೃಢವಾಗಿದ್ದಾಗ ಮಾತ್ರ ಸಾರ್ವಜನಿಕರಿಗೆ ಉತ್ತಮ ಸೇವೆ ನೀಡಲು ಸಾಧ್ಯ. ಕ್ರೀಡೆಯೆಂಬುವುದು ಸ್ಫೂರ್ತಿ, ಶಿಸ್ತು ಮತ್ತು ಆರೋಗ್ಯಕರ ಸ್ಪರ್ಧೆಯನ್ನು ತೋರಿಸುವ ಒಂದು ಉತ್ತಮ ವೇದಿಕೆಯಾಗಿದೆ ಎಂದರು.

ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಮಾತನಾಡಿ, ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ದಿನನಿತ್ಯ ಕೆಲಸದ ಒತ್ತಡದಲ್ಲಿ ದೈಹಿಕವಾಗಿ ಕುಗ್ಗಿರುತ್ತಾರೆ. ಕೆಲಸದ ಒತ್ತಡ ನಿವಾರಣೆ ಮಾಡುವ ನಿಟ್ಟಿನಲ್ಲಿ ಕ್ರೀಡೆ ಸಹಕಾರಿಯಾಗುವುದಲ್ಲದೇ ಪರಸ್ಪರ ಭಾಂದವ್ಯ ವೃದ್ದಿಸುತ್ತದೆ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಬೃಹತ್ ಮಟ್ಟದಲ್ಲಿ ವಾರ್ಷಿಕ ಕ್ರೀಡಾಕೂಟ ಆಯೋಜಿಸಲಾಗುವುದು ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೆ.ತಿಮ್ಮಪ್ಪ ಪ್ರತಿಜ್ಞಾ ವಿಧಿ ಬೋಧಿಸಿದರು.

ಇದೇ ಸಂದರ್ಭದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಗ್ರಾಮೀಣಾಭಿವೃದ್ಧಿ ಹಾಗೂ ಜಿಲ್ಲಾ ಪಂಚಾಯತ್ ವತಿಯಿಂದ ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಜಿಲ್ಲಾ ಪಂಚಾಯತ್ ಸಿಇಓ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜಾಹ್ನವಿ ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ ಚಾಲನೆ ನೀಡಿದರು.

ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ, ಮುಖ್ಯ ಯೋಜನಾಧಿಕಾರಿ ಜೆ.ಎಂ. ಅನ್ನದಾನಸ್ವಾಮಿ, ಲೆಕ್ಕಾಧಿಕಾರಿ ರುದ್ರಪ್ಪ ಅಕ್ಕಿ, ತಾಲ್ಲೂಕು ಪಂಚಾಯತಿ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಆಲಂ ಬಾಷಾ ಸೇರಿದಂತೆ ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್ ಸೇರಿದಂತೆ ಪಿ.ಆರ್.ಇ.ಡಿ, ಕೆ.ಆರ್.ಐ.ಡಿ.ಎಲ್ ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಇದ್ದರು.

## ಕಂಠೀರವ ಸ್ಟುಡಿಯೋಸ್ ಆವರಣದಲ್ಲಿ ಟಿ.ಎಸ್. ಕರಿಬಸಯ್ಯ ಪುತ್ಥಳಿ ಅನಾವಣಗೊಳಿಸಿ, ವಜ್ರಮಹೋತ್ಸವ ಆಚರಿಸಬೇಕು

ಬೆಂಗಳೂರು: ಬೆಂಗಳೂರಿನ ಕಂಠೀರವ ಸ್ಟುಡಿಯೋ ಸ್ಥಾಪನೆಯ ರೂವರಿ ತಿಪಟೂರಿನ ಟಿ.ಎಸ್ ಕರಿಬಸಯ್ಯ ಅವರ ಕೊಡುಗೆಯನ್ನು ಕನ್ನಡ ಚಿತ್ರೋದ್ಯಮ ಕಡೆಗಣಿಸಿದ್ದು, ಸ್ಟುಡಿಯೋ ಆವರಣದಲ್ಲಿ ಸಿದ್ಧವಾಗಿರುವ ಟಿ.ಎಸ್ ಕರಿಬಸಯ್ಯ ಪುತ್ಥಳಿಯನ್ನು ಈ ತಿಂಗಳ 18 ರಂದು ಅನಾವರಣಗೊಳಿಸಬೇಕು ಎಂದು ಕಲಾ ಕಂಠೀರವ ದಿ. ಟಿ.ಎಸ್. ಕರಿಬಸಯ್ಯ ಸೇವಾ ಟ್ರಸ್ಟ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಒತ್ತಾಯಿಸಿದ್ದಾರೆ.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಗೆ ಮನವಿ ಸಲ್ಲಿಸಿದೆ. ಮಂಡಳಿ ಪ್ರಧಾನ ಕಾರ್ಯದರ್ಶಿ ಸುಂದರ್ ರಾಜ್, ಕಾರ್ಯದರ್ಶಿ ಗಣೇಶ್ ಅವರಿಗೆ ಪೋಷಕ ಕಲಾವಿದರ ಸಂಘದ ಅಧ್ಯಕ್ಷ ಡಿಂಗ್ರಿ ನಾಗರಾಜ್ ನೇತೃತ್ವದಲ್ಲಿ ಮನವಿ ಸಲ್ಲಿಸಲಾಯಿತು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ತಿಂಗಳು 18 ಕ್ಕೆ ಕಂಠೀರವ ಸ್ಟುಡಿಯೋ ಸ್ಥಾಪನೆಯಾಗಿ 60 ವರ್ಷ ತುಂಬಲಿದೆ. ಜೊತೆಗೆ ಕರಿ ಬಸವಯ್ಯ ಅವರಿಗೆ 115 ವರ್ಷ ತುಂಬಲಿದ್ದು, ಅವರ ಜನ್ಮ ಶತಮಾನೋತ್ಸವನ್ನು ಸಹ ಆಚರಿಸಬೇಕು. ಕರಿಬಸಯ್ಯ ಕೊಡುಗೆ ಕನ್ನಡ ಚಿತ್ರರಂಗಕ್ಕೆ ಪರಿಚಯಿಸುವಂತಾಗಬೇಕು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಕಂಠೀರವ ಸ್ಟುಡಿಯೋ ವಜ್ರ ಮಹೋತ್ಸವ ಆಚರಿಸಬೇಕು. ವಾರ್ತಾ ಇಲಾಖೆ ಮುಖ್ಯಮಂತ್ರಿ ಸಿದ್ದರಾಮಯ್ಯ



ಅವರ ಸುಪರ್ದಿಯಲ್ಲಿದ್ದು, ಇಲಾಖೆಯಿಂದ ಈ ಬಗ್ಗೆ ಆಸಕ್ತಿ ವ್ಯಕ್ತವಾಗಿಲ್ಲ. ವಜ್ರ ಮಹೋತ್ಸವ ಆಚರಣೆಗೆ ನಿಷ್ಕಾಳಜಿ ವ್ಯಕ್ತವಾಗಿದೆ. ಚಲನಚಿತ್ರ ವಾಣಿಜ್ಯ ಮಂಡಳಿ ಮತ್ತಿತರ ಅಂಗ ಸಂಸ್ಥೆಗಳು ಒಗ್ಗೂಡಿ ವಜ್ರ ಮಹೋತ್ಸವ ಆಚರಿಸಬೇಕು ಎಂದು ಆಗ್ರಹಿಸಿದರು.

ಕನ್ನಡ ಚಿತ್ರ ರಂಗಕ್ಕೆ ಕರಿಬಸಯ್ಯ ಅಪಾರ ಕೊಡುಗೆ ನೀಡಿದ್ದಾರೆ. ಅಂತಹ ಮಹಾನ್ ವ್ಯಕ್ತಿಯ ಹೆಸರು ಇಂದು ಮರೆಯಾಗುತ್ತಿದ್ದು, ಅವರ ಜನ್ಮ ಶತಮಾನೋತ್ಸವ ಸಮಾರಂಭವನ್ನು ಸರಕಾರ ಹಾಗೂ ಕನ್ನಡ ಚಿತ್ರರಂಗ ಅದ್ದೂರಿ ಯಿಂದ ಆಚರಿಸಬೇಕು. ಕಲೆ, ಸಾಹಿತ್ಯ, ಸಂಸ್ಕೃತಿ, ಶಿಕ್ಷಣ, ಧಾರ್ಮಿಕ ಕ್ಷೇತ್ರಗಳಲ್ಲಿ ಅಪಾರ ಹೆಸರು ಗಳಿಸಿದೆ. ಅಂತಯೇ ರಂಗ ಭೂಮಿ ಹಾಗೂ ಚಿತ್ರರಂಗಕ್ಕೆ ನಗರದ ಟಿ.ಎಸ್.ಕರಿಬಸಯ್ಯ ಕೊಡುಗೆ ಅಪಾರವಾಗಿದೆ. ಕನ್ನಡ ಚಿತ್ರರಂಗ ಆರಂಭವಾದ ದಿನದಿಂದಲೂ 1966ರವರೆಗೆ ಕನ್ನಡ ಚಿತ್ರರಂಗದ ಸಿನಿಮಾಗಳ ಚಿತ್ರೀಕರಣಕ್ಕೆ ಮದರಾಸಿಗೆ ತೆರಳಬೇಕಿತ್ತು, ಆ ದಿನಗಳಲ್ಲಿ ನಮ್ಮ ರಾಜ್ಯದಲ್ಲಿ ಸುಸಜ್ಜಿತ ಸ್ಟುಡಿಯೋಗಳು ಇರಲಿಲ್ಲ. ಇಂತಹ ಸ್ಥಿತಿಯನ್ನು ಮನಗಂಡ ಕಲಾರಾಧಕ ಟಿ.ಎಸ್ ಕರಿಬಸಯ್ಯ ಅವರು ಗುಬ್ಬಿವೀರಣ್ಣನವರ ಜತೆಗೂಡಿ 1966 ರಲ್ಲಿ ಬೆಂಗಳೂರಿನಲ್ಲಿ ಕಂಠೀರವ ಸ್ಟುಡಿಯೊ ಸ್ಥಾಪಿಸಿ ಚಿತ್ರರಂಗದ ಅನೇಕ ಕಲಾವಿದರಿಗೆ ನಿರ್ದೇಶಕರಿಗೆ, ನಿರ್ಮಾಪಕರಿಗೆ, ಆಶ್ರಯದಾತರಾಗಿದ್ದರು ಎಂದರು.

ರಂಗಭೂಮಿ ಹಾಗೂ ಚಿತ್ರರಂಗದ ಏಳಿಗಾಗಿ ತಮ್ಮ ಜೀವನವನ್ನೇ ಮುಡಪಾಗಿಟ್ಟಿದ್ದ ಟಿ.ಎಸ್. ಕರಿಬಸಯ್ಯ ಅವರ ಕಲಾ ಸೇವೆಯನ್ನು ಇಂದು ಕನ್ನಡ ಚಿತ್ರರಂಗ ಮತ್ತು ಸರಕಾರ ಮರೆತಿರುವಂತೆ ಕಾಣುತ್ತಿದೆ. ಸ್ಟುಡಿಯೋ ಸರಕಾರದ ಸುಪರ್ದಿಗೆ ತೆಗೆದು ಕೊಂಡು ಹಲವು ವರ್ಷಗಳೇ ಕಳೆದಿದ್ದರೂ ಈವರೆಗೆ ಸರಕಾರವು ಕನಿಷ್ಠ ಟಿ.ಎಸ್.ಕರಿಬಸಯ್ಯ ಅವರ ಸ್ಮರಣೆ ಕಾರ್ಯಕ್ರಮ ಆಚರಿಸಿಲ್ಲ. ಇದೀಗ ಅವರ ಪುತ್ಥಳಿ ಸಿದ್ಧವಾಗಿದ್ದರೂ ಅನಾವರಣಗೊಳಿಸಿಲ್ಲ ಎಂದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ, ಉಪಾಧ್ಯಕ್ಷ ತಿಪಟೂರು ದಯಾನಂದ್ ಸಾಗರ್, ಕರ್ನಾಟಕ ಪೋಷಕರ ಕಲಾವಿದರ ಸಂಘದ ಅಧ್ಯಕ್ಷರು ಡಿಂಗ್ರಿ ನಾಗರಾಜು, ಕನ್ನಡ ರಾಜು ಮತ್ತಿತರರು ಉಪಸ್ಥಿತರಿದ್ದರು.

## ಅಂಗನವಾಡಿ ಕಾರ್ಯಕರ್ತೆರಿಂದ ವಿವಿಧ ಬೇಡಿಕೆ ಈಡೇರಿಕೆಗೆ ಅಗ್ರಹ

ಹಗರಿಬೊಮ್ಮನಹಳ್ಳಿ

ಪಟ್ಟಣದಲ್ಲಿ ಅಂಗನವಾಡಿ ಕಾರ್ಯಕರ್ತೆರಿಂದ ವಿವಿಧ ಬೇಡಿಕೆಯನ್ನು ಸದನದಲ್ಲಿ ಚರ್ಚಿಸುವಂತೆ ಶಾಸಕ ಕೆ. ನೇಮಿರಾಜ ನಾಯ್ಕ ಅವರಿಗೆ ಅಂಗನವಾಡಿ ನೌಕರರ ಸಂಘ ಹಾಗೂ (ಅಖಖಿಗ) ಸಂಘ ಇವರಿಂದ ಈಶ್ವರ ದೇವಸ್ಥಾನದಿಂದ ಶಾಸಕ ಪತ್ನಿ ವಾಣಿ ನೇಮಿರಾಜ್ ನಾಯ್ಕ್ ಇವರಿಗೆ ಮನವಿಯನ್ನು ಸಲ್ಲಿಸಿದರು.

ಮನವಿ ಸ್ವೀಕರಿಸಿ. ವಾಣಿ ನೇಮಿರಾಜ ನಾಯ್ಕ ಮಾತನಾಡಿ 118 ನೇ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಶುಭಾಶಯಗಳು

ನಿಮ್ಮ ಪರವಾಗಿ ಶಾಸಕರೊಂದಿಗೆ ಮಾತನಾಡಿ ನಿಮ್ಮ ಸಮಸ್ಯೆಯನ್ನು ತಿಳಿಸುವೆ ಎಂದು ಭರವಸೆ ನೀಡಿದರು,

ಸಂಘದ ಅಧ್ಯಕ್ಷೆ ಜೆ.ಎಂ ಜ್ಯೋತಿಶ್ವರಿ ಓದುವುದರ ಮುಖಾಂತರ ತಮ್ಮ ಬೇಡಿಕೆಯನ್ನು ತಿಳಿಸಿದರು.

ಅಂಗನವಾಡಿ ನೌಕರರಿಗೆ ಗೌರವಧನ ಹೆಚ್ಚಳ ಮಾಡಬೇಕು, ಎಲ್ ಕೆ.ಜಿ.ಯು.ಕೆ.ಜಿ ತರಗತಿಗಳನ್ನು ಅಂಗನವಾಡಿ ಕೇಂದ್ರದಲ್ಲಿ ಪ್ರಾರಂಭಿಸಬೇಕು. ಎಲ್ಲಾ ಅಂಗನವಾಡಿ ನೌಕರರನ್ನು ಕನಿಷ್ಠ ವೇತನ ಕಾಯ್ದೆಯ ವ್ಯಾಪ್ತಿಗೆ ತಂದು ಇ.ಎಸ್. ಐ,ಪಿ.ಎಫ್ ಕೊಡಬೇಕು. ಅಂಗನವಾಡಿ ಕೇಂದ್ರಕ್ಕೆ ಸರಬರಾಜು ಮಾಡುವ ಆಹಾರ ಪದಾರ್ಥಗಳು ಗುಣಮಟ್ಟ ಸರಿ ಇಲ್ಲದ ಕಾರಣ ಬಿಎಸ್. ಪರವಾನಿಗೆ ರದ್ದು ಮಾಡಿ ಸ್ಥಳೀಯವಾಗಿ ಸಿಗುವ ಆಯಾ ಪ್ರದೇಶಕ್ಕೆ ಅನುಗುಣವಾಗಿ ಸ್ಥಳೀಯವಾಗಿ ಆಹಾರ ಸರಬರಾಜು ಮಾಡಬೇಕು,



ಅಭಿವೃದ್ಧಿ ಯೋಜನೆಗಾಗಿ ದುಡಿದು ಬರಿ ಗೈಯಲ್ಲಿ2011 ರಿಂದ 2023ರ ಮಾರ್ಚ್ ತನಕ ನಿವೃತ್ತಿಯಾದ ಕಾರ್ಯಕರ್ತ ಸಹಾಯಕಿಯರಿಗೂ ಕೂಡಲೇ ಗ್ರಾಚ್ಯುಟಿ ಹಣ 183 ಕೋಟಿ ಕೂಡಲೇ ಬಿಡುಗಡೆ ಮಾಡಬೇಕು. ಖಾಲಿ ಇರುವ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿ ಹುದ್ದೆ ತುಂಬ ಬೇಕು, ಮೊಟ್ಟೆ, ಬಾಡಿಗೆ, ಗ್ಯಾಸ್ , ಕರೆನ್ಸಿ ಹಣ, ತರಕಾರಿ, ಆಡಳಿತ ವೆಚ್ಚ, ಸಾದಿಲ್ವಾರು ಹಾಕದೆ ಫಲಿತಾಂಶ ಕೇಳಬಾರದು. ಸಾಮೂಹಿಕ ಆರೋಗ್ಯ ವಿಮೆ ಜಾರಿ ಮಾಡಬೇಕು, ಅಂಗನವಾಡಿ ಕೇಂದ್ರಕ್ಕೆ ಗುಣಮಟ್ಟದ ಮೊಬೈಲ್ ಮತ್ತು ವೈಫೈ ಸೌಲಭ್ಯ ನೀಡಬೇಕು . ರಾಜ್ಯ ಸರ್ಕಾರ ಮತ್ತು ಖಾಸಗಿ ವಲಯದಲ್ಲಿ ದುಡಿಯುವ ಮಹಿಳೆಯರಿಗೆ ನೀಡಿರುವ ಮುಟ್ಟಿನ ರಜೆ ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರಿಗೂ ಜಾರಿ ಆಗಬೇಕು. ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಸದನದಲ್ಲಿ ಶಾಸಕರು ಕೆ ನೇಮಿರಾಜ್ ನಾಯ್ಕ ಅಂಗನವಾಡಿ ಕಾರ್ಯಕರ್ತೆಯರ ಬಗ್ಗೆ ಸದನದಲ್ಲಿ ಚರ್ಚಿಸುವಂತೆ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಪ್ರಧಾನ ಕಾರ್ಯದರ್ಶಿ ಮಾರೆಕ್ಕ, ಮಾಬೂನಿ, ಕಸ್ತೂರಿ, ಪುಷ್ಪಾವತಿ, ಸುಮಂಗಲ, ಯಶೋಧ, ಸವಿತಾ, ಸಂಗೀತಾ, ಮೀನಾಕ್ಷಿ, ಜ್ಯೋತಿ, ಅಂದಮ್ಮ, ಕರಿಬಸಮ್ಮ, ಕೊಟಗಿ ಮಲ್ಲಿಕಾರ್ಜುನ್, ಅನೇಕ ಕಾರ್ಯಕರ್ತೆರು ಭಾಗವಹಿಸಿದರು.

## ತಿಪಟೂರಿನಲ್ಲಿ ಇಂದು ಡಾ. ಪುನೀತ್ ರಾಜಕುಮಾರ್ ರವರ 51ನೇ ಹುಟ್ಟುಹಬ್ಬ ಆಚರಣೆ

ತಿಪಟೂರು

ಕನ್ನಡ ಚಲನಚಿತ್ರ ರಂಗದ ಧ್ರುವತಾರೆ, ಕೊಡುಗೈದಾನಿ ಕರ್ನಾಟಕ ರತ್ನ ಡಾ.ಪುನೀತ್ ರಾಜಕುಮಾರ್ ರವರ 51ನೇ ಹುಟ್ಟು ಹಬ್ಬದ ಅಂಗವಾಗಿ, ಶೇಖರ್ ರಕ್ತನಿಧಿ ಕೇಂದ್ರ ಸಹಯೋಗದೊಂದಿಗೆ, ಅಭಿಮಾನಿಗಳ ಬಳಗದ ವತಿಯಿಂದ ಇಂದು ಅಂದರೆ ದಿನಾಂಕ:17/03/2026 ರಂದು ಬೆಳಿಗ್ಗೆ 10 ಗಂಟೆಗೆ ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಆವರಣದಲ್ಲಿ ಸ್ವಯಂಪ್ರೇರಿತ ರಕ್ತದಾನ ಶಿಬಿರ ಮತ್ತು ಅನ್ನದಾಸೋಹ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಮಾಹಿತಿಗಾಗಿ: 8951159753/8546947794 ಸಂಪರ್ಕಿಸಲು ಕೋರಲಾಗಿದೆ ಎಂದು ಅಭಿಮಾನಿ ಬಳಗದ ಪದಾಧಿಕಾರಿಗಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸನ್ನದ್ಧ; 9 ಕೇಂದ್ರಗಳಲ್ಲಿ ಪರೀಕ್ಷೆ

ತಿಪಟೂರು

ತಾಲ್ಲೂಕಿನಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಗಳನ್ನು ಸುಸೂತ್ರವಾಗಿ ನಡೆಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದ್ದು, ಒಟ್ಟು 2,268 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ ಎಂದು ತಹಶೀಲ್ದಾರ್ ಮೋಹನ್‌ಕುಮಾರ್ ತಿಳಿಸಿದರು.

ಪರೀಕ್ಷಾ ಪೂರ್ವಸಿದ್ಧತಾ ಸಭೆಯ ನಂತರ ಮಾತನಾಡಿದ ಅವರು, ಈ ಬಾರಿ 1,115 ಬಾಲಕಿಯರು ಹಾಗೂ 1,153 ಬಾಲಕರು ಪರೀಕ್ಷೆಗೆ ಹಾಜರಾಗಲಿದ್ದಾರೆ. ತಾಲ್ಲೂಕು ಮತ್ತು ಗ್ರಾಮಾಂತರ ಪ್ರದೇಶದ ಒಟ್ಟು 9 ಕೇಂದ್ರಗಳಲ್ಲಿ



ಪರೀಕ್ಷೆ ನಡೆಯಲಿದ್ದು, ಪ್ರತಿ ಕೇಂದ್ರಕ್ಕೂ ಮುಖ್ಯ ಅಧೀಕ್ಷಕರು, ಮೊಬೈಲ್ ಸ್ವಾಧೀನಾಧಿಕಾರಿಗಳು ಹಾಗೂ ಪ್ರಶ್ನೆಪತ್ರಿಕೆ ಅಭಿರಕ್ಷಕರನ್ನು ನೇಮಿಸಲಾಗಿದೆ ಎಂದು ವಿವರಿಸಿದರು.

ಕಟ್ಟುನಿಟ್ಟಿನ ಭದ್ರತೆ ಮತ್ತು ಸೌಲಭ್ಯ: ನಿಷೇಧಾಜ್ಞೆ: ಪರೀಕ್ಷಾ ಕೇಂದ್ರಗಳ ಸುತ್ತ 200 ಮೀಟರ್ ವ್ಯಾಪ್ತಿಯಲ್ಲಿ ಸೆಕ್ಷನ್ 163ರ ಅಡಿ ನಿಷೇಧಾಜ್ಞೆ ಜಾರಿಗೊಳಿಸಲಾಗಿದೆ. ಕೇಂದ್ರಗಳ ಸಮೀಪದ ಜೆರಾಕ್ಸ್ ಅಂಗಡಿಗಳನ್ನು ಮುಚ್ಚಲು ಆದೇಶಿಸಲಾಗಿದೆ.

ಆರೋಗ್ಯ ರಕ್ಷಣೆ: ಪ್ರತಿ ಕೇಂದ್ರದಲ್ಲಿ ಒ.ಆರ್. ಎಸ್ ಪೌಡರ್ ಹಾಗೂ ತುರ್ತು ಚಿಕಿತ್ಸಾ ಕಿಟ್‌ಗಳೊಂದಿಗೆ ಆರೋಗ್ಯ ಸಹಾಯಕರನ್ನು ನಿಯೋಜಿಸಲಾಗಿದೆ.

ಸಾರಿಗೆ ಸೌಲಭ್ಯ: ವಿದ್ಯಾರ್ಥಿಗಳಿಗೆ ಪರೀಕ್ಷಾ ಕೇಂದ್ರಗಳಿಗೆ ತಲುಪಲು ಕೆಎಸ್‌ಆರ್‌ಟಿಸಿ ವತಿಯಿಂದ ಉಚಿತ ಬಸ್ ವ್ಯವಸ್ಥೆ ಹಾಗೂ ಹೆಚ್ಚುವರಿ ಬಸ್‌ಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ.

ವಿದ್ಯುತ್ ಪೂರೈಕೆ: ಪರೀಕ್ಷಾ ಅವಧಿಯಲ್ಲಿ ತಡೆರಹಿತ ವಿದ್ಯುತ್ ಪೂರೈಸಲು ಬೆಸ್ಕಾಂ ಇಲಾಖೆಗೆ ಸೂಚನೆ ನೀಡಲಾಗಿದೆ.

ಕ್ಷೇತ್ರ ಶಿಕ್ಷಣಾಧಿಕಾರಿ ತಾರಾಮಣಿ ಮಾತನಾಡಿ, "ಪೂರ್ವಸಿದ್ಧತಾ ಪರೀಕ್ಷೆಗಳಲ್ಲಿ ತುಮಕೂರು ಜಿಲ್ಲೆಯು ಶೇ. 93 ಫಲಿತಾಂಶದೊಂದಿಗೆ ಪ್ರಥಮ ಸ್ಥಾನ ಪಡೆದಿದೆ. ಹಿಂದುಳಿದ ವಿದ್ಯಾರ್ಥಿಗಳಿಗಾಗಿ ರಂಗಾಪುರ, ನೊಣವಿನಕೆರೆ ಹಾಗೂ ವಸತಿ ಶಾಲೆಗಳಲ್ಲಿ ವಿಶೇಷ ರಾತ್ರಿ ತರಗತಿಗಳನ್ನು ನಡೆಸಿ ಮಾರ್ಗದರ್ಶನ ನೀಡಲಾಗಿದೆ," ಎಂದರು.

ಒಟ್ಟು ಪರೀಕ್ಷಾರ್ಥಿಗಳಲ್ಲಿ 181 ಪುನರಾವರ್ತಿತ ವಿದ್ಯಾರ್ಥಿಗಳು ಹಾಗೂ 12 ವಿಶೇಷ ಚೇತನ ವಿದ್ಯಾರ್ಥಿಗಳಿದ್ದಾರೆ. ಐವರು ವಿದ್ಯಾರ್ಥಿಗಳಿಗೆ ಬದಲಿ ಅಭ್ಯರ್ಥಿಗಳ (Scribe) ನೆರವಿನೊಂದಿಗೆ ಪರೀಕ್ಷೆ ಬರೆಯಲು ಅವಕಾಶ ಕಲ್ಪಿಸಲಾಗಿದೆ. ವಿವಿಧ ಕಾರಣಗಳಿಂದ 178 ವಿದ್ಯಾರ್ಥಿಗಳು ಈ ಬಾರಿ ಪರೀಕ್ಷೆಯಿಂದ ವಂಚಿತರಾಗಿದ್ದಾರೆ ಎಂದು ಮಾಹಿತಿ ನೀಡಿದರು.

ಈ ಸಭೆಯಲ್ಲಿ ತಾಲೂಕ ಪಂಚಾಯತ್ ಇಓ ಸುದರ್ಶನ್, ಬಿಆರ್‌ಸಿ ಉಮೇಶ್‌ಗೌಡ, ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಮಂಜುನಾಥ್ ಎಂ. ಮಧುಸೂದನ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.



ಕೋಲಾರ ನಗರ ಆಶ್ರಯ ಸಮಿತಿಯ ನೂತನ ಸದಸ್ಯರಾಗಿ ಸೈಫುಲ್ಲಾ ಷರೀಫ್, ರಾಘವೇಂದ್ರ, ವಾಸು, ವೆಂಕಟರತ್ನ ಮತ್ತು ಎನ್. ರಾಜೇಶ್ ಅವರು ನಾಮನಿರ್ದೇಶನಗೊಂಡಿದ್ದಾರೆ. ನೂತನ ಸದಸ್ಯರನ್ನು ನಗರಸಭೆಯಲ್ಲಿ ಶಾಸಕ ಕೊತ್ತೂರು ಜಿ. ಮಂಜುನಾಥ್ ಅವರ ಅಧ್ಯಕ್ಷತೆಯಲ್ಲಿ ಅದ್ದೂರಿಯಾಗಿ ಅಭಿನಂದಿಸಲಾಯಿತು. ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್, ನಗರಸಭಾ ಆಯುಕ್ತ ನವೀನ್‌ಚಂದ್ರ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಪ್ಸರ್ ಪಾಷ, ಜಿಲ್ಲಾ ಎಸ್.ಟಿ ಘಟಕದ ಅಧ್ಯಕ್ಷ ಅಂಬರೀಶ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಂಡಹಳ್ಳಿ ಮುರಳಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಮುಂಚೂಣಿ ಘಟಕಗಳ ನಾಯಕರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.




ತುಮಕೂರಿನ ವೈ.ಎನ್. ಹೊಸಕೋಟೆಯ ಮಹಾತ್ಮ ಗಾಂಧಿ ಕ್ರೀಡಾಂಗಣದಲ್ಲಿ ನಡೆದ ಕೇಂದ್ರ ಸರ್ಕಾರದ 'ಮೈ ಭಾರತ್- ಯುವ ಭಾರತ್' ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ವೈ.ಎನ್. ಹೊಸಕೋಟೆ ಹೋಬಳಿಯ ಮೇಗಳಪಾಳ್ಯ ಲಂಬಾಣಿಹಟ್ಟಿಯ ಪಿ. ನಂದೀಶ್ ನಾಯ್ಕ 200 ಮೀಟರ್ ಓಟದ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿ ಸಾಧನೆ ಮಾಡಿದ್ದಾರೆ. ನಂದೀಶ್ ನಾಯ್ಕನ ಈ ಸಾಧನೆಗೆ ಕಾಲೇಜಿನ ಪ್ರಾಂಶುಪಾಲರಾದ ಡಾ. ಪಿ. ಹೇಮಲತಾ, ವಿವಿಧ ವಿಭಾಗದ ಮುಖ್ಯಸ್ಥರು, ಪ್ರಾಧ್ಯಾಪಕರು ಹಾಗೂ ಆಡಳಿತ ಮಂಡಳಿಯವರು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ. ಹಳ್ಳಿಯ ಪ್ರತಿಭೆ ಜಿಲ್ಲಾ ಮಟ್ಟದಲ್ಲಿ ಮಿಂಚಿರುವುದು ಅವರ ಪೋಷಕರು ಹಾಗೂ ಗ್ರಾಮಸ್ಥರಲ್ಲಿ ಸಂಭ್ರಮ ತಂದಿದೆ.



ಬೆಂಗಳೂರು ಮಲ್ಲೇಶ್ವರದಲ್ಲಿರುವ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಶನಿವಾರ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆಗೆ ಸಂಬಂಧಿಸಿದ ವಿಶೇಷ ಕಚೇರಿಯನ್ನು ಉದ್ಘಾಟಿಸಲಾಯಿತು. ಈ ಕಾರ್ಯಕ್ರಮದಲ್ಲಿ ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್, ಎಸ್.ಐ.ಆರ್ ರಾಜ್ಯ ತಂಡದ ಸಂಚಾಲಕ ಜಗದೀಶ್ ಹಿರೇಮನಿ ಹಾಗೂ ರಾಜ್ಯ ತಂಡದ ಪ್ರಮುಖ ಸದಸ್ಯರು ಉಪಸ್ಥಿತರಿದ್ದರು.

## 'ಸಿಎಂ 'ರಿಟೈರ್‌ಮೆಂಟ್' ಮೂಡ್‌ನಲ್ಲಿದ್ದಾರೆ'



ಬೆಂಗಳೂರು

"ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಅಧಿಕಾರಾವಧಿಯಲ್ಲಿ ಜನರಿಗಾಗಿ ಏನನ್ನೂ ಸಾಧಿಸದ 'ಔಟ್‌ಗೋಯಿಂಗ್ ಸಿಎಂ'. ಅವರು ಶೀಘ್ರದಲ್ಲೇ ರಾಜೀನಾಮೆ ನೀಡಿ ಮನೆಗೆ ಹೋಗಲು ಸಿದ್ಧವಾಗುತ್ತಿದ್ದಾರೆ," ಎಂದು ವಿಧಾನಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಲೇವಡಿ ಮಾಡಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಶನಿವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಇತ್ತೀಚಿನ ಹೇಳಿಕೆಗಳನ್ನು ತೀವ್ರವಾಗಿ ಟೀಕಿಸಿದರು.

ಮಗನ ರಕ್ಷಣೆಗೆ ಅಂಗಲಾಚುತ್ತಿದ್ದಾರೆ: "ನನ್ನಂತೆ ಮಗ ಯತೀಂದ್ರನನ್ನೂ ಆಶೀರ್ವದಿಸಿ ಎಂದು ಮುಖ್ಯಮಂತ್ರಿಗಳು ಕೇಳುತ್ತಿದ್ದಾರೆ. ಇದು ಅವರ ರಾಜಕೀಯ ಜೀವನದ ಅಂತ್ಯದ ದಿನಗಳ ಮಾತು. ರಾಜ್ಯದ ಜನರ ಪರವಾಗಿ ಮಾತನಾಡಬೇಕಿದ್ದ ಸಿಎಂ, ಈಗ ವಂಶಪಾರಂಪರ್ಯ ರಾಜಕಾರಣಕ್ಕೆ ಜೋತುಬಿದ್ದು ಮಗನನ್ನು ರಕ್ಷಿಸಿ ಎಂದು ಅಂಗಲಾಚುತ್ತಿದ್ದಾರೆ. ಇದು ಅವರಲ್ಲಿ ಮೂಡಿರುವ ರಾಜಕೀಯ ವೈರಾಗ್ಯದ ಸಂಕೇತ," ಎಂದು ಕುಟುಕಿದರು.

ಅರಸು ದಾಖಲೆ ಮುರಿಯಲು ಸಾಧ್ಯವಿಲ್ಲ: ಸಿದ್ದರಾಮಯ್ಯ ಅವರು ದೇವರಾಜು ಅರಸು ಅವರ ದಾಖಲೆ ಮುರಿದಿದ್ದೇನೆ ಎನ್ನುವ ಮಾತಿಗೆ ಪ್ರತಿಕ್ರಿಯಿಸಿದ ಛಲವಾದಿ, "ಅರಸು ಅವರ ಆಡಳಿತದ ಅವಧಿಯ ದಾಖಲೆಯನ್ನು ಸಿದ್ದರಾಮಯ್ಯ ಮುರಿದಿರಬಹುದು, ಆದರೆ ಅವರ ಕೊಡುಗೆಯ ದಾಖಲೆ ಮುರಿಯಲು ಸಾಧ್ಯವೇ ಇಲ್ಲ. 17 ಬಜೆಟ್ ಮಂಡಿಸಿದ್ದೇ ಇವರ ಸಾಧನೆ, ಆದರೆ ರಾಜ್ಯದ ಜನರಿಗೆ ಸಿಕ್ಕಿದ್ದು ಶೂನ್ಯ," ಎಂದು ವಾಗ್ದಾಳಿ ನಡೆಸಿದರು.

ದಲಿತರಿಗೆ ಅನ್ಯಾಯದ ಆರೋಪ: ಮುಂದಿನ ಮುಖ್ಯಮಂತ್ರಿ ಯಾರಾಗಬಹುದು ಎಂಬ ಪ್ರಶ್ನೆಗೆ ಉತ್ತರಿಸಿದ ಅವರು, "ಕಾಂಗ್ರೆಸ್‌ನಲ್ಲಿ ದಲಿತರನ್ನು ಕೇವಲ ವೋಟ್ ಬ್ಯಾಂಕ್ ಆಗಿ ಬಳಸಿಕೊಳ್ಳಲಾಗುತ್ತಿದೆ. ದಲಿತರು ಮುಖ್ಯಮಂತ್ರಿಯಾಗುವ ಎಲ್ಲಾ ಅವಕಾಶಗಳನ್ನು ಸಿದ್ದರಾಮಯ್ಯ ಅವರೇ ಕಸಿದುಕೊಂಡಿದ್ದಾರೆ. ಅವರು ಎಂದಿಗೂ ದಲಿತರಿಗೆ ನ್ಯಾಯ ಕೊಡಲಿಲ್ಲ ಮತ್ತು ದಲಿತ ಸಿಎಂ ಮಾಡಲು ಬಿಡುವುದೂ ಇಲ್ಲ," ಎಂದು ಗಂಭೀರವಾಗಿ ಆರೋಪಿಸಿದರು.

ರಾಜ್ಯಸಭಾ ಚುನಾವಣೆ ಮುಗಿಯುತ್ತಿದ್ದಂತೆಯೇ ಸಿದ್ದರಾಮಯ್ಯ ಅವರು ತಮ್ಮ ಸ್ಥಾನ ಕಳೆದುಕೊಳ್ಳಲಿದ್ದಾರೆ. "ಐದು ವರ್ಷ ನಾನೇ ಸಿಎಂ" ಎಂದು ಹೇಳುವ ತಾಕತ್ತು ಈಗ ಅವರಿಗಿಲ್ಲ ಎಂದು ಛಲವಾದಿ ನಾರಾಯಣಸ್ವಾಮಿ ಭವಿಷ್ಯ ನುಡಿದರು.

## ವಿಸಿ ಫಾರಂನಲ್ಲಿ ತಲೆಎತ್ತಲಿದೆ ಬಹುಪಯೋಗಿ ಒಳಾಂಗಣ ಕ್ರೀಡಾಂಗಣ

ಮಂಡ್ಯ

ಜಿಲ್ಲೆಯ ಕ್ರೀಡಾಸಕ್ತರ ದಶಕಗಳ ಕನಸು ನನಸಾಗುವ ಕಾಲ ಹತ್ತಿರವಾಗಿದ್ದು, ಮಂಡ್ಯದ ವಿಸಿ ಫಾರಂನಲ್ಲಿರುವ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಆವರಣದಲ್ಲಿ ರೂ. 14 ಕೋಟಿ ವೆಚ್ಚದ ಬಹುಪಯೋಗಿ ಒಳಾಂಗಣ ಕ್ರೀಡಾ ಸಂಕೀರ್ಣಕ್ಕೆ ಶನಿವಾರ ಅದ್ದೂರಿ ಚಾಲನೆ ದೊರೆಯಿತು.

ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವೀಯ ಹಾಗೂ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಜಂಟಿಯಾಗಿ ಭೂಮಿಪೂಜೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ಭಾರತ ಸರ್ಕಾರದ 'ಖೇಲೋ ಇಂಡಿಯಾ' ಯೋಜನೆಯಡಿ ಈ ಸುಸಜ್ಜಿತ ಸಂಕೀರ್ಣ ನಿರ್ಮಾಣವಾಗುತ್ತಿರುವುದು ವಿಶೇಷ.

'ವೈಬ್ರೆಂಟ್ ಮಂಡ್ಯ'ದಿಂದ ಚಾಂಪಿಯನ್‌ಗಳ ಉದಯ: ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಸಚಿವ ಮಾಂಡವೀಯ, "ಖೇಲೋ ಇಂಡಿಯಾ ವೈಬ್ರೆಂಟ್ ಮಂಡ್ಯ" ಎಂಬ ಘೋಷವಾಕ್ಯದಡಿ ಜಿಲ್ಲೆಯ ಯುವಕರು ಕ್ರೀಡಾ ಕ್ಷೇತ್ರದಲ್ಲಿ ಮಿಂಚಬೇಕು. ವಿಕಾಸ್ ಗೌಡ ಹಾಗೂ ಕೆ.ಪಿ. ಶಿಲ್ಪಾ ಅವರಂತಹ ಅಂತಾರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳನ್ನು ನೀಡಿದ ಮಂಡ್ಯದ ಮಣ್ಣಿನಲ್ಲಿ ಇಂತಹ ಮೂಲಸೌಕರ್ಯಗಳು ಹೆಚ್ಚಿನ ಚಾಂಪಿಯನ್‌ಗಳನ್ನು ಸೃಷ್ಟಿಸಲಿವೆ,"




ಎಂದು ಆಶಿಸಿದರು. ಅಲ್ಲದೆ, ಮಂಡ್ಯದ ಅಭಿವೃದ್ಧಿಗಾಗಿ ಕುಮಾರಸ್ವಾಮಿ ಅವರು ನಡೆಸುತ್ತಿರುವ ಸತತ ಪ್ರಯತ್ನವನ್ನು ಅವರು ಮುಕ್ತಕಂಠದಿಂದ ಶ್ಲಾಘಿಸಿದರು.

ಕ್ರೀಡಾ ಬಜೆಟ್‌ನಲ್ಲಿ ಮೂರು ಪಟ್ಟು ಏರಿಕೆ: "ಪ್ರಧಾನಿ ಮೋದಿ ಅವರ ನೇತೃತ್ವದಲ್ಲಿ ದೇಶದ ಕ್ರೀಡಾ ಪರಿಸರ ಬದಲಾಗಿದೆ. ಹತ್ತು ವರ್ಷಗಳ ಹಿಂದೆ ಕ್ರೀಡೆಗಾಗಿ ಕೇವಲ ರೂ. 1,200 ಕೋಟಿ ಅನುದಾನವಿತ್ತು, ಇಂದು ಅದನ್ನು 4,000 ಕೋಟಿಗೆ ಏರಿಸಲಾಗಿದೆ," ಎಂದು ಮಾಂಡವೀಯ ತಿಳಿಸಿದರು.

ವಿಶೇಷ ಚೇತನರಿಗೆ 'ಟಾಟಾ–ಸೈಲ್' ಆಸರೆ: ಕಾರ್ಯಕ್ರಮದ ನಂತರ 388 ವಿಶೇಷ ಚೇತನರಿಗೆ ಎಲೆಕ್ಟ್ರಿಕ್ ವಾಹನಗಳನ್ನು ವಿತರಿಸಲಾಯಿತು. ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ ಹಾಗೂ ಸ್ಟೀಲ್ ಅಥಾರಿಟಿ ಆಫ್ ಇಂಡಿಯಾ (ಖಂಖಐ) ಸಂಸ್ಥೆಗಳ ಸಿಎಸ್‌ಆರ್ ನಿಧಿಯಡಿ ಈ ವಾಹನಗಳನ್ನು ಒದಗಿಸಲಾಗಿದೆ. ಇದೇ ವೇಳೆ ಇನ್ಫೋಸಿಸ್ ಸಂಸ್ಥೆ ನೀಡಿದ 500 ಕಂಪ್ಯೂಟರ್ ಹಾಗೂ 100 ಲ್ಯಾಪ್‌ಟಾಪ್‌ಗಳನ್ನು ಸರ್ಕಾರಿ ಶಾಲೆಗಳಿಗೆ ಹಸ್ತಾಂತರಿಸಲಾಯಿತು.

ಕೇಂದ್ರ ಕೈಗಾರಿಕ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಮಾತನಾಡಿ, "ಮಂಡ್ಯದ ಜನರ ಬಹುಕಾಲದ ಬೇಡಿಕೆಯನ್ನು ಈಡೇರಿಸಲು ಪ್ರಧಾನಿ ಮೋದಿ ಹಾಗೂ ಕ್ರೀಡಾ ಸಚಿವರು ಸ್ಪಂದಿಸಿದ್ದಾರೆ. ಶೀಘ್ರದಲ್ಲೇ ಕಾಮಗಾರಿ ಪೂರ್ಣಗೊಳಿಸಿ ಕ್ರೀಡಾಪಟುಗಳಿಗೆ ಹಸ್ತಾಂತರಿಸಲಾಗುವುದು," ಎಂದು ಭರವಸೆ ನೀಡಿದರು.

## ರೈಲು ಪ್ರಯಾಣಿಕರಿಗೆ ಗುಡ್ ನ್ಯೂಸ್: ವಿವಿಧ ನಿಲ್ದಾಣಗಳಲ್ಲಿ ತಾತ್ಕಾಲಿಕ ನಿಲುಗಡೆ ಅವಧಿ ವಿಸ್ತರಣೆ

ಬೆಂಗಳೂರು

ನೈಋತ್ಯ ರೈಲ್ವೆ ವ್ಯಾಪ್ತಿಯ ವಿವಿಧ ನಿಲ್ದಾಣಗಳಲ್ಲಿ ಕೆಲವು ಪ್ರಮುಖ ರೈಲುಗಳಿಗೆ ನೀಡಲಾಗಿದ್ದ ತಾತ್ಕಾಲಿಕ ನಿಲುಗಡೆಯನ್ನು 2026ರ ಜೂನ್ 30ರವರೆಗೆ ಮುಂದುವರಿಸಲು ರೈಲ್ವೆ ಇಲಾಖೆ ತೀರ್ಮಾನಿಸಿದೆ. ಇದರಿಂದ ಸ್ಥಳೀಯ ಪ್ರಯಾಣಿಕರಿಗೆ ಹಾಗೂ ದೈನಂದಿನ ಉದ್ಯೋಗಿಗಳಿಗೆ ದೊಡ್ಡ ಮಟ್ಟದ ಅನುಕೂಲವಾಗಲಿದೆ.

ರೈಲು ಸಂಖ್ಯೆ ಮತ್ತು ಹೆಸರು; ನಿಲುಗಡೆ ನೀಡಲಾದ ನಿಲ್ದಾಣಗಳು:

56519/56520 ಬೆಂಗಳೂರು – ಹೊಸಪೇಟೆ ಪ್ಯಾಸೆಂಜರ್ ದೇವನೂರು, ಹೊಳಲ್ಕೆರೆ ಮತ್ತು ಅಮೃತಾಪುರ, 20675/20676 ಬೆಳಗಾವಿ – ಮೈಸೂರು ಎಕ್ಸ್‌ಪ್ರೆಸ್ ರಾಮಗಿರಿ, 17391/17392 ಬೆಂಗಳೂರು – ಸಿಂಧನೂರು ಎಕ್ಸ್‌ಪ್ರೆಸ್ ರಾಮಗಿರಿ ಮತ್ತು ಚಲಗೇರಿ, 16587/16588 ಯಶವಂತಪುರ – ಬಿಕಾನೇರ್ ಎಕ್ಸ್‌ಪ್ರೆಸ್ ಬೀರೂರು, 16239/16240 ಚಿಕ್ಕಮಗಳೂರು – ಯಶವಂತಪುರ ಎಕ್ಸ್‌ಪ್ರೆಸ್ ಅರಳಗುಪ್ಪೆ ಮತ್ತು ಸಂಪಿಗೆ ರೋಡ್, 20651/20652 ಬೆಂಗಳೂರು – ತಾಳಗುಪ್ಪ ಎಕ್ಸ್‌ಪ್ರೆಸ್ ಅರಸಾಳು ಮತ್ತು ಕುಂಸಿ., 16579/16580 ಯಶವಂತಪುರ – ಶಿವಮೊಗ್ಗ ಟೌನ್ ಎಕ್ಸ್‌ಪ್ರೆಸ್ ಚಿಕ್ಕಬಾಣಾವರ, 16595/16596 ಬೆಂಗಳೂರು – ಕಾರವಾರ ಎಕ್ಸ್‌ಪ್ರೆಸ್ ಕುಣಿಗಲ್, 16228 ತಾಳಗುಪ್ಪ – ಮೈಸೂರು ಎಕ್ಸ್‌ಪ್ರೆಸ್ ಮಲ್ಲೇಶ್ವರಂ

16315/16316 ತಿರುವನಂತಪುರಂ – ಮೈಸೂರು ಎಕ್ಸ್‌ಪ್ರೆಸ್ ಮದ್ದೂರು, 66553 ಬೆಂಗಳೂರು – ಅಶೋಕಪುರಂ ಮೆಮು ಕೃಷ್ಣದೇವರಾಯ ಹಾಲ್ಟ್, 66519/66520 ಮಾರಿಕುಪ್ಪಂ – ಬೆಂಗಳೂರು ಮೆಮು ದೇವನಗೊಂದಿ, 16521 ಬಂಗಾರಪೇಟೆ – ಬೆಂಗಳೂರು ಮೆಮು ದೇವನಗೊಂದಿ, 56927/56928 ಹುಬ್ಬಳ್ಳಿ – ಸಿಂಧನೂರು ಪ್ಯಾಸೆಂಜರ್ ಹಳ್ಳಿಗುಡಿ.


ಪ್ರಯಾಣಿಕರ ಒತ್ತಾಯಕ್ಕೆ ಫಲ: ಅನೇಕ ದಿನಗಳಿಂದ ಸ್ಥಳೀಯ ನಿಲ್ದಾಣಗಳಲ್ಲಿ ಈ ರೈಲುಗಳ ನಿಲುಗಡೆಯನ್ನು ಕಾಯಂ ಮಾಡುವಂತೆ ಸಾರ್ವಜನಿಕರು ಒತ್ತಾಯಿಸುತ್ತಿದ್ದರು. ಇದೀಗ ತಾತ್ಕಾಲಿಕ ನಿಲುಗಡೆಯನ್ನು ಮುಂದಿನ ವರ್ಷದ ಜೂನ್ ತಿಂಗಳವರೆಗೆ ವಿಸ್ತರಿಸಿರುವುದು ಪ್ರಯಾಣಿಕರಲ್ಲಿ ಹರ್ಷ ತಂದಿದೆ. ಮುಂದಿನ ದಿನಗಳಲ್ಲಿ ಪ್ರಯಾಣಿಕರ ಸಂಖ್ಯೆ ಮತ್ತು ಆದಾಯವನ್ನು ಆಧರಿಸಿ ಇವುಗಳನ್ನು ಕಾಯಂ ಮಾಡುವ ಸಾಧ್ಯತೆಯೂ ಇದೆ ಎಂದು ಮೂಲಗಳು ತಿಳಿಸಿವೆ.

## ಉದಯ್ ಎಕ್ಸ್‌ಪ್ರೆಸ್ ರೈಲು ನಿಲುಗಡೆಗೆ ಹಠಕ್ಕೆ ಬಿದ್ದ ಬಂಗಾರಪೇಟೆ ಜನತೆ

ಬಂಗಾರಪೇಟೆ

ಬೆಂಗಳೂರು ಹಾಗೂ ಕೊಯಮತ್ತೂರು ನಡುವೆ ಪ್ರತಿನಿತ್ಯ ಸಂಚರಿಸುವ ಪ್ರತಿಷ್ಠಿತ 'ಉದಯ್ ಎಕ್ಸ್‌ಪ್ರೆಸ್' ರೈಲು ಆಂಧ್ರಪ್ರದೇಶದ ಕುಪ್ಪಂನಲ್ಲಿ ನಿಲುಗಡೆಯಾಗುತ್ತಿದೆ. ಆದರೆ, ರೈಲ್ವೆ ಇಲಾಖೆಗೆ ಕೋಟ್ಯಂತರ ರೂಪಾಯಿ ಆದಾಯ ತಂದುಕೊಡುವ ರಾಜ್ಯದ ಪ್ರಮುಖ ಜಂಕ್ಷನ್ ಬಂಗಾರಪೇಟೆಯಲ್ಲಿ ಮಾತ್ರ ಈ ರೈಲಿಗೆ ನಿಲುಗಡೆ ನೀಡದಿರುವುದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಕುಪ್ಪಂಗೆ 'ವಿಶೇಷ' ಪ್ರೀತಿ ಯಾಕೆ?: ಉದಯ್ ಎಕ್ಸ್‌ಪ್ರೆಸ್ (ರೈಲು ಸಂಖ್ಯೆ: 22665/22666) ಕುಪ್ಪಂ ನಿಲ್ದಾಣದಲ್ಲಿ ನಿಲುಗಡೆಯಾಗುತ್ತಿದೆ. ಇದು ಎನ್‌ಡಿಎ ಮೈತ್ರಿಕೂಟದ ಪ್ರಮುಖ ನಾಯಕ ಚಂದ್ರಬಾಬು




ನಾಯ್ಡು ಅವರ ಕ್ಷೇತ್ರ ಎನ್ನುವ ಕಾರಣಕ್ಕೆ ಇಲಾಖೆ ಆದ್ಯತೆ ನೀಡಿದೆಯೇ? ಎನ್ನುವ ಅನುಮಾನ ಮೂಡಿದೆ. ಬಂಗಾರಪೇಟೆ ಜಂಕ್ಷನ್ ಆದಾಯದಲ್ಲಿ ಎರಡನೇ ಸ್ಥಾನದಲ್ಲಿದ್ದರೂ, ಕೇವಲ 15 ಕಿ.ಮೀ ದೂರದಲ್ಲಿರುವ ಸಾಮಾನ್ಯ ನಿಲ್ದಾಣ ಕುಪ್ಪಂಗೆ ನಿಲುಗಡೆ ನೀಡಿ, ಬಂಗಾರಪೇಟೆಯನ್ನು ಕಡೆಗಣಿಸಿರುವುದು ಅಧಿಕಾರಿಗಳ ತಾರತಮ್ಯಕ್ಕೆ ಸಾಕ್ಷಿಯಾಗಿದೆ ಎಂದು ಪ್ರಯಾಣಿಕರು ದೂರಿದ್ದಾರೆ.

ಪ್ರಯಾಣಿಕರ ಪಾಲಿಗೆ 3 ಗಂಟೆಗಳ 'ಗ್ಯಾಪ್': ಬಂಗಾರಪೇಟೆಯಿಂದ ಬೆಳಿಗ್ಗೆ 8.30ಕ್ಕೆ ಮೆಮೋ ರೈಲು ಹೋದರೆ, ನಂತರ ಮಧ್ಯಾಹ್ನ 12 ಗಂಟೆಯವರೆಗೆ ಬೆಂಗಳೂರು ನಗರಕ್ಕೆ ಹೋಗಲು ಯಾವುದೇ ನೇರ ರೈಲುಗಳಿಲ್ಲ. ಈ ನಡುವೆ ಬೆಳಿಗ್ಗೆ 10.30ಕ್ಕೆ ಬಂಗಾರಪೇಟೆ ಮಾರ್ಗವಾಗಿ ಸಾಗುವ ಉದಯ್ ಎಕ್ಸ್‌ಪ್ರೆಸ್‌ಗೆ ಕೇವಲ ಒಂದು ನಿಮಿಷ ನಿಲುಗಡೆ ನೀಡಿದರೆ, ಸಾವಿರಾರು ಉದ್ಯೋಗಿಗಳು, ವ್ಯಾಪಾರಿಗಳು ಹಾಗೂ ವಿದ್ಯಾರ್ಥಿಗಳಿಗೆ ವರದಾನವಾಗಲಿದೆ. ಪ್ರಸ್ತುತ ಜನರು 12 ಗಂಟೆಯ ಡಬಲ್ ಡೆಕ್ಕರ್ ರೈಲಿಗಾಗಿ ಕಾಯುವಂತಾಗಿದ್ದು, ರೈಲುಗಳಲ್ಲಿ ಅತಿಯಾದ ನೂಕುನುಗ್ಗಲು ಉಂಟಾಗುತ್ತಿದೆ.

ಮನವಿಗೆ ಬೆಲೆಯಿಲ್ಲವೇ?: ಕಳೆದ ತಿಂಗಳು ಕೇಂದ್ರ ಸಚಿವ ವಿ. ಸೋಮಣ್ಣ ಅವರು ಭೇಟಿ ನೀಡಿದ್ದಾಗ, ಸ್ಥಳೀಯ ಮುಖಂಡರು ಹಾಗೂ ದಿನನಿತ್ಯದ ಪ್ರಯಾಣಿಕರು ಮನವಿ ಪತ್ರ ಸಲ್ಲಿಸಿದ್ದರು. ಆದರೆ, ಈ ಮನವಿಗೆ ಅಧಿಕಾರಿಗಳು ಕವಡೆ ಕಾಸಿನ ಕಿಮ್ಮತ್ತು ನೀಡಿಲ್ಲ ಎಂಬುದು ಸಾರ್ವಜನಿಕರ ಅಳಲು.

### ಸಂಸದರ ಮೇಲೆ ಜನರ ಕಣ್ಣು:

ಮೈತ್ರಿ ಸರ್ಕಾರದ ಭಾಗವಾಗಿರುವ ಸಂಸದ ಮಲ್ಲೇಶ್ ಬಾಬು ಅವರು ಈ ಕೂಡಲೇ ರೈಲ್ವೆ ಅಧಿಕಾರಿಗಳ ಮೇಲೆ ಒತ್ತಡ ತಂದು, ಉದಯ್ ಎಕ್ಸ್‌ಪ್ರೆಸ್ ನಿಲುಗಡೆಗೆ ಕ್ರಮ ಕೈಗೊಳ್ಳಬೇಕು. ಇಲ್ಲವಾದರೆ ರೈಲ್ವೆ ಇಲಾಖೆಯ ಈ ಮಲತಾಯಿ ಧೋರಣೆ ವಿರುದ್ಧ ದೊಡ್ಡ ಮಟ್ಟದ ಪ್ರತಿಭಟನೆ ಅನಿವಾರ್ಯವಾಗಲಿದೆ ಎಂದು ಸ್ಥಳೀಯರು ಎಚ್ಚರಿಸಿದ್ದಾರೆ.

## ಸರಗಳ್ಳರ ವಿರುದ್ಧ ಹೈಕೋರ್ಟ್ ಗರಂ

ಬೆಂಗಳೂರು

ಪೆಪ್ಪರ್ ಸ್ಪ್ರೇ ಸಿಂಪಡಿಸಿ ಸರಗಳ್ಳತನ ಮಾಡಿದ ಆರೋಪ ಹೊತ್ತಿರುವ ತೃತೀಯ ಲಿಂಗಿಯೊಬ್ಬರ ವಿರುದ್ಧದ ಮೂರು ದರೋಡೆ ಪ್ರಕರಣಗಳನ್ನು ರದ್ದುಪಡಿಸಲು ಕರ್ನಾಟಕ ಹೈಕೋರ್ಟ್ ಸಮ್ಮತಿಸಿಲ್ಲ. "ಇಂತಹ ಗಂಭೀರ ಆರೋಪದ ಪ್ರಕರಣಗಳನ್ನು ರದ್ದುಪಡಿಸಿದರೆ, ಸರಗಳ್ಳತನದಂತಹ ಕೃತ್ಯಗಳಿಗೆ ಪರೋಕ್ಷವಾಗಿ ಅನುಮತಿ ನೀಡಿದಂತಾಗುತ್ತದೆ," ಎಂದು ನ್ಯಾಯಾಲಯ ಮೌಖಿಕವಾಗಿ ಅಭಿಪ್ರಾಯಪಟ್ಟಿದೆ.

ಮಂಗಳೂರು ಪೂರ್ವ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಐಪಿಸಿ ಸೆಕ್ಷನ್ 392 (ದರೋಡೆ) ಅಡಿಯಲ್ಲಿನ ಪ್ರಕರಣಗಳನ್ನು ರದ್ದುಪಡಿಸುವಂತೆ ಕೋರಿ ಬೆಂಗಳೂರಿನ ವಿವೇಕ್ ನಗರದ ನಿವಾಸಿ ಅಭಿಷೇಕ್ ಅಲಿಯಾಸ್ ಗೊಂಬಿ ಸಲ್ಲಿಸಿದ್ದ ಮೂರು ಅರ್ಜಿಗಳನ್ನು ನ್ಯಾಯಮೂರ್ತಿ ಎಂ. ನಾಗಪ್ರಸನ್ನ ಅವರ ಏಕಸದಸ್ಯ ಪೀಠವು ವಜಾಗೊಳಿಸಿದೆ.

ಪ್ರಕರಣದ ಹಿನ್ನೆಲೆ: ಅರ್ಜಿದಾರರ ವಿರುದ್ಧ ಹೆದ್ದಾರಿಯಲ್ಲಿ ಬೈಕ್ ಸವಾರರ ಹಾಗೂ ಪೆಟ್ರೋಲ್ ಬಂಕ್‌ನಲ್ಲಿ ವಾಹನಗಳಿಗೆ ಪೆಟ್ರೋಲ್ ಹಾಕಿಸುತ್ತಿದ್ದವರ ಮುಖಕ್ಕೆ ಪೆಪ್ಪರ್ ಸ್ಪ್ರೇ ಸಿಂಪಡಿಸಿ ಸರಗಳ್ಳತನ ಮಾಡಿದ ಗಂಭೀರ ಆರೋಪಗಳಿವೆ. ಮಂಗಳೂರಿನ 2ನೇ ಹೆಚ್ಚುವರಿ ಹಿರಿಯ ಸಿವಿಲ್ ಮತ್ತು ಸಿಜೆಎಂ ನ್ಯಾಯಾಲಯದಲ್ಲಿ ಈ ಸಂಬಂಧ ವಿಚಾರಣೆ ನಡೆಯುತ್ತಿದೆ. "ಟಿವಿಯಲ್ಲಿ ಸುದ್ದಿ ನೋಡಿದ ನಂತರ ದೂರುದಾರರು 3 ರಿಂದ 8 ತಿಂಗಳು ತಡವಾಗಿ ದೂರು ದಾಖಲಿಸಿದ್ದಾರೆ. ಇದು ಅನುಮಾನಾಸ್ಪದವಾಗಿದೆ," ಎಂದು ವಕೀಲ ಧನಂಜಯ್ ಕುಮಾರ್ ವಾದಿಸಿದರು.

ಸರ್ಕಾರಿ ಅಭಿಯೋಜಕರ ವಾದ: "ಮೊದಲ ಪ್ರಕರಣದಲ್ಲಿ ಬಂಧಿಸಿದಾಗ ಅರ್ಜಿದಾರನೇ ಇತರ ಎರಡು ಸರಗಳ್ಳತನದ ಬಗ್ಗೆ ಒಪ್ಪಿಕೊಂಡಿದ್ದಾನೆ. ಲೂಟಿ ಮಾಡಿದ್ದ ಸರಗಳನ್ನು ಜಪ್ತಿ ಮಾಡಲಾಗಿದ್ದು, ವಿಚಾರಣಾ ನ್ಯಾಯಾಲಯ ಈಗಾಗಲೇ ದೋಷಾರೋಪ ಹೊರಿಸಿದೆ. ಈ ಹಂತದಲ್ಲಿ ಕೇಸ್ ರದ್ದುಪಡಿಸಬಾರದು," ಎಂದು ಬಿ.ಎನ್. ಜಗದೀಶ್ ವಾದ ಮಂಡಿಸಿದರು.

## ಅಡುಗೆ ಅನಿಲ ಕೊರತೆ ಕೇವಲ ವದಂತಿ; ಆತಂಕ ಬೇಡ: ಜಿಲ್ಲಾಧಿಕಾರಿ ಪ್ರಭು

ಚಿಕ್ಕಬಳ್ಳಾಪುರ

"ಜಿಲ್ಲೆಯಲ್ಲಿ ಗೃಹ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆಯಲ್ಲಿ ವ್ಯತ್ಯಯವಾಗುತ್ತಿದೆ ಎಂಬುದು ಕೇವಲ ವದಂತಿ. ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗದೆ ಅಗತ್ಯಕ್ಕೆ ತಕ್ಕಂತೆ ಸಿಲಿಂಡರ್ ಪಡೆಯಬಹುದು," ಎಂದು ಜಿಲ್ಲಾಧಿಕಾರಿ ಜಿ. ಪ್ರಭು ಸ್ಪಷ್ಟಪಡಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ಅನಿಲ ವಿತರಕರ ತುರ್ತು ಸಭೆ ನಡೆಸಿದ ನಂತರ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು. ಸಾಮಾಜಿಕ ಜಾಲತಾಣಗಳಲ್ಲಿ ಹರಡುತ್ತಿರುವ ಸುಳ್ಳು ಸುದ್ದಿಗಳಿಗೆ ಸಾರ್ವಜನಿಕರು ಕಿವಿಗೊಡಬಾರದು ಎಂದು ಮನವಿ ಮಾಡಿದರು.

ದಾಸ್ತಾನು ವಿವರ ಮತ್ತು ಕಟ್ಟುನಿಟ್ಟಿನ ಸೂಚನೆ:



ಪುಷ್ಕಳ ದಾಸ್ತಾನು: ಜಿಲ್ಲೆಯಲ್ಲಿ ಪ್ರಸ್ತುತ (ಮಾ.12ರ ಅನ್ವಯ) 11,355 ಗೃಹಬಳಕೆಯ ಸಿಲಿಂಡರ್‌ಗಳು ದಾಸ್ತಾನು ಇವೆ. ಬೇಡಿಕೆಗಿಂತ ಹೆಚ್ಚಿನ ಪೂರೈಕೆ ಇರುವುದರಿಂದ ಅನಗತ್ಯವಾಗಿ ಸಿಲಿಂಡರ್ ಸಂಗ್ರಹಿಸಿಟ್ಟುಕೊಳ್ಳಬೇಡಿ.

ವಾಣಿಜ್ಯ ಬಳಕೆಗೆ ನಿಷೇಧ: ಗೃಹಬಳಕೆಯ ಸಿಲಿಂಡರ್‌ಗಳನ್ನು ಯಾವುದೇ ಹೋಟೆಲ್ ಅಥವಾ ವಾಣಿಜ್ಯ ಉದ್ದೇಶಗಳಿಗೆ ಬಳಸುವುದು ಕಂಡುಬಂದಲ್ಲಿ ಕಠಿಣ ಕ್ರಮ ಕೈಗೊಳ್ಳಲಾಗುವುದು.

ತಪಾಸಣಾ ತಂಡಗಳ ರಚನೆ: ಸಿಲಿಂಡರ್ ಅಕ್ರಮ ದಾಸ್ತಾನು ಹಾಗೂ ದುರ್ಬಳಕೆ ತಡೆಯಲು ತಾಲ್ಲೂಕು ಮಟ್ಟದಲ್ಲಿ ವಿಶೇಷ ತಂಡಗಳನ್ನು ರಚಿಸಲಾಗಿದೆ. ಅಕ್ರಮ ಎಸಗುವವರ ವಿರುದ್ಧ 'ಅಗತ್ಯ ವಸ್ತುಗಳ ಕಾಯ್ದೆ–1955' ರನ್ವಯ ಪ್ರಕರಣ ದಾಖಲಿಸಲಾಗುವುದು.

ಅಕ್ರಮ ಕಂಡರೆ ದೂರು ನೀಡಿ: ಸಿಲಿಂಡರ್‌ಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡುವುದು ಅಥವಾ ಅಕ್ರಮವಾಗಿ ಸಂಗ್ರಹಿಸುವುದು ಕಂಡುಬಂದರೆ ತಕ್ಷಣವೇ ಆಹಾರ ಇಲಾಖೆ, ಪೊಲೀಸ್ ಅಥವಾ ತಹಶೀಲ್ದಾರ್ ಗಮನಕ್ಕೆ ತರಲು ಜಿಲ್ಲಾಧಿಕಾರಿಗಳು ಸಾರ್ವಜನಿಕರಲ್ಲಿ ವಿನಂತಿಸಿದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳು, ಆಹಾರ ಇಲಾಖೆ ಉಪ ನಿರ್ದೇಶಕರು, ಜಿಲ್ಲೆಯ ಎಲ್ಲಾ ತಹಶೀಲ್ದಾರರು ಹಾಗೂ ಅನಿಲ ವಿತರಕರು ಉಪಸ್ಥಿತರಿದ್ದರು.

17/03/2026
# ಭಾರತ ಸಾರಥಿ
BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 29ರಂದು ಲ್ಯಾಬ್ ಟೆಕ್ನಾಲಜಿಸ್ಟ್ ರಾಷ್ಟ್ರೀಯ ಸಮಾವೇಶ



ತುಮಕೂರು

ಜಿಲ್ಲಾ ರಕ್ತ ಪರೀಕ್ಷಾ ತಂತ್ರಜ್ಞರ ಸಂಘದಿಂದ ಶನಿವಾರ ನಗರದಲ್ಲಿ ಅಂತರಾಷ್ಟ್ರೀಯ ರಕ್ತ ಪರೀಕ್ಷಾ ತಂತ್ರಜ್ಞರ ದಿನ ಆಚರಿಸಲಾಯಿತು. ಸಂಘದ ಪದಾಧಿಕಾರಿಗಳು ಹಾಗೂ ವಿವಿಧ ರಕ್ತ ಪರೀಕ್ಷಾ ತಂತ್ರಜ್ಞರು ಕೇಕ್ ಕತ್ತರಿಸಿ ಸಂಭ್ರಮದಿಂದ ಆಚರಣೆ ಮಾಡಿದರು.

ಸಂಘದ ಅಧ್ಯಕ್ಷ ಬೆಳ್ಳಿ ಲೋಕೇಶ್ ಈ ವೇಳೆ ಮಾತನಾಡಿ, ರೋಗಿಗಳ ಜೊತೆ ರಕ್ತ ಪರೀಕ್ಷಾ ತಂತ್ರಜ್ಞರ ನೇರ ಸಂಬಂಧ, ಸಂಪರ್ಕ ಇಲ್ಲದಿದ್ದರೂ, ನಾವು ರಕ್ತ ಪರೀಕ್ಷಿಸಿ ನೀಡುವ ವರದಿ ಆಧಾರದಲ್ಲಿ ವೈದ್ಯರು ರೋಗಿಗೆ ಚಿಕಿತ್ಸೆ ನೀಡುತ್ತಾರೆ. ಆರೋಗ್ಯ ಸೇವೆಯಲ್ಲಿ ನಮ್ಮ ಪಾತ್ರವೂ ಪ್ರಮುಖ ಎಂದರು.

ರಾಜ್ಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಅಸೋಸಿಯೇಷನ್‌ನಿಂದ ಈ ತಿಂಗಳ 29ರಂದು ಬೆಂಗಳೂರಿನ ಕಿಮ್ಸ್ ಆಸ್ಪತ್ರೆಯ ಕುವೆಂಪು ಕಲಾಕ್ಷೇತ್ರದಲ್ಲಿ 7ನೇ ರಾಷ್ಟ್ರೀಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಸಮಾವೇಶ ಹಮ್ಮಿಕೊಳ್ಳಲಾಗಿದೆ. ಇದರ ಹಿನ್ನೆಲೆಯಲ್ಲಿ ರಾಜ್ಯ ಸಮಿತಿ ಪದಾಧಿಕಾರಿಗಳು ಇಂದು ನಗರದಲ್ಲಿ ಸಭೆ ನಡೆಸಿ ಚರ್ಚಿಸಿ, ಸಮಾವೇಶದಲ್ಲಿ ಭಾಗವಹಿಸಲು ಕೋರಿದ್ದಾರೆ ಹಾಗೂ ಅಂತರಾಷ್ಟ್ರೀಯ ರಕ್ತ ಪರೀಕ್ಷಾ ತಂತ್ರಜ್ಞರ ದಿನಾಚರಣೆಯಲ್ಲಿ ಭಾಗವಹಿಸಿದ್ದರು ಎಂದರು.

ರಾಜ್ಯ ಮೆಡಿಕಲ್ ಲ್ಯಾಬ್ ಟೆಕ್ನಾಲಜಿಸ್ಟ್ ಅಸೋಸಿಯೇಷನ್ ಅಧ್ಯಕ್ಷ ವೆಂಕಟಸ್ವಾಮಿ ಮಾತನಾಡಿ, ಲ್ಯಾಬ್ ಟೆಕ್ನಾಲಜಿಸ್ಟ್ ಸಮಸ್ಯೆಗಳ ಬಗ್ಗೆ ಸಮಾವೇಶದಲ್ಲಿ ಚರ್ಚೆ ನಡೆಸಿ, ಸಮಸ್ಯೆ ಬಗೆಹರಿಸಲು ಆರೋಗ್ಯ ಸಚಿವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗುವುದು ಎಂದರು.

ರಾಜ್ಯದಲ್ಲಿ 2517 ಲ್ಯಾಬ್ ಟೆಕ್ನಾಲಜಿಸ್ಟ್ ಹುದ್ದೆಗಳು ಖಾಲಿ ಇವೆ. ಆ ಹುದ್ದೆಗಳನ್ನು ಭರ್ತಿ ಮಾಡಬೇಕು, ಗುತ್ತಿಗೆ ಆಧಾರದಲ್ಲಿ ನೇಮಕವಾಗಿರುವವರನ್ನು ಕಾಯಂ ಮಾಡಬೇಕು, ಅವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ನೀಡಬೇಕು ಎಂದು ಸರ್ಕಾರಕ್ಕೆ ವಿನಂತಿ ಮಾಡುವುದಾಗಿ ಹೇಳಿದರು.

ರಾಜ್ಯ ಸಮಿತಿ ಜಂಟಿ ಕಾರ್ಯದರ್ಶಿ ಸತೀಶ್, ಜಿಲ್ಲಾ ಸಂಘದ ಗೌರವಾಧ್ಯಕ್ಷ ಅಂಬ್ಲಿ ನಾಗರಾಜು, ಉಪಾಧ್ಯಕ್ಷ ಸುರೇಶ್, ಖಜಾಂಚಿ ಮಹೇಶ್, ನಿರ್ದೇಶಕರಾದ ಲಾಸ್ಯ ನಾಗರಾಜು, ಸುಮ, ಕಲ್ಪನಾ, ಪ್ರತಾಪ್, ಗೌರಣ್ಣ, ದತ್ತಾತ್ರೀ, ಭಾಗ್ಯ, ಪ್ರೇಮ್, ಜಗದೀಶ್, ಸರ್ಕಾರಿ ರಕ್ತ ಪರೀಕ್ಷಾ ತಂತ್ರಜ್ಞರ ಸಂಘದ ಅಧ್ಯಕ್ಷ ಮೋಹನ್‌ಕುಮಾರ್, ಕಾರ್ಯದರ್ಶಿ ಮಂಜುನಾಥ್, ಜಂಟಿ ಕಾರ್ಯದರ್ಶಿ ಸತೀಶ್, ನಿರ್ದೇಶಕರಾದ ನರಸಿಂಹಮೂರ್ತಿ, ಪದ್ಮರಾಜು, ಧೃವ, ಅರುಣ್ ಮೊದಲಾದವರು ಭಾಗವಹಿಸಿದ್ದರು.

## ರಿಲ್ಯಾಕ್ಸ್ ಮೂಡ್‌ನಲ್ಲಿ ಸಾಂಸ್ಕೃತಿಕ ನಗರ ಸುತ್ತಾಡಿದ ಒಡಿಶಾ ಕೈ ಶಾಸಕರು

ರಾಮನಗರ

ಒಡಿಶಾ ರಾಜ್ಯಸಭಾ ಚುನಾವಣೆಯಲ್ಲಿ ಅಡ್ಡಮತದಾನದ ಆತಂಕ ಹಾಗೂ "ಆಪರೇಷನ್ ಕಮಲ"ದ ಭೀತಿಯಿಂದ ಬೆಂಗಳೂರಿಗೆ ಶಿಫ್ಟ್ ಆಗಿರುವ ಒಡಿಶಾದ ಕಾಂಗ್ರೆಸ್ ಶಾಸಕರು, ಬಿಡದಿಯ ರೆಸಾರ್ಟ್ ವಾಸ್ತವ್ಯದ ನಡುವೆಯೇ ಶನಿವಾರ ಮೈಸೂರು ಪ್ರವಾಸ ಕೈಗೊಂಡಿದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆತಿಥ್ಯದಲ್ಲಿ ಬಿಡದಿಯ ವಂಡರ್ ಲಾ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿರುವ ಕೈ ಶಾಸಕರು, ಶನಿವಾರ ಬೆಳಗ್ಗೆ ಸಾಂಸ್ಕೃತಿಕ ನಗರಿ ಮೈಸೂರಿನತ್ತ ಮುಖಮಾಡಿದ್ದು, ಪ್ರವಾಸ ಮುಗಿಸಿ ರಾತ್ರಿ ವೇಳೆಗೆ ರೆಸಾರ್ಟ್‌ಗೆ ವಾಪಸ್ಸಾಗಲಿದ್ದಾರೆ. ಮೈಸೂರು ಪ್ರವಾಸದ ನೆಪದಲ್ಲಿ ರಿಲ್ಯಾಕ್ಸ್ ಮೂಡ್‌ನಲ್ಲಿರುವ ಶಾಸಕರು, ಸೋಮವಾರ ನಡೆಯಲಿರುವ ರಾಜ್ಯಸಭಾ ಚುನಾವಣೆ ಹಿನ್ನಲೆಯಲ್ಲಿ ಭಾನುವಾರ ಮಧ್ಯಾಹ್ನ ಬೆಂಗಳೂರಿನ ಕೆಂಪೇಗೌಡ ವಿಮಾನ ನಿಲ್ದಾಣದಿಂದ ಒಡಿಶಾಗೆ ಮರಳಲಿದ್ದಾರೆ.



ಶುಕ್ರವಾರ ಸಂಜೆ ವೇಳೆಗೆ ಬಿಡದಿಯ ರೆಸಾರ್ಟ್‌ಗೆ ಭೇಟಿನೀಡಿ ಒಡಿಶಾ ಶಾಸಕರೊಂದಿಗೆ ಚರ್ಚೆ ನಡೆಸಿದ್ದ ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ಶಾಸಕರು ಮೈಸೂರು ನೋಡುವ ಇಂಗಿತ ವ್ಯಕ್ತಪಡಿಸಿದ್ದಾರೆಂದು ಹೇಳಿದ್ದರು. ಅದರಂತೆಯೇ ಇಂದು ಬಿಗಿ ಭದ್ರತೆಯ ನಡುವೆ ಒಡಿಶಾದ ಎಂಟು ಮಂದಿ ಶಾಸಕರು ಹಾಗೂ ಅಲ್ಲಿನ ಪಿಸಿಸಿ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಮೈಸೂರಿನ ಪ್ರೇಕ್ಷಣೀಯ ಸ್ಥಳಗಳ ವೀಕ್ಷಣೆಗೆ ತೆರಳಿದ್ದಾರೆ. ಈ ಮೂಲಕ ರೆಸಾರ್ಟ್ ರಾಜಕಾರಣವನ್ನು ಕೇವಲ 'ಪ್ರವಾಸ' ಹಾಗೂ 'ಆತಿಥ್ಯ' ಎಂದು ಬಿಂಬಿಸುವ ಪ್ರಯತ್ನವನ್ನು ಕಾಂಗ್ರೆಸ್ ನಾಯಕರು ಮಾಡುತ್ತಿದ್ದಾರೆ.

ಒಡಿಶಾ ಶಾಸಕರನ್ನು ಪೊಲೀಸ್ ಬೆಂಗಾವಲು ಮತ್ತು ಸ್ಥಳೀಯ ಕಾಂಗ್ರೆಸ್ ಮುಖಂಡರ ಕಣ್ಗಾವಲಿನಲ್ಲಿ ಐಷರಾಮಿ ಎ.ಸಿ ಬಸ್ ಮೂಲಕ ಪ್ರವಾಸಕ್ಕೆ ಕರೆದೊಯ್ಯಲಾಗಿದ್ದು, ಮೊದಲಿಗೆ ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ತೆರಳಿದ ಶಾಸಕರು ದೇವಿಯ ದರ್ಶನ ಪಡೆದಿದ್ದಾರೆ. ಬಳಿಕ ಪ್ರಸಿದ್ಧ ಅಂಭಾವಿಲಾಸ ಅರಮನೆಯ ಸೌಂದರ್ಯವನ್ನು ಕಣ್ತುಂಬಿಕೊಂಡ ಶಾಸಕರು, ಮೈಸೂರಿನ ಹೆಮ್ಮೆಯ ಕೆಎಸ್‌ಐಸಿ ಘಟಕದಲ್ಲಿ ಸುತ್ತಾಡಿದ್ದಾರೆ. ಈ ವೇಳೆ ಕೆಲ ಶಾಸಕರು ಮೈಸೂರು ಸಿಲ್ಕ್ ಸೀರೆಗಳನ್ನು ಖರೀದಿಸಿದ್ದಾರೆ ಎನ್ನಲಾಗಿದೆ.

ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ.ಎನ್.ನಟರಾಜು ಗಾಣಕಲ್ ಹಾಗೂ ಕೆಪಿಸಿಸಿ ಸದಸ್ಯ ಬ್ಯಾಟಪ್ಪ ಅವರ ನೇತೃತ್ವದಲ್ಲಿ ಬಿಡದಿ ಭಾಗದ ಸ್ಥಳೀಯ ಕಾಂಗ್ರೆಸ್ ಮುಖಂಡರು ಪ್ರವಾಸದ ಉಸ್ತುವಾರಿಯ ಹೊಣೆ ಹೊತ್ತಿದ್ದಾರೆ. ಒಡಿಶಾ ಶಾಸಕರಿಗೆ ಚಾಮುಂಡಿ ಬೆಟ್ಟದಲ್ಲಿ ಮೈಸೂರು ಪೇಟ ಮತ್ತು ಶಾಲು ಹೊದಿಸಿ ಸಾಂಪ್ರದಾಯಕವಾಗಿ ಸನ್ಮಾನಿಸಲಾಗಿದೆ.

ಬಿಜೆಪಿಯ ಗಾಳಕ್ಕೆ ಸಿಲುಕದಂತೆ ಒಡಿಶಾ ಕಾಂಗ್ರೆಸ್ ಶಾಸಕರಾದ ರಾಜನ್ ಎಕ್ಕ, ಅಶೋಕ್ ದಾಸ್, ಅಪ್ಪಲಕುಮಾರ್ ಸ್ವಾಮಿ, ಮಂಗು ಕಿಲ್ಲೋ, ಪವಿತ್ರ ಸೌಂತಾ, ನೀಲಮಾಧವ್ ಹಿಕ್ಕ, ಪ್ರಫುಲ್ಲ ಪ್ರಧಾನ್ ಹಾಗೂ ಸತ್ಯಜಿತ್ ಗೋಮಂಗೋ ಅವರನ್ನು ಡಿ.ಕೆ. ಶಿವಕುಮಾರ್ ಅವರ ಆಪ್ತ ಕಾಂಗ್ರೆಸ್ ಮುಖಂಡರ ಕಣ್ಗಾವಲಿನಲ್ಲಿ ವಂಡರ್ ಲಾ ರೆಸಾರ್ಟ್‌ನಲ್ಲಿರಿಸಲಾಗಿದೆ.

## ವರದಕ್ಷಿಣೆ ವಿರೋಧಿ ವೇದಿಕೆಯಿಂದ ಮಹಿಳಾ ದಿನಾಚರಣೆ

ತುಮಕೂರು

ಯಾವ ಕುಟುಂಬದಲ್ಲಿ ಮಹಿಳೆ ನೆಮ್ಮದಿಯಾಗಿ ಇರುವಳೋ ಅಂತಹ ಕುಟುಂಬಗಳು ಸಮೃದ್ಧಿ ಹೊಂದುತ್ತವೆ. ಇಂತಹ ಪ್ರೀತಿಯ ಹುಡುಕಾಟದಲ್ಲಿಯೇ ದೌರ್ಜನ್ಯ ರಹಿತ ಸಮಾಜ ನಿರ್ಮಾಣ ಮಾಡಬೇಕಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಡಾ. ಎಸ್. ಸಿದ್ದರಾಮಣ್ಣ ಕರೆ ನೀಡಿದರು.

ವರದಕ್ಷಿಣೆ ವಿರೋಧಿ ವೇದಿಕೆ, ಸಾಂತ್ವನ ಕೇಂದ್ರ, ಕರ್ನಾಟಕ ರಾಜ್ಯ ನಿವೃತ್ತ ಸರ್ಕಾರಿ ನೌಕರರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಕನ್ನಡ ಭವನದಲ್ಲಿ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ–ಸಾಧಕಿಯರಿಗೆ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, 1911 ರಿಂದಲೂ ಮಹಿಳಾ ಹೋರಾಟಗಳು ನಡೆದುಕೊಂಡು ಬಂದಿವೆ. ವಿಶ್ವ ಮಹಿಳಾ ದಿನಾಚರಣೆಗೆ ತನ್ನದೇ ಆದ ಐತಿಹಾಸಿಕ



ಮಹತ್ವವಿದೆ. ಇತಿಹಾಸವನ್ನು ಅರಿಯುತ್ತಲೇ ನಮ್ಮ ಸಮಾಜವನ್ನು ಉತ್ತಮ ಸ್ಥಿತಿಯಲ್ಲಿಡಲು ನಾವೆಲ್ಲ ಶ್ರಮಿಸಬೇಕು. ಅಸಮಾನತೆ ಹಳಿಯಬೇಕು. ದೌರ್ಜನ್ಯ ರಹಿತ ಸಮಾಜ ನಿರ್ಮಾಣವಾಗಬೇಕು. ತಾರತಮ್ಯ ನಿವಾರಣೆಯಾಗಿ ಸಮಾನತೆಯ ಸಮಾಜ ನಿರ್ಮಾಣವಾಗಬೇಕು. ಇದಕ್ಕಾಗಿ ಇಂತಹ ಸಮಾರಂಭಗಳು ಅತ್ಯವಶ್ಯಕ ಎಂದರು.

ಅಧ್ಯಕ್ಷೀಯ ನುಡಿಗಳನ್ನಾಡಿದ ಲೇಖಕಿ, ವರದಕ್ಷಿಣೆ ವಿರೋಧಿ ವೇದಿಕೆ ಅಧ್ಯಕ್ಷೆ ಎಂ.ಸಿ.ಲಲಿತ ಮಾತನಾಡಿ ಆಧುನಿಕತೆ ಬೆಳೆದಂತೆ ದೌರ್ಜನ್ಯದ ಸ್ವರೂಪಗಳೂ ಬದಲಾಗುತ್ತಿವೆ. ಸಮಾನತೆ ಎಂಬುದು ಗ್ರಾಮಾಂತರ ಪ್ರದೇಶಗಳಲ್ಲಿ ಇಂದಿಗೂ ಸಾಧ್ಯವಾಗಿಲ್ಲ. ದುಡಿಯುವ ಮಹಿಳೆಯರಂತೂ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಕುಟುಂಬದ ಒಳಗೆ ಮತ್ತು ಹೊರಗೆ ಎರಡೂ ಕಡೆ ತನಗಾಗುವ ಕಷ್ಟಕಾರ್ಪಣ್ಯಗಳನ್ನು ಸಹಿಸಿಕೊಂಡೇ ಬದುಕು ಸಾಗಿಸುತ್ತಿದ್ದಾಳೆ. ಇಂತಹ ಸಂದರ್ಭದಲ್ಲಿ ಪ್ರೀತಿ, ಸಹನೆಯ ಮಾತುಗಳು ಮುಖ್ಯವಾಗುತ್ತವೆ. ಅಂತಹ ವಾತಾವರಣ ನಿರ್ಮಾಣವಾಗಲಿ ಎಂದು ಆಶಿಸಿದರು. ಆಶಯ ನುಡಿಗಳನ್ನಾಡಿದ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷೆ ಬಾ.ಹ. ರಮಾಕುಮಾರಿ ಹೋರಾಟಗಳು ಮತ್ತು ಪ್ರಶಸ್ತಿಗಳು ಅರ್ಥ ಕಳೆದುಕೊಳ್ಳುತ್ತಿರುವ ಈ ದಿನಮಾನಗಳಲ್ಲಿ ಪ್ರಶಸ್ತಿಗಾಗಿ ಅರ್ಹರನ್ನು ಹುಡುಕುವುದೇ ಕಷ್ಟವಾಗಿದೆ. ನಿರಂತರವಾಗಿ ಸಮಾಜಮುಖಿಯಾಗಿ ಕೆಲಸ ಮಾಡಿದವರನ್ನು ಗುರುತಿಸಿದಾಗ ಆ ಪ್ರಶಸ್ತಿಗೆ ಅರ್ಥ ಬರುತ್ತದೆ. ಅಂತಹ ಕೆಲಸವನ್ನು 25 ವರ್ಷಗಳಿಂದ ವರದಕ್ಷಿಣೆ ವಿರೋಧಿ ವೇದಿಕೆ ಮುನ್ನಡೆಸಿಕೊಂಡು ಬಂದಿರುವುದು ಸ್ವಾಗತಾರ್ಹ. ಇಲ್ಲಿ ಗುರುತಿಸಲ್ಪಟ್ಟಿರುವ ಸಾಲು ಮರದ ತಿಮ್ಮಕ್ಕ, ಸೂಲಗಿತ್ತಿ ನರಸಮ್ಮ ಮೊದಲಾದವರು ರಾಷ್ಟ್ರ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ. ಪ್ರಶಸ್ತಿಯ ಜೊತೆ ಜೊತೆಗೆ ವೇದಿಕೆಯು ಸಾಂತ್ವನ ಕೇಂದ್ರದ ಮೂಲಕ ಕೌಟುಂಬಿಕ ದೌರ್ಜನ್ಯ ಪ್ರಕರಣಗಳನ್ನು ಇತ್ಯರ್ಥಪಡಿಸುತ್ತಾ ಬಂದಿರುವುದು ಅತ್ಯಂತ ಹೆಮ್ಮೆಯ ವಿಷಯ ಎಂದರು.

ಡಾ. ಜಿ. ಪರಮೇಶ್ವರ್ ಸ್ಥಾಪಿತ ಗಂಗಮಾಳಮ್ಮ ಗಂಗಾಧರಯ್ಯ ನೆನಪಿನ ಮಹಿಳಾ ಚೇತನ ಪ್ರಶಸ್ತಿಯನ್ನು ಕೊರಟಗೆರೆ ತಾಲ್ಲೂಕು ಹೊಸಹಳ್ಳಿಯ ಶ್ರೀದೇವಿ, ದಿ. ಚೆನ್ನಿಗಪ್ಪ ಅವರು ಸ್ಥಾಪಿಸಿರುವ ಚನ್ನಮ್ಮ ಚನ್ನರಾಯಪ್ಪ ನೆನಪಿನ ಮಹಿಳಾ ಸಾಧಕಿ ಪ್ರಶಸ್ತಿಯನ್ನು ಚಿಕ್ಕನಾಯಕನಹಳ್ಳಿಯ ಎನ್.ಇಂದಿರಮ್ಮ ಅವರಿಗೆ, ಸ್ವಾತಂತ್ರ್ಯ ಹೋರಾಟಗಾರ ಟಿ.ಆರ್.ರೇವಣ್ಣ ಅವರು ಪತ್ನಿ ಸರೋಜಮ್ಮ ಹೆಸರಿನಲ್ಲಿ ಸ್ಥಾಪಿಸಿರುವ ಶ್ರಮಜ್ಯೋತಿ ಪ್ರಶಸ್ತಿಯನ್ನು ತುಮಕೂರಿನ ಟಿ.ಸಿ.ಪ್ರೇಮಲತಾ ಅವರಿಗೆ ಪ್ರದಾನ ಮಾಡಲಾಯಿತು. ತಲಾ 5 ಸಾವಿರ ರೂ. ನಗದು, ಪ್ರಶಸ್ತಿ ಫಲಕ ಹಾಗೂ ಸನ್ಮಾನವನ್ನು ಇದು ಒಳಗೊಂಡಿದೆ. ಸಮಾರಂಭದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಟಿ.ಆರ್. ರೇವಣ್ಣ, ಸರ್ಕಾರಿ ನಿವೃತ್ತ ನೌಕರರ ಸಂಘದ ಉಪಾಧ್ಯಕ್ಷ ಅನಂತರಾಮಯ್ಯ, ಖಜಾಂಚಿ ನರಸಿಂಹರೆಡ್ಡಿ ಮತ್ತಿತರರು ಉಪಸ್ಥಿತರಿದ್ದರು.

## ಸರ್ಕಾರಿ ಜಮೀನು ಒತ್ತುವರಿ ಸಂಚು ವಿಫಲ

ಮಾಲೂರು

ನಗರದ ರೈಲ್ವೆ ಸೇತುವೆ ಬಳಿಯ ಸಾರ್ವಜನಿಕ ಹಿತಾಸಕ್ತಿಗೆ ಮೀಸಲಾಗಿದ್ದ ಕೋಟ್ಯಂತರ ರೂಪಾಯಿ ಬೆಲೆಬಾಳುವ ಸರ್ಕಾರಿ ಜಮೀನನ್ನು ಒತ್ತುವರಿ ಮಾಡಿಕೊಂಡಿದ್ದ ಖಾಸಗಿ ವ್ಯಕ್ತಿಗಳು, ಅಧಿಕಾರಿಗಳ ವಿರುದ್ಧ ಹೂಡಿದ್ದ ಅರ್ಜಿಯನ್ನು ನಗರದ ಜೆಎಂಎಫ್‌ಸಿ ನ್ಯಾಯಾಲಯ ವಜಾಗೊಳಿಸಿ ಆದೇಶಿಸಿದೆ.

ಪ್ರಕರಣದ ಹಿನ್ನೆಲೆ: ಜೈ ಪುನೀತ್ ಎಂಬುವವರು ರೈಲ್ವೆ ಸೇತುವೆ ಬಳಿ ಖರೀದಿಸಿದ್ದ ಜಮೀನಿನ ಪಕ್ಕದಲ್ಲೇ ಇದ್ದ, ರೈಲ್ವೆ ಮೇಲ್ಸೇತುವೆ ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನವಾಗಿದ್ದ ಸರ್ಕಾರಿ ಜಮೀನನ್ನು (ಸರ್ವೆ ನಂ 229/2 ಮತ್ತು 233/2) ಒತ್ತುವರಿ ಮಾಡಿಕೊಂಡು ಕಲ್ಲು ಚಪ್ಪಡಿ ಹಾಕುತ್ತಿದ್ದರು. ಇದನ್ನು ಪ್ರಶ್ನಿಸಿದ ತಹಶೀಲ್ದಾರ್ ಹಾಗೂ ಲೋಕೋಪಯೋಗಿ ಎಂಜಿನಿಯರ್ ಅವರು ಕಾಮಗಾರಿ ತಡೆದಿದ್ದರು. ಇದನ್ನು ವಿರೋಧಿಸಿ ಖಾಸಗಿ ವ್ಯಕ್ತಿಗಳು ಅಧಿಕಾರಿಗಳ ವಿರುದ್ಧವೇ ನ್ಯಾಯಾಲಯದಲ್ಲಿ ದಾವೆ ಹೂಡಿ, ಅಧಿಕಾರಿಗಳು ತಮ್ಮ ಜಮೀನಿಗೆ ಬರದಂತೆ ನಿರ್ಬಂಧ ಹೇರಬೇಕೆಂದು ಕೋರಿದ್ದರು.

ಸರ್ಕಾರದ ಪರ ಭರ್ಜರಿ ವಾದ: ಸರ್ಕಾರಿ ಪರ ವಕೀಲರಾದ ರೂಪ ಅವರು ಭೂಸ್ವಾಧೀನದ ಅಧಿಕೃತ ದಾಖಲೆಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿ, "ವಾದಿಗಳು ಸಾರ್ವಜನಿಕ ಹಿತಾಸಕ್ತಿಗೆ ಮಂಜೂರಾಗಿರುವ ಜಮೀನನ್ನು ಒತ್ತುವರಿ ಮಾಡಿ ಕಾಂಪೌಂಡ್ ನಿರ್ಮಿಸುತ್ತಿದ್ದಾರೆ. ಇದನ್ನು ಪ್ರಶ್ನಿಸಿದ್ದಕ್ಕೆ ಅಧಿಕಾರಿಗಳ ಮೇಲೆ ಸುಳ್ಳು ದಾವೆ ಹೂಡಲಾಗಿದೆ" ಎಂದು ವಾದ ಮಂಡಿಸಿದರು.

ನ್ಯಾಯಾಲಯದ ತೀರ್ಪು: ವಾದ ಪ್ರತಿವಾದ ಆಲಿಸಿದ ನ್ಯಾಯಾಧೀಶರಾದ ಎಚ್.ಜಿ. ಶಿಲ್ಪ ಅವರು, ಜಮೀನಿನ ಹಕ್ಕಿನ ಬಗ್ಗೆ ಪೂರ್ಣ ಪ್ರಮಾಣದ ವಿಚಾರಣೆ ನಡೆಯಬೇಕಿದೆ ಎಂದು ಅಭಿಪ್ರಾಯಪಟ್ಟರಲ್ಲದೆ, ಸದ್ಯಕ್ಕೆ ವಾದಿಗಳು ಸರ್ಕಾರದ ವಿರುದ್ಧ ಹೂಡಿದ್ದ ಅರ್ಜಿಯನ್ನು ವಜಾ ಮಾಡಿ ಆದೇಶಿಸಿದರು. ಈ ತೀರ್ಪಿನಿಂದಾಗಿ ಸರ್ಕಾರದ ಆಸ್ತಿ ಸುರಕ್ಷಿತವಾದಂತಾಗಿದೆ.

## ವಿಕಲಚೇತನರು ದೇವರ ಮಕ್ಕಳು: ಶಾಸಕ ಜ್ಯೋತಿಗಣೇಶ್

ತುಮಕೂರು

ವಿಕಲಚೇತನರು ದೇವರ ಮಕ್ಕಳು, ಕಾರಣಾಂತರದಿಂದ ಅವರು ಅಂಗವೈಕಲ್ಯದಿಂದ ಜನಿಸಿರಬಹುದು, ಅವರನ್ನು ಚೆನ್ನಾಗಿ ನೋಡಿಕೊಳ್ಳುವ ಜವಾಬ್ದಾರಿ ಸಮಾಜದ ಎಲ್ಲರ ಮೇಲೂ ಇದೆ ಎಂದು ಶಾಸಕ ಜಿ.ಬಿ. ಜ್ಯೋತಿಗಣೇಶ್ ಹೇಳಿದರು.

ಶನಿವಾರ ನಗರದ ಸಿದ್ಧಿವಿನಾಯಕ ಸಮುದಾಯ ಭವನದಲ್ಲಿ ರಾಜ್ಯ ಕಿವುಡರ ಕ್ರೀಡಾ ಒಕ್ಕೂಟ ಏರ್ಪಡಿಸಿದ್ದ ಒಕ್ಕೂಟದ ಬೆಳ್ಳಿ ಮಹೋತ್ಸವ ಆಚರಣೆ ಸಮಾರಂಭ ಉದ್ಘಾಟಿಸಿ ಮಾತನಾಡಿದ ಶಾಸಕರು, ವಿಕಲಚೇತನರ ಕಲ್ಯಾಣಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವಾರು ಕಾರ್ಯಕ್ರಮಗಳನ್ನು ರೂಪಿಸಿವೆ. ಅವುಗಳ ಸದ್ಬಳಕೆ ಮಾಡಿಕೊಳ್ಳಲು ಪ್ರೋತ್ಸಾಹಿಸಬೇಕು. ವಿಕಲಚೇತನರನ್ನು ಎಲ್ಲರ ಜೊತೆ ಸಮಾಜದ ಮುಖ್ಯವಾಹಿನಿಗೆ ಕರೆತರಲು ಎಲ್ಲರೂ ಕಾಳಜಿವಹಿಸಬೇಕು ಎಂದರು.

ವಿಕಲಚೇತನರು ಗೌರವದಿಂದ, ಸ್ವಾಭಿಮಾನದಿಂದ ಬದುಕುವಂತಹ ವಾತಾವರಣ ನಿರ್ಮಾಣ



ಮಾಡಬೇಕು, ಬೇಧಭಾವ ಮಾಡದೆ ಅವರು ನೆಮ್ಮದಿಯಾಗಿ ಬಾಳಲು ನೈತಿಕ ಬೆಂಬಲ ನೀಡಬೇಕು ಎಂದು ಶಾಸಕರು ಹೇಳಿದರು.

ಸಾಧನೆ ಮಾಡಿದ ಕಿವುಡ ಕ್ರೀಡಾಪಟುಗಳನ್ನು ಸನ್ಮಾನಿಸಿ ಮಾತನಾಡಿದ ಜಿಲ್ಲಾಧಿಕಾರಿ ಶುಭಾ ಕಲ್ಯಾಣ್, ಅಂಗವೈಕಲ್ಯದ ನಡುವೆಯೂ ಕ್ರೀಡೆಯಲ್ಲಿ ಸಾಧನೆ ಮಾಡಿರುವ ನಿಮ್ಮ ಸಾಧನೆ ನಮಗೆ ಪ್ರೇರಣೆಯಾಗುತ್ತದೆ. ನಾವೂ ಏನನ್ನಾದರೂ ಸಾಧಿಸಲು ಮತ್ತಷ್ಟು ಹುರುತು ಬರುತ್ತದೆ. ನಿಮ್ಮ ಬಗ್ಗೆ ನಮಗೆ ಹೆಮ್ಮೆ ಇದೆ ಎಂದು ಹೇಳಿದರು.

ನಗರದಲ್ಲಿ ಉದ್ಯೋಗ ಹಬ್ಬ:

ವಿಕಲಚೇತನರಿಗೆ ಉದ್ಯೋಗಾವಕಾಶ ಕಲ್ಪಿಸಬೇಕು ಎನ್ನುವ ಕಾರಣಕ್ಕೆ ನಗರದಲ್ಲಿ ಉದ್ಯೋಗ ಹಬ್ಬ ಹಮ್ಮಿಕೊಳ್ಳಲು ಉದ್ದೇಶಿಸಲಾಗಿದೆ. ಆಸಕ್ತ, ಅರ್ಹ ವಿಕಲಚೇತನರು ಇದರ ಪ್ರಯೋಜನ ಪಡೆದು ಉದ್ಯೋಗ ಪಡೆಯಬಹುದು ಎಂದು ಶುಭಾ ಕಲ್ಯಾಣ್ ಹೇಳಿದರು.

ಟಿಎಂಸಿಸಿ ಬ್ಯಾಂಕ್ ಅಧ್ಯಕ್ಷ ಡಾ. ಎನ್.ಎಸ್. ಜಯಕುಮಾರ್ ಮಾತನಾಡಿ, ವಿಕಲಚೇತನರ ಜೊತೆ ನಾವಿದ್ದೇವೆ. ಅವರು ಕೀಳರಿಮೆ ಬಿಟ್ಟು ಸಾಧನೆಯತ್ತ ಗಮನ ಕೊಡಲಿ ಎಂದ ಅವರು, ಈ ಸಂಸ್ಥೆಯ ಜಿಲ್ಲಾ ಘಟಕಕ್ಕೆ ತಮ್ಮ ಸಂಸ್ಥೆಯಿಂದ 3 ಲಕ್ಷ ರೂ. ದೇಣಿಗೆ ನೀಡುವುದಾಗಿ ಪ್ರಕಟಿಸಿದರು.

ಈ ವೇಳೆ ರಾಷ್ಟ್ರೀಯ, ರಾಜ್ಯಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿದ ಕಿವುಡ ಕ್ರೀಡಾಪಟುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಭಾರತೀಯ ಕಿವುಡರ ಕ್ರೀಡಾ ಮಂಡಳಿ ಅಧ್ಯಕ್ಷ ವಿ.ಕುಮಾರ್, ಆಡಳಿತ ಮಂಡಳಿ ಸದಸ್ಯೆ ಶೋಭಾ ಗಣೇಶನ್, ರಾಜ್ಯ ಕಿವುಡರ ಸಂಘದ ಅಧ್ಯಕ್ಷ ಸುನಿಲ ಎಂ. ಕಂದೂರ, ಉಪಾಧ್ಯಕ್ಷ ಕಾಡಪ್ಪ ಬಿ. ಗುಡದಿನ್ನಿ, ಕಾರ್ಯದರ್ಶಿ ಜಿ.ಎಸ್. ನವೀನ್‌ಕುಮಾರ್, ಜಿಲ್ಲಾ ಕಿವುಡರ ಸಂಘದ ಕಾರ್ಯದರ್ಶಿ ಹೆಚ್. ಎಂ. ರವೀಶ್, ಸಲಹೆಗಾರರಾದ ಗಾಯತ್ರಿ ರವೀಶ್, ವಿವಿಧ ಘಟಕಗಳ ಮುಖಂಡರಾದ ಟಿ.ವಿ. ಮನೋಹರ್, ಜೆ.ವಿ.ಮಹೇಶ್ ಶರ್ಮಾ, ಎಂ.ಜಿ. ನಾಗೇಂದ್ರನ್, ಕೆ.ಎಸ್.ಉಮಾಶಂಕರ್, ಎಸ್.ಎಸ್. ದೇವರಾಜು ಮೊದಲಾದವರು ಭಾಗವಹಿಸಿದ್ದರು.

## ಅಮಾನಿಕೆರೆಗೆ ಎಸಿ ದಿಢೀರ್ ಭೇಟಿ



ಶ್ರೀನಿವಾಸಪುರ

ಪಟ್ಟಣದ ಅಮಾನಿಕೆರೆ ಅಂಗಳದಲ್ಲಿ ರಾಜಾರೋಷವಾಗಿ ನಡೆಯುತ್ತಿರುವ ಅಕ್ರಮ ಮರಳು ಮತ್ತು ಮಣ್ಣು ದಂದೆಯ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ, ಉಪವಿಭಾಗಾಧಿಕಾರಿ ಜಂಬಗಿ ರೇಣುಕಾಪ್ರಸಾದ್ ದಿಲೀಪ್ ಅವರು ಶನಿವಾರ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಸ್ಥಳ ಪರಿಶೀಲನೆ ಮತ್ತು ಆಕ್ರೋಶ: ಕೆರೆಯಂಗಳದ ವಿವಿಧೆಡೆ ಮರಳು ಮತ್ತು ಮಣ್ಣು ತೆಗೆದಿರುವ ಗುರುತುಗಳನ್ನು ವೀಕ್ಷಿಸಿದ ಎಸಿ ಅವರು, ಅಕ್ರಮ ದಂದೆಯ ಗಂಭೀರತೆಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಕೆರೆಗಳನ್ನು ಸಂರಕ್ಷಿಸಬೇಕಾದ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳ ನಿರ್ಲಕ್ಷ್ಯವೇ ಇಂತಹ ಅಕ್ರಮಗಳಿಗೆ ದಾರಿ ಮಾಡಿಕೊಡುತ್ತಿದೆ ಎಂದು ಅವರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳಿಗೆ ಎಚ್ಚರಿಕೆ: "ಕೆರೆಗಳ ಸಂರಕ್ಷಣೆ ಇಲಾಖೆಯ ಆದ್ಯ ಕರ್ತವ್ಯ. ಅಧಿಕಾರಿಗಳು ಕಟ್ಟುನಿಟ್ಟಾಗಿ ಕಾರ್ಯನಿರ್ವಹಿಸಿದ್ದರೆ ಇಂತಹ ದಂದೆಗಳು ನಡೆಯುತ್ತಿರಲಿಲ್ಲ. ಇಲಾಖಾಧಿಕಾರಿಗಳು ಸದಾ ಜಾಗರೂಕರಾಗಿರಬೇಕು ಮತ್ತು ಅಕ್ರಮಗಳ ಬಗ್ಗೆ ತಕ್ಷಣವೇ ಮಾಹಿತಿ ಸಂಗ್ರಹಿಸಿ ಕ್ರಮ ಕೈಗೊಳ್ಳಬೇಕು," ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು. ಕೆರೆಗಳ ಒತ್ತುವರಿ ಹಾಗೂ ದಂದೆಯ ಬಗ್ಗೆ ಗಂಭೀರವಾಗಿ ಪರಿಶೀಲಿಸಿ ವರದಿ ನೀಡುವಂತೆ ಸ್ಥಳೀಯ ಅಧಿಕಾರಿಗಳಿಗೆ ಆದೇಶಿಸಿದರು.

ಈ ಸಂದರ್ಭದಲ್ಲಿ ತಹಶೀಲ್ದಾರ್ ಜಿ.ಎನ್. ಸುದೀಂದ್ರ, ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜ್, ಕಂದಾಯ ನಿರೀಕ್ಷಕ ಮಂಜುನಾಥ್ ಹಾಗೂ ಇತರ ಸಿಬ್ಬಂದಿ ಹಾಜರಿದ್ದರು.

## ಮಾತೃಭಾಷೆಯಲ್ಲಿ ಮಾತ್ರ ಭಾವನಾತ್ಮಕ ಅಭಿವ್ಯಕ್ತಿ ಸಾಧ್ಯ

ಬಳ್ಳಾರಿ

"ಮಾತೃಭಾಷೆಯಲ್ಲಿ ಮಾತ್ರ ಮನುಷ್ಯ ತನ್ನ ಭಾವನಾತ್ಮಕ ಸೂಕ್ಷ್ಮ ಸಂವೇದನೆಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಅಭಿವ್ಯಕ್ತಿಸಲು ಸಾಧ್ಯ," ಎಂದು ಡಾ. ರಾಜಶೇಖರ ಎಸ್. ಗಾಣಿಗೇರ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ನಗರದ ಶ್ರೀ ಗುರು ತಿಪ್ಪೇರುದ್ರ ಪದವಿ ಮಹಾವಿದ್ಯಾಲಯದಲ್ಲಿ ಶನಿವಾರ ಹಮ್ಮಿಕೊಂಡಿದ್ದ 'ದಿ. ರಾವ್ ಬಹದ್ದೂರ್ ವೈ. ಮಹಾಬಲೇಶ್ವರಪ್ಪ ಸ್ಮಾರಕ ದತ್ತಿ' ಹಾಗೂ 'ದಿ. ಕುಪ್ಪಗಲ್ಲು ನಾಗಪ್ಪ ಸ್ಮಾರಕ ದತ್ತಿ' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕನ್ನಡ ಉಳಿವಿಗಾಗಿ ಶ್ರಮಿಸುವುದು ಅನಿವಾರ್ಯ: "ಜಾಗತೀಕರಣದ ಈ ಯುಗದಲ್ಲಿ ಇಂಗ್ಲಿಷ್ ಸರ್ವವ್ಯಾಪಿಯಾಗುತ್ತಿದೆ. ಇಂತಹ ಸಂದರ್ಭದಲ್ಲಿ ಮಾತೃಭಾಷೆಗಳ ಉಳಿವಿಗಾಗಿ ನಾವೆಲ್ಲರೂ ಶ್ರಮಿಸುವುದು ಅನಿವಾರ್ಯವಾಗಿದೆ. ಕನ್ನಡವು ಕೇವಲ ಭಾಷೆಯಾಗದೆ ನಮ್ಮ ಬದುಕಿನ ಅವಿಭಾಜ್ಯ ಅಂಗವಾಗಬೇಕು," ಎಂದು ಅವರು ಕರೆ ನೀಡಿದರು.

ಬೇಂದ್ರೆ ಸಾಹಿತ್ಯದಲ್ಲಿ ಜೀವನ ಪ್ರೀತಿ: ದ.ರಾ. ಬೇಂದ್ರೆಯವರ ಕುರಿತು ವಿಶೇಷ ಉಪನ್ಯಾಸ ನೀಡಿದ




ಸತ್ಯಂ ಶಿಕ್ಷಣ ಸಂಸ್ಥೆಯ ಹಿರಿಯ ಉಪನ್ಯಾಸಕ ಅಲಂಬಾಷಾ, "ವರಕವಿ ಬೇಂದ್ರೆಯವರು ತಮ್ಮ ಜೀವನದುದ್ದಕ್ಕೂ ಸಂಕಷ್ಟಗಳ ಸರಮಾಲೆಯನ್ನೇ ಎದುರಿಸಿದರು. ಆದರೂ, 'ಸಮರಸವೇ ಜೀವನ' ಎಂದು ಸಾರುತ್ತಾ ತಮ್ಮ ಸಾಹಿತ್ಯದಲ್ಲಿ ಅದ್ಭುತ ಜೀವನ ಪ್ರೀತಿಯನ್ನು ಒಡಮೂಡಿಸಿದವರು," ಎಂದು ಬಣ್ಣಿಸಿದರು.

ಗಡಿನಾಡಿನಲ್ಲಿ ಕಸಾಪ ಕಾರ್ಯ ಶ್ಲಾಘನೀಯ: ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಅಧ್ಯಕ್ಷ ಎಸ್.ಎನ್. ರುದ್ರಪ್ಪ ಮಾತನಾಡಿ, "ಗಡಿನಾಡಿನ ಜನಮನದಲ್ಲಿ ಕನ್ನಡ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪಸರಿಸುವ ಕಸಾಪ ಕಾರ್ಯ ಶ್ಲಾಘನೀಯ," ಎಂದರು.

ವೇದಿಕೆಯಲ್ಲಿ ಹಿರಿಯ ಪತ್ರಕರ್ತ ಎಂ.ಇ. ಜೋಷಿ, ಜಿ. ಶಂಕರ್, ದತ್ತಿ ದಾನಿಗಳ ಪುತ್ರ ಕುಪ್ಪಗಲ್ಲು ವೀರೇಶ್, ಪುತ್ರಿ ಕುಪ್ಪಗಲ್ಲು ಗಿರಿಜಾ ಹಾಗೂ ಮುಂಡಾಸದ ಮಲ್ಲಿಕಾರ್ಜುನ ಉಪಸ್ಥಿತರಿದ್ದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಡಾ. ನಿಷ್ಠಿ ರುದ್ರಪ್ಪ ಪ್ರಾಸ್ತಾವಿಕವಾಗಿ ಮಾತನಾಡಿದರು. ಉಪನ್ಯಾಸಕಿ ಪದ್ಮಾವತಿ ಕಾರ್ಯಕ್ರಮ ನಿರೂಪಿಸಿದರು, ಸೌಮ್ಯ ಸ್ವಾಗತಿಸಿದರು ಮತ್ತು ಬಿ. ಚಂದ್ರಶೇಖರ ಆಚಾರ್ ವಂದಿಸಿದರು.

## ಸ್ವಾವಲಂಬಿ ಬದುಕಿನತ್ತ ಮಹಿಳೆ ಹೆಜ್ಜೆ ಹಾಕಲಿ: ವರಲಕ್ಷ್ಮೀ

ದೊಡ್ಡಬಳ್ಳಾಪುರ

"ಮಹಿಳಾ ದಿನಾಚರಣೆಯು ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ಇದು ಮಹಿಳೆಯರ ಸಮಾನತೆಗಾಗಿ ನಡೆಯುತ್ತಿರುವ ನಿರಂತರ ಹೋರಾಟದ ಸಂಕೇತವಾಗಿದೆ," ಎಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ವರಲಕ್ಷ್ಮಿ. ವಿ ಅಭಿಪ್ರಾಯಪಟ್ಟರು.

ನಗರದ ಶ್ರೀ ದೇವರಾಜ್ ಅರಸ್ ವ್ಯವಹಾರ ನಿರ್ವಹಣಾ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. "ಒಂದು ಕಾಲದಲ್ಲಿ ಮನೆಯ ನಾಲ್ಕು ಗೋಡೆಗಳಿಗೆ ಸೀಮಿತವಾಗಿದ್ದ ಮಹಿಳೆ ಇಂದು ಆಕಾಶವನ್ನೇ ಮುಟ್ಟಿದ್ದಾಳೆ. ಹೆಣ್ಣು ಈ ಸಮಾಜದ ಬೆನ್ನೆಲುಬು. ಪ್ರತಿಯೊಬ್ಬ ಮಹಿಳೆಯೂ ಸ್ವಾವಲಂಬಿಯಾಗಿ ಬದುಕು ಕಟ್ಟಿಕೊಳ್ಳಬೇಕು ಮತ್ತು ಬಾಹ್ಯ ಬಣ್ಣದ ಜಗತ್ತಿಗೆ ಮರುಳಾಗಬಾರದು," ಎಂದು ವಿದ್ಯಾರ್ಥಿನಿಯರಿಗೆ ಕಿವಿಮಾತು ಹೇಳಿದರು.

ಮಹಿಳೆಯೇ ಪುರುಷನ ಮಹಾಚೈತನ್ಯ: ಲೀಜಿಯನ್ ಎನರ್ಜಿ ಕಂಪನಿಯ ಮಾನವ ಸಂಪನ್ಮೂಲ ಅಧಿಕಾರಿ ಮಮತಾಶ್ರೀ ಮಾತನಾಡಿ, "ಮಹಿಳೆಯರಿಗೆ ಸರಿಯಾದ ಮಾರ್ಗದರ್ಶನ ನೀಡಿದರೆ ಅವರು ಅದ್ಭುತ ಸಾಧನೆ ಮಾಡುವುದಲ್ಲದೆ, ತಮ್ಮ ಜೊತೆ ಇರುವವರನ್ನೂ ಬೆಳೆಸುತ್ತಾರೆ. ತಾಯಿ, ಪತ್ನಿ, ಸೋದರಿ ಹಾಗೂ ಪುತ್ರಿಯ ರೂಪದಲ್ಲಿ ಮಹಿಳೆಯೇ ಪುರುಷನಿಗೆ ಶಕ್ತಿ ತುಂಬುವ ಮಹಾಚೈತನ್ಯ," ಎಂದರು.

ಅಪ್ರತಿಮ ತ್ಯಾಗದ ಮೂರ್ತಿ: ಶ್ರೀ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಜಿ. ರಾಜೇಂದ್ರ ಮಾತನಾಡಿ, ರಾಜಕೀಯ ಮತ್ತು ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿ ಮಹಿಳೆಯರು ಗಮನಾರ್ಹ ಪ್ರಗತಿ ಸಾಧಿಸಿದ್ದಾರೆ. ವೃತ್ತಿಜೀವನದ ಜೊತೆಗೆ ಕುಟುಂಬಕ್ಕೆ ಸಂಸ್ಕಾರ ನೀಡುವಲ್ಲಿ ಮಹಿಳೆಯ ಪಾತ್ರ ಬೆಲೆಕಟ್ಟಲಾಗದ್ದು ಎಂದು ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲರಾದ ಡಾ. ಗೌರಪ್ಪ ವಹಿಸಿದ್ದರು. ವೇದಿಕೆಯಲ್ಲಿ ಸಂಜೆ ಪದವಿ ಕಾಲೇಜಿನ ಪ್ರಾಂಶುಪಾಲ ಡಾ. ಎಂ. ಚಿಕ್ಕಣ್ಣ, ಉಪ ಪ್ರಾಂಶುಪಾಲ ಕೆ. ದಕ್ಷಿಣ ಮೂರ್ತಿ, ವಿಭಾಗೀಯ ಮುಖ್ಯಸ್ಥರಾದ ಬಾಬುಸಾಬಿ, ಚೈತ್ರ ಪಿ., ನಂದನ ಹಾಗೂ ಪ್ರಾಧ್ಯಾಪಕರಾದ ದಿವ್ಯ ಎನ್., ಪದ್ಮ ಬಿಂದು ಉಪಸ್ಥಿತರಿದ್ದರು.

## ಗುಜರಿ ಗೋದಾಮಿಗೆ ಆಕಸ್ಮಿಕ ಬೆಂಕಿ; ಲಕ್ಷಾಂತರ ಮೌಲ್ಯದ ವಸ್ತುಗಳು ಭಸ್ಮ

ಕನಕಪುರ

ನಗರದ ಬೆಂಗಳೂರು ರಸ್ತೆಯ ರೈಸ್ ಮಿಲ್ ಬಳಿ ಇರುವ ಗುಜರಿ ವಸ್ತುಗಳ ಗೋದಾಮಿಗೆ ಶನಿವಾರ ಮುಂಜಾನೆ ಆಕಸ್ಮಿಕ ಬೆಂಕಿ ತಗುಲಿ, ಲಕ್ಷಾಂತರ ರೂಪಾಯಿ ಮೌಲ್ಯದ ವಸ್ತುಗಳು ಸುಟ್ಟು ಕರಕಲಾಗಿವೆ.

ಘಟನೆ ವಿವರ:

ನಗರದ ಹೊರವಲಯದ ಸಣ್ಣ ಕೈಗಾರಿಕಾ ಪ್ರದೇಶದಲ್ಲಿರುವ ಈ ಗೋದಾಮಿನಲ್ಲಿ ಹಳೆಯ ಎಲೆಕ್ಟ್ರಾನಿಕ್ ವಸ್ತುಗಳು, ಪ್ಲಾಸ್ಟಿಕ್, ಟೈರ್ ಹಾಗೂ ಕಬ್ಬಿಣದ ಸಾಮಗ್ರಿಗಳನ್ನು ಸಂಗ್ರಹಿಸಿಡಲಾಗಿತ್ತು. ಬೆಳಿಗ್ಗೆ



ಗೋದಾಮಿನಿಂದ ದಟ್ಟವಾದ ಹೊಗೆ ಬರುತ್ತಿರುವುದನ್ನು ಗಮನಿಸಿದ ಸಾರ್ವಜನಿಕರು ಕೂಡಲೇ ಅಗ್ನಿಶಾಮಕ ದಳ ಮತ್ತು ಪೊಲೀಸರಿಗೆ ಮಾಹಿತಿ ನೀಡಿದರು.

ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸುವ ಕಾರ್ಯಾಚರಣೆ ನಡೆಸಿದರಾದರೂ, ಅಷ್ಟರಲ್ಲಾಗಲೇ ಬೆಂಕಿಯ ಕೆನ್ನಾಲಿಗೆಗೆ ಗೋದಾಮಿನಲ್ಲಿದ್ದ ಹಳೆಯ ಟಿವಿ, ಫ್ರಿಜ್, ಮಿಕ್ಸರ್ ಸೇರಿದಂತೆ ನೂರಾರು ಎಲೆಕ್ಟ್ರಾನಿಕ್ ಉಪಕರಣಗಳು ಸಂಪೂರ್ಣ ಭಸ್ಮವಾಗಿದ್ದವು. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ.

ಈ ಸಂಬಂಧ ಕನಕಪುರ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಬೆಂಕಿ ತಗುಲಲು ನಿಖರ ಕಾರಣವೇನು ಎಂಬ ಬಗ್ಗೆ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

# ‘ಬೆಳ್ಳೂಟಿಯಲ್ಲಿ ಲಕ್ಷ್ಮೀ ಪೂಜೆಯ ಸಡಗರ’

ಶಿಡ್ಲಘಟ್ಟ

“ಮನುಷ್ಯನ ಜೀವನದಲ್ಲಿ ಧರ್ಮ, ಸಂಪತ್ತು, ಕಾಮ ಮತ್ತು ಮೋಕ್ಷ ಎಂಬ ನಾಲ್ಕು ಪುರುಷಾರ್ಥಗಳು ಪ್ರಮುಖವಾಗಿವೆ. ಧರ್ಮದ ತಳಹದಿಯ ಮೇಲೆ ಗಳಿಸಿದ ಸಂಪತ್ತು ಮಾತ್ರ ವ್ಯಕ್ತಿಗೆ ನಿಜವಾದ ನೆಮ್ಮದಿ ನೀಡಲು ಸಾಧ್ಯ,” ಎಂದು ಚಿಕ್ಕಬಳ್ಳಾಪುರದ ಶ್ರೀ ರಾಮಕೃಷ್ಣ ವಿವೇಕಾನಂದ ಮಠದ ಶ್ರೀ ಪೂರ್ಣಾನಂದ ಸ್ವಾಮೀಜಿ ಹೇಳಿದರು.

ತಾಲೂಕಿನ ಬೆಳ್ಳೂಟಿ ಗ್ರಾಮದ ಶ್ರೀ ಗುಟ್ಟಾಂಜನೇಯಸ್ವಾಮಿ ಕಲ್ಯಾಣ ಮಂಟಪದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಲಕ್ಷ್ಮೀಪೂಜಾ ಸಮಿತಿ ಹಾಗೂ ಬೆಳ್ಳೂಟಿ ಪ್ರಗತಿ ಬಂಧು ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಸಾಮೂಹಿಕ ಶ್ರೀ ಲಕ್ಷ್ಮೀಪೂಜೆ ಕಾರ್ಯಕ್ರಮದಲ್ಲಿ ಅವರು ಆಶೀರ್ವಚನ ನೀಡಿದರು.

ಧರ್ಮವೇ ಜೀವನದ ಆಧಾರ: ಸಮಾಜದಲ್ಲಿ ಇಂದು ಹಣವಿದ್ದರೂ ನೆಮ್ಮದಿ ಇಲ್ಲದಿರುವುದಕ್ಕೆ ಧರ್ಮದ ಕೊರತೆಯೇ ಕಾರಣ. ಭಗವಂತನ ಅನುಗ್ರಹವಿದ್ದರೆ ಮಾತ್ರ ಆರೋಗ್ಯ ಮತ್ತು ಶಾಂತಿ ನೆಲೆಸಲು ಸಾಧ್ಯ. ಈ ನಿಟ್ಟಿನಲ್ಲಿ ಧರ್ಮಸ್ಥಳ ಕ್ಷೇತ್ರವು ವಿದ್ಯಾ ದಾನ, ಆರೋಗ್ಯ ಮತ್ತು ಸಾಮಾಜಿಕ ಸೇವೆಯ ಮೂಲಕ ಸಮಾಜದ ಒಳಿತಿಗೆ ಶ್ರಮಿಸುತ್ತಿದೆ ಎಂದು ಸ್ವಾಮೀಜಿ ಶ್ಲಾಘಿಸಿದರು.

ಪ್ಲಾಸ್ಟಿಕ್ ಮುಕ್ತ ಗ್ರಾಮಕ್ಕೆ ಸಂಕಲ್ಪ: ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಕೆಎಂಎಫ್ ಮಾಜಿ ನಿರ್ದೇಶಕ ಆರ್. ಶ್ರೀನಿವಾಸ್ ರಾಮಯ್ಯ ಮಾತನಾಡಿ, “ಗ್ರಾಮೀಣ ಪ್ರದೇಶದಲ್ಲಿ ಪ್ಲಾಸ್ಟಿಕ್ ಬಳಕೆ ಭೂತವಾಗಿ ಕಾಡುತ್ತಿದೆ. ಎಲ್ಲೆಂದರಲ್ಲಿ ಕಸ ಎಸೆಯುವ ಅಭ್ಯಾಸ ಬಿಟ್ಟು, ಹಸಿ ಮತ್ತು ಒಣ ಕಸವನ್ನು ಪ್ರತ್ಯೇಕವಾಗಿ ವಿಲೇವಾರಿ ಮಾಡಬೇಕು. ಮಹಿಳಾ ಸಂಘಗಳು ಸ್ವಚ್ಛತೆಯ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಬೇಕು,” ಎಂದು ಕರೆ ನೀಡಿದರು.

ಸಮುದಾಯದ ಏಳಿಗೆಗೆ ಯೋಜನೆಗಳ ಪೂರಕ: ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಯೋಜನಾಧಿಕಾರಿ ಪ್ರಸಾದ್ ಮಾತನಾಡಿ, ಸಂಸ್ಥೆಯು ಬ್ಯಾಂಕ್ ಮತ್ತು ಜನರ ನಡುವೆ ಕೊಂಡಿಯಾಗಿ ಆರ್ಥಿಕ ಸಬಲೀಕರಣಕ್ಕೆ ಶ್ರಮಿಸುತ್ತಿದೆ. ಹಳ್ಳಿಗಳ ಕೆರೆಗಳ ಪುನಶ್ಚೇತನ, ದೇವಸ್ಥಾನಗಳ ಅಭಿವೃದ್ಧಿ ಹಾಗೂ ಬಡವರಿಗೆ ಪಿಂಚಣಿ ಸೇರಿದಂತೆ ಹತ್ತಾರು ಜನಪದ ಕಾರ್ಯಕ್ರಮಗಳನ್ನು ಯೋಜನೆ ಹಮ್ಮಿಕೊಂಡಿದೆ ಎಂದು ತಿಳಿಸಿದರು.

ವೇದಿಕೆಯಲ್ಲಿ ಬೆಳ್ಳೂಟಿ ಲಕ್ಷ್ಮೀಪೂಜಾ ಸಮಿತಿ ಅಧ್ಯಕ್ಷ ಹೆಚ್.ಕೆ. ಸುರೇಶ್, ರೈತ ಮುಖಂಡ ಮುನಿಕೆಂಪಣ್ಣ, ಯೋಗ ಶಿಕ್ಷಕ ಶ್ರೀನಿವಾಸ್, ಮೇಲ್ವಿಚಾರಕಿ ಮೇಘನಾ, ರಾಮಚಂದ್ರ, ಹುಜುಗೂರು ಬಚ್ಚೇಗೌಡ ಸೇರಿದಂತೆ ಹಲವು ಗಣ್ಯರು ಹಾಗೂ ಮಹಿಳಾ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.



# ಶಾಲಾ ಮಕ್ಕಳಿಗೆ ಲೇಖನಿ ವಿತರಣೆ



ಚಿಂತಾಮಣಿ

ಮಗಳ ಹುಟ್ಟುಹಬ್ಬ ಎಂದರೆ ಅದ್ದೂರಿ ಪಾರ್ಟಿ, ಕೇಕ್ ಕತ್ತರಿಸುವ ಸಂಸ್ಕೃತಿಯ ನಡುವೆ, ಸರ್ಕಾರಿ ಶಾಲಾ ಶಿಕ್ಷಕರೊಬ್ಬರು ತಮ್ಮ ಮಗಳ ಜನ್ಮದಿನವನ್ನು ಶಾಲಾ ಮಕ್ಕಳೊಂದಿಗೆ ಆಚರಿಸುವ ಮೂಲಕ ಮಾನವೀಯತೆ ಮೆರೆದಿದ್ದಾರೆ.

ತಾಲೂಕಿನ ಕೋಡೆಗಂಡ್ಲು ಗ್ರಾಮದ ನಿವಾಸಿ ಹಾಗೂ ಸರ್ಕಾರಿ ಶಾಲಾ ಶಿಕ್ಷಕ ಕೆ.ಎನ್. ಮಂಜುನಾಥ್ ಅವರು ತಮ್ಮ ಮಗಳಾದ ಎಂ. ಅಕ್ಷಯ ಅವರ 25ನೇ ಹುಟ್ಟುಹಬ್ಬದ ಅಂಗವಾಗಿ ಕೋಡೆಗಂಡ್ಲು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಗೆ ವಿಶೇಷ ಉಡುಗೊರೆ ನೀಡಿದರು.

ಲೇಖನಿ ಸಾಮಗ್ರಿ ಹಾಗೂ ಸಿಹಿ ಊಟ: ಕೆಂಚಾರ್ಲಹಳ್ಳಿ ಸಿಆರ್‌ಸಿಗೆ ಸೇರಿದ ಈ ಶಾಲೆಯಲ್ಲಿ 1 ರಿಂದ 7ನೇ ತರಗತಿಯವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಮಗಳ ಜನ್ಮದಿನದ ನೆನಪಿಗಾಗಿ ಉಚಿತ ಲೇಖನಿ ಸಾಮಗ್ರಿಗಳನ್ನು ವಿತರಿಸಲಾಯಿತು. ಅಷ್ಟೇ ಅಲ್ಲದೆ, ಶಾಲಾ ಮಕ್ಕಳಿಗೆ ಮತ್ತು ಸಿಬ್ಬಂದಿಗೆ ಸುರುಚಿಯಾದ ಸಿಹಿ ಊಟವನ್ನು ಉಣಬಡಿಸುವ ಮೂಲಕ ಸಂಭ್ರಮ ಹಂಚಿಕೊಂಡರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕಿ ರೇಖಾ, ಸಹ ಶಿಕ್ಷಕರಾದ ಕೆ. ಸತ್ಯನಾರಾಯಣಸ್ವಾಮಿ, ಸುಪ್ರಿಯ ಮೇರಿ ಜಪನ ರೆಬೆಲ್ಲು, ಅಡುಗೆ ಸಿಬ್ಬಂದಿ ಭಾಗ್ಯಮ್ಮ, ಶಕುಂತಲಮ್ಮ ಹಾಗೂ ಎಸ್‌ಡಿಎಂಸಿ ಅಧ್ಯಕ್ಷರು, ಸದಸ್ಯರು ಮತ್ತು ಪೋಷಕರು ಉಪಸ್ಥಿತರಿದ್ದು, ಮಂಜುನಾಥ್ ಕುಟುಂಬದ ಈ ಸಮಾಜಮುಖಿ ಕಾರ್ಯವನ್ನು ಶ್ಲಾಘಿಸಿದರು.

# ಯೋಗ ಶಿಬಿರಕ್ಕೆ ತೆರೆ

ಕನಕಪುರ

“ಇಂದಿನ ವೇಗದ ಜೀವನಶೈಲಿಯಲ್ಲಿ ಮನುಷ್ಯ ತನ್ನ ಆರೋಗ್ಯದ ಕಡೆಗೆ ಗಮನ ನೀಡದೆ ದೈಹಿಕ ಹಾಗೂ ಮಾನಸಿಕ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾನೆ.

ಇಂತಹ ಎಲ್ಲಾ ಒತ್ತಡಗಳನ್ನು ನಿವಾರಿಸಿ ಸಮತೋಲಿತ ಜೀವನ ನಡೆಸಲು ಯೋಗಾಭ್ಯಾಸವೊಂದೇ ಸೂಕ್ತ ಪರಿಹಾರ,” ಎಂದು ಯೋಗ ತರಬೇತಿದಾರರಾದ ಡಾ. ಸುಮಾ ತಿಳಿಸಿದರು.

ನಗರದ ಮಳಗಾಳು ಬಡಾವಣೆಯ ಸಮುದಾಯ ಭವನದಲ್ಲಿ ತಾಲೂಕು ಪರಿಸರ ಪ್ರೇಮಿ ಸಂಘದ ವತಿಯಿಂದ ಕಳೆದ ಒಂದು ವರ್ಷದಿಂದ ನಡೆಸಲಾಗುತ್ತಿದ್ದ ಯೋಗ ಶಿಬಿರದ ಸಮಾರೋಪ ಸಮಾರಂಭದಲ್ಲಿ ಶಿಬಿರಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಿ ಅವರು ಮಾತನಾಡಿದರು.

# ಪಟ್ಟಣ ಪಂಚಾಯಿತಿಯಾದ ಮೇಲೆ ಮಸ್ತೇನಹಳ್ಳಿ ಅನಾಥ

ಚಿಂತಾಮಣಿ

ತಾಲೂಕಿನ ಮಸ್ತೇನಹಳ್ಳಿ ಗ್ರಾಮ ಪಂಚಾಯಿತಿಯು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೇರಿದ ನಂತರ ಆಡಳಿತಾತ್ಮಕ ಗೊಂದಲಗಳಿಂದಾಗಿ ಹಳ್ಳ ಹಿಡಿದಿದೆ. ಅಧಿಕಾರಿಗಳ ಜವಾಬ್ದಾರಿರಹಿತ ನಡೆಯಿಂದಾಗಿ ಗ್ರಾಮವು ಈಗ ‘ಅನಾಥ’ವಾಗಿದೆ ಎಂದು ಸ್ಥಳೀಯ ನಿವಾಸಿ ಶಶಿಕುಮಾರ್ ಗಂಭೀರವಾಗಿ ಆರೋಪಿಸಿದ್ದಾರೆ.

ನೀರಿಗಾಗಿ ಹಾಹಾಕಾರ– ರಸ್ತೆಯಲ್ಲಿ ಪೋಲು: ಬೇಸಿಗೆ ಆರಂಭವಾಗುತ್ತಿದ್ದಂತೆ ಜನಸಾಮಾನ್ಯರು ಕುಡಿಯುವ ನೀರಿಗಾಗಿ ಪರದಾಡುತ್ತಿದ್ದಾರೆ. ಆದರೆ, ಮಸ್ತೇನಹಳ್ಳಿಯಲ್ಲಿ ಅಧಿಕಾರಿಗಳ ದಿವ್ಯ ನಿರ್ಲಕ್ಷ್ಯದಿಂದಾಗಿ ಕುಡಿಯುವ ನೀರು ರಸ್ತೆಯಲ್ಲಿ ಯತೇಚ್ಛವಾಗಿ ಪೋಲಾಗುತ್ತಿದೆ. ನೀರನ್ನು ಮಿತವಾಗಿ ಬಳಸುವಂತೆ ಜಾಗೃತಿ ಮೂಡಿಸಬೇಕಾದ ಪಂಚಾಯಿತಿ ಸಿಬ್ಬಂದಿಯೇ ಕಣ್ಣೆದುರು ನೀರು ವ್ಯರ್ಥವಾಗುತ್ತಿದ್ದರೂ ಮೌನಕ್ಕೆ ಶರಣಾಗಿರುವುದು ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಅಧಿಕಾರಿಗಳ ಹಾರಿಕೆ ಉತ್ತರ: ಈ ಕುರಿತು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಕವಿತಾ ಅವರ ಗಮನಕ್ಕೆ ತಂದರೂ, “ಗ್ರಾಮವು ಪಟ್ಟಣ ಪಂಚಾಯಿತಿ ವ್ಯಾಪ್ತಿಗೆ ಸೇರ್ಪಡೆಯಾಗಿರುವುದರಿಂದ ನಮಗೆ ಬಿಲ್ ಮಾಡಲು ಹಣ ಬರುತ್ತಿಲ್ಲ ಮತ್ತು ಕೆಲಸ ಮಾಡಲು ಅಧಿಕಾರವಿಲ್ಲ” ಎಂಬ ಹಾರಿಕೆ ಉತ್ತರ ನೀಡುತ್ತಿದ್ದಾರೆ ಎಂದು ಶಶಿಕುಮಾರ್ ದೂರಿದ್ದಾರೆ. ಅಧಿಕಾರ ಮತ್ತು ಅನುದಾನದ ತಾಂತ್ರಿಕ ನೆಪವೊಡ್ಡಿ ಜನರ ಮೂಲಭೂತ ಅಗತ್ಯಗಳನ್ನು ಕಡೆಗಣಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಅವರು ಪ್ರಶ್ನಿಸಿದ್ದಾರೆ.

ಮಸ್ತೇನಹಳ್ಳಿಯ ಈ ಗೊಂದಲಮಯ ಸ್ಥಿತಿಯಿಂದಾಗಿ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ಕೈವಾರ ಪಟ್ಟಣ ಪಂಚಾಯಿತಿಯ ನೂತನ ಮುಖ್ಯಾಧಿಕಾರಿ ರವೀಂದ್ರ ಅವರು ಈ ವಿಷಯದಲ್ಲಿ ಮಧ್ಯಪ್ರವೇಶಿಸಬೇಕು. ರಸ್ತೆಯಲ್ಲಿ ಪೋಲಾಗುತ್ತಿರುವ ನೀರನ್ನು ತಡೆಗಟ್ಟಿ, ಗ್ರಾಮದ ಕುಡಿಯುವ ನೀರಿನ ವ್ಯವಸ್ಥೆಯನ್ನು ಸುಗಮಗೊಳಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ನಿಮ್ಮ ಮನೆ ಅಂಗಳಕ್ಕೇ ಬರಲಿದೆ ಇ–ಆಸ್ತಿ ನೋಂದಣಿ ವಾಹನ

ತುಮಕೂರು

ನಗರದ ಆಸ್ತಿ ಮಾಲೀಕರು ಮತ್ತು ತೆರಿಗೆದಾರರು ಇ– ಖಾತೆಗಾಗಿ ಇನ್ನು ಮುಂದೆ ಪಾಲಿಕೆ ಕಚೇರಿಗೆ ಅಲೆದಾಡುವಂತಿಲ್ಲ. ಸಾರ್ವಜನಿಕರ ಅನುಕೂಲಕ್ಕಾಗಿ ಮಹಾನಗರ ಪಾಲಿಕೆಯ ಕಂದಾಯ ಶಾಖೆಯು ನಾಲ್ಕು ಚಕ್ರದ ವಾಹನದಲ್ಲಿ ‘ಇ– ಆಸ್ತಿ ಆಂದೋಲನ’ ಎಂಬ ವಿನೂತನ ಯೋಜನೆಯನ್ನು ಜಾರಿಗೆ ತಂದಿದ್ದು, ಇದಕ್ಕೆ ಪಾಲಿಕೆ ಆಯುಕ್ತೆ ಶುಭ ಅವರು ಹಸಿರು ನಿಶಾನೆ ತೋರಿದರು.

ನಗರದ ಪಾಲಿಕೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಪುತ್ಥಳಿ ಮುಂಭಾಗ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಆಯುಕ್ತರು, “ರಾಜ್ಯದಲ್ಲೇ ಮೊದಲ ಬಾರಿಗೆ ಇಂತಹ ಪ್ರಯೋಗ ಮಾಡಲಾಗುತ್ತಿದೆ. ಹಿರಿಯ ನಾಗರಿಕರು ಮತ್ತು ಮಹಿಳೆಯರು ಕಚೇರಿಗೆ ಅಲೆದಾಡುವುದನ್ನು ತಪ್ಪಿಸಲು ಪಾಲಿಕೆಯೇ ಜನರ ಮನೆ ಬಾಗಿಲಿಗೆ ಹೋಗಿ ಅರ್ಜಿ ಪಡೆದು, ದಾಖಲೆ ಪರಿಶೀಲಿಸಿ ಇ–ಖಾತೆ ವಿತರಿಸಲಿದೆ,” ಎಂದರು.

ಸಿದ್ದರಾಮೇಶ್ವರ ಬಡಾವಣೆಯಿಂದ ಆರಂಭ: ಆಂದೋಲನದ ಮೊದಲ ದಿನ ವಾರ್ಡ್ ಸಂಖ್ಯೆ 31 ರಿಂದ 35ರ ವ್ಯಾಪ್ತಿಯ ಸಿದ್ದರಾಮೇಶ್ವರ ಬಡಾವಣೆಯ ಬಸವ ಭವನದಲ್ಲಿ ಶಿಬಿರ ನಡೆಸಿ ಅರ್ಜಿಗಳನ್ನು ಸ್ವೀಕರಿಸಲಾಯಿತು.



ಜಿಲ್ಲಾ ಉಸ್ತುವಾರಿ ಸಚಿವರ ಸೂಚನೆಯಂತೆ ಪ್ರತಿ ನಾಗರಿಕರಿಗೂ ಈ ಸೌಲಭ್ಯ ತಲುಪಿಸಲು ಪಾಲಿಕೆ ನಿರ್ಧರಿಸಿದೆ.

ಅಗತ್ಯವಿರುವ ದಾಖಲೆಗಳು: ಇ–ಆಸ್ತಿ ನೋಂದಣಿಗಾಗಿ ಸಾರ್ವಜನಿಕರು ಈ ಕೆಳಗಿನ ದಾಖಲೆಗಳನ್ನು ಸಿದ್ಧಪಡಿಸಿಕೊಳ್ಳಬೇಕು.

ಕ್ರಯಪತ್ರ, ದಾನಪತ್ರ ಅಥವಾ ವಿಭಾಗಪತ್ರದ ಪ್ರತಿ.

ಭೂಪರಿವರ್ತನಾ ಆದೇಶ ಅಥವಾ ಲೇಔಟ್ ನಕ್ಷೆ.

2004ರಿಂದ ಇಂದಿನವರೆಗೆ ಇ.ಸಿ (EC–15).

ಮಾಲೀಕರ ಆಧಾರ್ ಕಾರ್ಡ್ ಮತ್ತು ಭಾವಚಿತ್ರ.

ಪ್ರಸ್ತುತ ಸಾಲಿನ ಕಂದಾಯ ಪಾವತಿಸಿದ ರಸೀದಿ.

ಈ ಸಂದರ್ಭದಲ್ಲಿ ಪಾಲಿಕೆ ಉಪ ಆಯುಕ್ತ ಮನುಕುಮಾರ್, ವಲಯ ಆಯುಕ್ತ ನಾಗರಾಜು ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಸುಗಟೂರಿನ ಗೋ.ನಾ ಸ್ವಾಮಿಯಿಂದ ಬ್ಯಾಂಕಾಕ್‌ನಲ್ಲಿ ಯುಗಾದಿ ವಸಂತೋತ್ಸವ

ಕೋಲಾರ

ಥೈಲ್ಯಾಂಡ್‌ನ ಬ್ಯಾಂಕಾಕ್‌ನಲ್ಲಿರುವ ಶಾರದಾ ಯೂನಿವರ್ಸಿಟಿಯಲ್ಲಿ ‘ಯುಗಾದಿ ವಸಂತೋತ್ಸವ’ದ ಅಂಗವಾಗಿ ಹಮ್ಮಿಕೊಂಡಿದ್ದ ಜಾನಪದ ಸಂಗೀತ ಕಾರ್ಯಕ್ರಮವು ಅದ್ದೂರಿಯಾಗಿ ನೆರವೇರಿತು.

ಕೋಲಾರ ತಾಲೂಕಿನ ಸುಗಟೂರಿನ ಅಂತರಾಷ್ಟ್ರೀಯ ಜಾನಪದ ಕಲಾವಿದ ಗೋ.ನಾ. ಸ್ವಾಮಿ ಅವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮ ವಿದೇಶಿ ಮಣ್ಣಿನಲ್ಲಿ ಕನ್ನಡದ ಕಂಪು ಪಸರಿಸಿತು.

ತ್ರಿವೇಣಿ ಸಂಗಮ:

ಥಾಯ್ ಕನ್ನಡ ಬಳಗ, ಜಾನಪದ ಸಂರಕ್ಷಣಾ ಪರಿಷತ್ ಹಾಗೂ ಕರ್ನಾಟಕ ಸರ್ಕಾರದ ಕನ್ನಡ



ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಈ ಸಾಂಸ್ಕೃತಿಕ ಸಂಭ್ರಮ ಆಯೋಜಿತವಾಗಿತ್ತು. ಕರ್ನಾಟಕದಿಂದ ಆಗಮಿಸಿದ್ದ ಸುಮಾರು 20 ಜಾನಪದ ಕಲಾವಿದರ ತಂಡವು ನಾಡಿನ ವಿವಿಧ ಜಾನಪದ ಕಲೆಗಳನ್ನು ಪ್ರದರ್ಶಿಸಿ ಬ್ಯಾಂಕಾಕ್ ಕನ್ನಡಿಗರನ್ನು ಮಂತ್ರಮುಗ್ಧಗೊಳಿಸಿತು.

ಕಾರ್ಯಕ್ರಮದಲ್ಲಿ ಥಾಯ್ ಕನ್ನಡ ಬಳಗದ ಅಧ್ಯಕ್ಷ ಮುತ್ತುರಾಜ್ ಆರ್ಯ, ಸಮಾಜದ ಪೂರ್ಣಿಮಾ ದೇಶಪಾಂಡೆ, ಜಾನಪದ ಸಂರಕ್ಷಣಾ ಪರಿಷತ್ ಅಧ್ಯಕ್ಷ ಗೋ.ನಾ. ಸ್ವಾಮಿ, ಕಾರ್ಯದರ್ಶಿ ಮತ್ತಿಕುಂಟೆ ಕೃಷ್ಣ ಉಪಸ್ಥಿತರಿದ್ದರು.

ಜಾನಪದ ಜಾತ್ರೆಯ ಪ್ರಧಾನ ನಿರ್ದೇಶಕ ಸರ್ವೋತ್ತಮ್, ಸಾಂಸ್ಕೃತಿಕ ಸಂಘಟಕ ಜಯಸಿಂಹ, ನಿರ್ದೇಶಕ ಸಿದ್ದರಾಮು ಹಾಗೂ ಖ್ಯಾತ ನಿರೂಪಕಿ ಪದ್ಮಶ್ರೀ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕನ್ನಡಿಗರ ಅಭಿಮಾನ: ಬ್ಯಾಂಕಾಕ್‌ನಲ್ಲಿ ನೆಲೆಸಿರುವ ನೂರಾರು ಕನ್ನಡಿಗರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಕನ್ನಡಾಭಿಮಾನ ಮೆರೆದರು. ಕಲೆ ಮತ್ತು ಸಂಸ್ಕೃತಿಯನ್ನು ವಿದೇಶಕ್ಕೆ ಪಸರಿಸುತ್ತಿರುವ ಕಲಾವಿದರನ್ನು ಇದೇ ಸಂದರ್ಭದಲ್ಲಿ ಗೌರವಿಸಲಾಯಿತು. ಹಬ್ಬದ ನೆಪದಲ್ಲಿ ಜಾನಪದ ಗಾಯನ ಮತ್ತು ಕಲೆಗಳನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಇದೊಂದು ಅತ್ಯಂತ ಅರ್ಥಪೂರ್ಣ ಕಾರ್ಯಕ್ರಮವಾಗಿ ಮೂಡಿಬಂತು.

# ಸಾಧನೆಯ ಉತ್ತುಂಗಕೇರಿದ ತಿಪಟೂರಿನ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯ

ತಿಪಟೂರು

ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಛಾಪು ಮೂಡಿಸಿರುವ ನಗರದ ಕಲ್ಪತರು ತಾಂತ್ರಿಕ ಮಹಾವಿದ್ಯಾಲಯವು (ಕೆ.ಐ.ಟಿ), ಪ್ರತಿಷ್ಠಿತ ‘ಸಿಸ್ಕೋ ನೆಟ್‌ವರ್ಕಿಂಗ್ ಅಕಾಡೆಮಿ ಸ್ಕಿಲ್–ಎ–ಥಾನ್ 2026’ ಅಭಿಯಾನದಲ್ಲಿ ರಾಷ್ಟ್ರಮಟ್ಟದ ಚಾಂಪಿಯನ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಳ್ಳುವ ಮೂಲಕ ಐತಿಹಾಸಿಕ ಸಾಧನೆ ಮಾಡಿದೆ.

ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ‘ಭಾರತ ನಾಯಕತ್ವ ಶೃಂಗಸಭೆ– 2026’ ಕಾರ್ಯಕ್ರಮದಲ್ಲಿ ಸಿಸ್ಕೋ ಸಂಸ್ಥೆಯ ಜಾಗತಿಕ ಉಪಾಧ್ಯಕ್ಷ ಪರ್ ಮೇರತ್, ಪ್ರಾದೇಶಿಕ ವ್ಯವಸ್ಥಾಪಕಿ ಮಾರ್ಸೆಲ್ಲಾ ಓಶಿಯಾ ಹಾಗೂ ವ್ಯವಸ್ಥಾಪಕ ನಿರ್ದೇಶಕ ಕಾರನ್ಸ್ ಬಾರ್ಬೋಜಾ ಅವರು ಕಾಲೇಜಿನ ಈ ಸಾಧನೆಯನ್ನು ಶ್ಲಾಘಿಸಿ ಪ್ರಶಸ್ತಿ ಪ್ರದಾನ ಮಾಡಿದರು. ಸಿಸ್ಕೋ ಇಂಡಿಯಾ ಮತ್ತು ಸಾರ್ಕ್ ನೆಟ್‌ಕಾಡ್ ಮುಖ್ಯಸ್ಥ ಇಶ್ವಿಂದರ್ ಸಿಂಗ್ ಸಮ್ಮುಖದಲ್ಲಿ ಕೆ.ಐ.ಟಿ ಪ್ರಾಂಶುಪಾಲ ಡಾ. ಎಚ್.ಸಿ. ಸತೀಶ್ ಕುಮಾರ್ ಪ್ರಶಸ್ತಿ ಸ್ವೀಕರಿಸಿದರು. ನೆಟ್‌ವರ್ಕಿಂಗ್ ಮತ್ತು ಡಿಜಿಟಲ್ ಕೌಶಲ್ಯ ಕ್ಷೇತ್ರದಲ್ಲಿ ಕಾಲೇಜಿನ ವಿದ್ಯಾರ್ಥಿಗಳು ತೋರಿದ ಆಸಕ್ತಿ ಮತ್ತು ತರಬೇತಿಯ ಫಲವಾಗಿ ಈ ಗೌರವ ಸಂದಿದೆ. ಈ ಸಂದರ್ಭದಲ್ಲಿ ಕಂಪ್ಯೂಟರ್ ಸೈನ್ಸ್ ವಿಭಾಗದ ಮುಖ್ಯಸ್ಥೆ ಡಾ. ಮೈತ್ರಿ ಸಿ., ಸಿಸ್ಕೋ ಅಕಾಡೆಮಿ ಸಂಯೋಜಕ ಡಾ. ಮನೋಜ್ ಕುಮಾರ್ ಡಿ.ಪಿ, ಎಐ ಮತ್ತು ಎಂಎಲ್ ವಿಭಾಗದ ಮುಖ್ಯಸ್ಥ ಡಾ. ರವಿಪ್ರಕಾಶ್ ಹಾಗೂ ಉದ್ಯೋಗಾಧಿಕಾರಿ ಡಾ. ಕಿರಣ್ ಟಿ.ಎಸ್ ಉಪಸ್ಥಿತರಿದ್ದರು.

# ‘ಲಂಚದ ಹಾವಳಿಗೆ ಬ್ರೇಕ್ ಹಾಕಲು ಜನ ನಿರ್ಣಯ ವೇದಿಕೆ ಸನ್ನದ್ಧ’

ಬಂಗಾರಪೇಟೆ

ಸಮಾಜದ ಪ್ರತಿಯೊಬ್ಬರಿಗೂ, ವಿಶೇಷವಾಗಿ ಶೋಷಿತ ಮತ್ತು ಬಡ ವರ್ಗದವರಿಗೆ ನ್ಯಾಯ ಒದಗಿಸುವ ದೃಢ ಸಂಕಲ್ಪದೊಂದಿಗೆ ‘ಕರ್ನಾಟಕ ಜನ ನಿರ್ಣಯ ವೇದಿಕೆ’ ಕಾರ್ಯನಿರ್ವಹಿಸಲಿದೆ ಎಂದು ಸಂಘಟನೆಯ ರಾಜ್ಯ ಸಂಘಟನಾ ಕಾರ್ಯದರ್ಶಿ ಎಂ. ಚೌಡಪ್ಪ ತಿಳಿಸಿದರು.

ಪಟ್ಟಣದ ಡಾ. ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ಬಳಿಕ ನಡೆದ ಕಾರ್ಯಕ್ರಮದಲ್ಲಿ, ಎಂ. ಶ್ರೀಧರ್ ಅವರಿಗೆ ತಾಲೂಕು ಅಧ್ಯಕ್ಷತೆಯ ನೇಮಕಾತಿ ಆದೇಶ ಪತ್ರ ವಿತರಿಸಿ ಅವರು ಮಾತನಾಡಿದರು.

ಲಂಚದ ಹಾವಳಿಗೆ ಬ್ರೇಕ್: “ತಾಲೂಕಿನ ಹಲವು ಸರ್ಕಾರಿ ಇಲಾಖೆಗಳಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಅಧಿಕಾರಿಗಳ ಬೇಜವಾಬ್ದಾರಿತನ ಮತ್ತು ಲಂಚದ ಹಾವಳಿಯಿಂದಾಗಿ ಸಾಮಾನ್ಯ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ರೈತರು, ದಲಿತರು, ಅಲ್ಪಸಂಖ್ಯಾತರು ಹಾಗೂ ಕಾರ್ಮಿಕ ವರ್ಗದವರ ಪರವಾಗಿ ನಿಂತು ಅವರಿಗೆ ನ್ಯಾಯ ಕೊಡಿಸುವ ಕೆಲಸವನ್ನು ನಮ್ಮ ಸಂಘಟನೆ ಮಾಡಲಿದೆ,” ಎಂದು ಚೌಡಪ್ಪ ಎಚ್ಚರಿಸಿದರು.

ಹೋರಾಟದ ಹಾದಿ: ನೂತನ ಅಧ್ಯಕ್ಷರಾಗಿ ಅಧಿಕಾರ



ಸ್ವೀಕರಿಸಿದ ಎಂ. ಶ್ರೀಧರ್ ಮಾತನಾಡಿ, “ನಾನು ಮೊದಲಿನಿಂದಲೂ ಭ್ರಷ್ಟಾಚಾರದ ವಿರುದ್ಧ ಹೋರಾಡುತ್ತಾ ಬಂದಿದ್ದೇನೆ. ನನ್ನ ಈ ಕಾರ್ಯವನ್ನು ಗುರುತಿಸಿ ಜವಾಬ್ದಾರಿ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಬಂಗಾರಪೇಟೆಯಿಂದ ಬೀದರ್‌ವರೆಗೂ ಸಂಘಟನೆಯನ್ನು ವಿಸ್ತರಿಸಿ, ಭ್ರಷ್ಟಾಚಾರ ಮುಕ್ತ ಸಮಾಜಕ್ಕಾಗಿ ಹೋರಾಟ ಮುಂದುವರಿಸುತ್ತೇನೆ,” ಎಂದರು.

ಈ ಸಂದರ್ಭದಲ್ಲಿ ಸಂಘಟನೆಯ ಗೌರವ ಅಧ್ಯಕ್ಷ ಎನ್. ಮಂಜುನಾಥ್, ರಾಜ್ಯಾಧ್ಯಕ್ಷ ಕಾರಮಂಗಳ ಕೆ. ಗಂಗಾಧರ್, ರಾಜ್ಯ ಉಪಾಧ್ಯಕ್ಷ ಎನ್.ಆರ್. ಜೀವನ ರೆಡ್ಡಿ, ರಾಜ್ಯ ಕಾರ್ಯದರ್ಶಿ ಶಿವಕುಮಾರ್ ಹಾಗೂ ತಾಲೂಕು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ‘ಅಂಕಗಳ ಯಂತ್ರಗಳಾಗದಿರಲಿ ಮಕ್ಕಳು, ಕ್ರೀಡೆಗೂ ಸಿಗಲಿ ಒತ್ತು’

ಕೋಲಾರ

“ಬ್ಯಾಸ್ಕೆಟ್ ಬಾಲ್ ಕ್ರೀಡೆಯಲ್ಲಿ ಕೋಲಾರ ಜಿಲ್ಲೆಯು ರಾಜ್ಯ ಮತ್ತು ರಾಷ್ಟ್ರಕ್ಕೆ ಅಮೂಲ್ಯ ಪ್ರತಿಭೆಗಳನ್ನು ನೀಡಿದೆ. ಇಲ್ಲಿನ ಕ್ರೀಡಾಪಟುಗಳ ಚಾಕಚಕ್ಯತೆ ಅದ್ಭುತವಾಗಿದ್ದು, ಕೋಲಾರವು ಕ್ರೀಡಾ ಸಾಧಕರ ತವರಾಗಲಿ,” ಎಂದು ಡಿಐಜಿಪಿ ಡಿ. ದೇವರಾಜ್ ಆಶಯ ವ್ಯಕ್ತಪಡಿಸಿದರು.

ನಗರದ ಒಳಂಗಣ ಕ್ರೀಡಾಂಗಣದ ಹಿಂಭಾಗದಲ್ಲಿ 4 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಆಧುನಿಕ ತಂತ್ರಜ್ಞಾನದ ಸುಸಜ್ಜಿತ ಬ್ಯಾಸ್ಕೆಟ್ ಬಾಲ್ ಕೋರ್ಟ್‌ನಲ್ಲಿ, ಚಿನ್ನದ ನಾಡು ಬ್ಯಾಸ್ಕೆಟ್ ಬಾಲ್ ಕ್ಲಬ್ ಆಯೋಜಿಸಿದ್ದ ಆಲ್ ಇಂಡಿಯಾ ಇಂಟರ್ ಕಾಲೇಜಿಯೆಟ್ ಇನ್ವಿಟೇಷನಲ್ ಟೂರ್ನಿಮೆಂಟ್ – ಚಿನ್ನದ ನಾಡು ಕಪ್–2026’**ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಮಕ್ಕಳನ್ನು ಕೇವಲ ಅಂಕಗಳಿಸುವ ಯಂತ್ರ ಮಾಡಬೇಡಿ: “ಇತ್ತೀಚಿನ ದಿನಗಳಲ್ಲಿ ಪೋಷಕರು ಮಕ್ಕಳನ್ನು ಕೇವಲ ಅಂಕಗಳಿಸುವ ಯಂತ್ರಗಳನ್ನಾಗಿ ಮಾಡುತ್ತಿರುವುದು ವಿಷಾದನೀಯ. ಇದರಿಂದ ಕ್ರೀಡಾಸಕ್ತಿ ಕುಂಠಿತಗೊಳ್ಳುತ್ತಿದೆ. ಪಠ್ಯದ ಜೊತೆಗೆ ಕ್ರೀಡೆಗೂ ಪ್ರೋತ್ಸಾಹ ನೀಡಿದಾಗ ಮಾತ್ರ ಸದೃಢ ಯುವ ಸಮುದಾಯ ನಿರ್ಮಾಣ ಸಾಧ್ಯ,” ಎಂದು ಪೋಷಕರಿಗೆ ಕಿವಿಮಾತು ಹೇಳಿದರು.

10 ತಂಡಗಳ ಮಧ್ಯೆ ಜಿದ್ದಾಜಿದ್ದಿ: ಈ ಪ್ರತಿಷ್ಠಿತ ಪಂದ್ಯಾವಳಿಯಲ್ಲಿ ಕರ್ನಾಟಕ, ತಮಿಳುನಾಡು, ಕೇರಳ



ಮತ್ತು ಆಂಧ್ರಪ್ರದೇಶದ ಒಟ್ಟು 10 ವಿಶ್ವವಿದ್ಯಾಲಯ ತಂಡಗಳು ಭಾಗವಹಿಸಿವೆ (6 ಬಾಲಕರ ಹಾಗೂ 4 ಮಹಿಳಾ ತಂಡಗಳು).

ಮೊದಲ ಪಂದ್ಯ: ಬೆಂಗಳೂರಿನ ಜೈನ್ ಯೂನಿವರ್ಸಿಟಿ ಮತ್ತು ತಮಿಳುನಾಡಿನ ಕುಮಾರ ಗುರು ತಂಡದ ನಡುವೆ ನಡೆದ ಹಣಾಹಣಿಯಲ್ಲಿ ಜೈನ್ ತಂಡವು 71–51 ಪಾಯಿಂಟ್ಸ್ ಗಳಿಸುವ ಮೂಲಕ 20 ಪಾಯಿಂಟ್‌ಗಳ ಭರ್ಜರಿ ಜಯ ದಾಖಲಿಸಿತು.

ಎರಡನೇ ಪಂದ್ಯ: ಬೆಂಗಳೂರಿನ ಕ್ರೈಸ್ಟ್ ಯೂನಿವರ್ಸಿಟಿ ಮತ್ತು ತಮಿಳುನಾಡಿನ ಹಿಂದುಸ್ತಾನ್ ಟೆಕ್ನಾಲಜಿ ಯೂನಿವರ್ಸಿಟಿ ನಡುವೆ ನಡೆದ ಜಿದ್ದಾಜಿದ್ದಿನ ಪಂದ್ಯದಲ್ಲಿ ಹಿಂದುಸ್ತಾನ್ ತಂಡವು 77–70 ಪಾಯಿಂಟ್ಸ್‌ಗಳಿಂದ ಜಯಭೇರಿ ಬಾರಿಸಿತು.

ಕಾರ್ಯಕ್ರಮದಲ್ಲಿ ವೈದ್ಯರಾದ ಡಾ. ಶಂಕರ್, ಡಾ. ಅರವಿಂದ್, ಉದ್ಯಮಿಗಳಾದ ಎಸ್. ವೆಂಕಟೇಶ್, ಕೌಶಿಕ್, ರೆಡ್ಡಿ, ನಗರಸಭೆ ಮಾಜಿ ಸದಸ್ಯ ಸಿ. ಸೋಮಶೇಖರ್, ಕ್ರೀಡಾಪಟು ಜಗದೀಶ್ ಉಪಸ್ಥಿತರಿದ್ದರು. ಚಿನ್ನದ ನಾಡು ಬ್ಯಾಸ್ಕೆಟ್ ಬಾಲ್ ಕ್ಲಬ್ ಅಧ್ಯಕ್ಷ ಮಧು ಅತಿಥಿಗಳನ್ನು ಸ್ವಾಗತಿಸಿ, ತಂಡಗಳನ್ನು ಪರಿಚಯಿಸಿದರು. ಐಟಿಐ ಶಿವಕುಮಾರ್ ಪಂದ್ಯಾವಳಿಯ ವಿವರಗಳನ್ನು ವಾಚಿಸಿದರು. ಪ್ರಭಾಕರ್, ಅವಿನಾಶ್ ಮತ್ತು ಈಶ್ವರ್ ಸಿಂಗ್ ಅಂಪೈರ್‌ಗಳಾಗಿ ಕಾರ್ಯನಿರ್ವಹಿಸಿದರು.

# ಸೈಬರ್ ವಂಚನೆ ತಡೆಗೆ ಕಟ್ಟುನಿಟ್ಟಿನ ಕ್ರಮ

ಬೆಂಗಳೂರು

ರಾಜ್ಯದಲ್ಲಿ ದೂರಸಂಪರ್ಕ ಕ್ಷೇತ್ರವನ್ನು ಮತ್ತಷ್ಟು ಬಲಪಡಿಸಲು ಮತ್ತು ಸುಗಮ ವ್ಯವಹಾರ ವಾತಾವರಣವನ್ನು ನಿರ್ಮಿಸುವ ನಿಟ್ಟಿನಲ್ಲಿ ದೂರಸಂಪರ್ಕ ಇಲಾಖೆಯ ಕರ್ನಾಟಕ ಪರವಾನಗಿ ಸೇವಾ ಪ್ರದೇಶ ವಿಭಾಗವು ಮಹತ್ವದ ಹೆಜ್ಜೆ ಇಟ್ಟಿದೆ. ನಗರದಲ್ಲಿ ಇತ್ತೀಚೆಗೆ ನಡೆದ ಇಂಟರ್‌ನೆಟ್ ಸೇವಾ ಪೂರೈಕೆದಾರರ ಮಧ್ಯಸ್ಥಗಾರರ ಸಭೆಯಲ್ಲಿ 40ಕ್ಕೂ ಹೆಚ್ಚು ಸಂಸ್ಥೆಗಳ ಪ್ರತಿನಿಧಿಗಳು ಭಾಗವಹಿಸಿ, ಪರವಾನಗಿ ಪ್ರಕ್ರಿಯೆಯ ಸವಾಲುಗಳ ಕುರಿತು ಚರ್ಚಿಸಿದರು.


ಸಭೆಯ ನೇತೃತ್ವ ವಹಿಸಿದ್ದ ದೂರಸಂಪರ್ಕ ಇಲಾಖೆಯ ನಿರ್ದೇಶಕ (ತಂತ್ರಜ್ಞಾನ) ಕರಣ್ ಗೋಯಲ್ ಅವರು ಮಾತನಾಡಿ, “ಪರವಾನಗಿ ಷರತ್ತುಗಳಲ್ಲಿರುವ ಗೊಂದಲಗಳನ್ನು ನಿವಾರಿಸಿ, ಏಕರೂಪದ ನಿಯಮಗಳನ್ನು ಜಾರಿಗೆ ತರುವುದು ನಮ್ಮ ಗುರಿ. ಇದರಿಂದ ಸೇವಾ ಪೂರೈಕೆದಾರರಿಗೆ ಯಾವುದೇ ಅಡೆತಡೆಯಿಲ್ಲದೆ ವ್ಯವಹಾರ ನಡೆಸಲು ಸಾಧ್ಯವಾಗುತ್ತದೆ,” ಎಂದು ತಿಳಿಸಿದರು. ಡಿಜಿಟಲ್ ಇಂಡಿಯಾ ಕನಸನ್ನು ನನಸಾಗಿಸಲು ಪಾರದರ್ಶಕ ನೀತಿ ವಾತಾವರಣ ಅತ್ಯಗತ್ಯ ಎಂದು ಅವರು ಪ್ರತಿಪಾದಿಸಿದರು.

ಉಪ ಮಹಾನಿರ್ದೇಶಕ (ತಂತ್ರಜ್ಞಾನ) ಗೋಪಾಲ್ ಕೃಷ್ಣ ಸುತಾರ್ ಮಾತನಾಡಿ, ದೇಶದ ಡಿಜಿಟಲ್ ಸಾರ್ವಜನಿಕ ಮೂಲಸೌಕರ್ಯದಲ್ಲಿ ISPಗಳ ಪಾತ್ರ ಅತಿ ದೊಡ್ಡದು. ಆದರೆ, ಇಂಟರ್ನೆಟ್ ಬಳಕೆದಾರರ ಸಂಖ್ಯೆ ಹೆಚ್ಚುತ್ತಿರುವಂತೆಯೇ ಸೈಬರ್ ಭದ್ರತೆಯ ಸವಾಲುಗಳೂ ಹೆಚ್ಚುತ್ತಿವೆ. ಆದ್ದರಿಂದ ಸುರಕ್ಷಿತ ಟೆಲಿಕಾಂ ಪರಿಸರ ವ್ಯವಸ್ಥೆಯನ್ನು ಕಾಪಾಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದರು. ಸಭೆಯನ್ನು ಉದ್ಘಾಟಿಸಿದ ಕರ್ನಾಟಕ ಎಲ್‌ಎಸ್‌ಎಯ ವಿಶೇಷ ಮಹಾನಿರ್ದೇಶಕ ಅನಿಲ್ ಕುಮಾರ್ ಗುಪ್ತಾ ಅವರು ಭದ್ರತಾ ಆಯಾಮಗಳ ಬಗ್ಗೆ ಕಳಕಳಿ ವ್ಯಕ್ತಪಡಿಸಿದರು. “ಇಂದು ಟೆಲಿಕಾಂ ಜಾಲಗಳ ಮೂಲಕವೇ ಬೃಹತ್ ಹಣಕಾಸು ವ್ಯವಹಾರಗಳು ನಡೆಯುತ್ತಿವೆ. ಸೈಬರ್ ವಂಚನೆಗಳನ್ನು ಪತ್ತೆಹಚ್ಚಲು ಮತ್ತು ತಡೆಯಲು ಇಂಟರ್ನೆಟ್ ಪ್ರೋಟೋಕಾಲ್ ವಿವರಗಳು ಹಾಗೂ ಸಿಸ್ಟಮ್ ಲಾಗ್‌ಗಳನ್ನು ಅತ್ಯಂತ ನಿಖರವಾಗಿ ನಿರ್ವಹಿಸಬೇಕು,” ಎಂದು ಅವರು ಐಎಸ್‌ಪಿಗಳಿಗೆ ಸೂಚನೆ ನೀಡಿದರು.

# ಧನ್ಯಧಾರೆ ಕವನ ಸಂಕಲನ ಬಿಡುಗಡೆ

ಕುಣಿಗಲ್

ತಾಲೂಕಿನ ಭಕ್ತರಹಳ್ಳಿ ದಯಾ ಭವನದಲ್ಲಿ ಇದೇ 15 ರಂದು ಭಾನುವಾರ ಜಗದೀಶ್ ನಾಯ್ಕ್ ರವರ ಶ್ರಮದ ನೆಲಕೆ ಧನ್ಯಧಾರೆ ಎಂಬ ಕವನ ಸಂಕಲನ ಬಿಡುಗಡೆಯ ಸಮಾರಂಭವನ್ನು ಆಯೋಜಿಸಲಾಗಿದೆ.



ರಂಗ ವಿಜಯಾ ಟ್ರಸ್ಟ್‌ನ ಸಂಸ್ಥಾಪಕ ಅಧ್ಯಕ್ಷ ಮಾಲೂರು ವಿಜಿ ಈ ಕುರಿತು ಪತ್ರಿಕಾ ಹೇಳಿಕೆ ನೀಡಿದ್ದು, ಸ್ಥಳೀಯ ಸಂಸ್ಥೆಗಳಾದ ಭಕ್ತರಹಳ್ಳಿಯ ದಯಾ ಭವನ ಮತ್ತು ಸ್ನೇಹ ಕಲಾ ಪ್ರತಿಷ್ಠಾನ ಸಹಯೋಗದಲ್ಲಿ ರಂಗ ವಿಜಯಾ ಟ್ರಸ್ಟ್ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ವೆಗೋಲಾ ಇಂಡಿಯಾ ಕಂಪನಿ ಪ್ರೈವೇಟ್ ಲಿಮಿಟೆಡ್ ನ ಮಾನವ ಸಂಪನ್ಮೂಲ ವಿಭಾಗದ ಎಜಿಎಂ ಆಗಿ ಕೆಲಸ ನಿರ್ವಹಿಸುತ್ತಿರುವ ಉತ್ತರ ಕನ್ನಡ ಜಿಲ್ಲೆಯ ಗಂಗಾವತಿ ಮೂಲದವರಾದ ಜಗದೀಶ್ ನಾಯ್ಕ್ ರವರು ಕವಿ ಹಾಗೂ ನಾಟಕಕಾರರಾಗಿ ಪರಿಚಿತರಾಗಿದ್ದಾರೆ. ಅವರು ತಮ್ಮ 21 ಕವನಗಳ ಕವನ ಸಂಕಲನ ಶ್ರಮದ ನೆಲಕೆ ಧನ್ಯಧಾರೆ ಎಂಬ ಸಂಕಲನವನ್ನು ರಂಗ ವಿಜಯಾ ಟ್ರಸ್ಟ್ ಪ್ರಕಟಿಸಿ ಬಿಡುಗಡೆ ಮಾಡುತ್ತಿದೆ.

ಈ ಸಂದರ್ಭದಲ್ಲಿ ಅವರಿಗೆ 50 ವರ್ಷ ತುಂಬಿದ ಸವಿ ನೆನಪಿಗಾಗಿ ಸುಜನ 50 ಎಂದರೆ ಸುವರ್ಣ ಸಂಭ್ರಮ ಜಗದೀಶ ನಾಯಕ ಎಂಬ ಅಡಿಬರಹದಲ್ಲಿ ಅವರ ಸುವರ್ಣ ಸಂಭ್ರಮವನ್ನು ಆಚರಿಸುತ್ತಿದೆ. ಜೊತೆಗೆ ಕವನ ಸಂಕಲನ ಬಿಡುಗಡೆ, ಸಂವಾದ, ಕವಿಗೋಷ್ಠಿ ಹಾಗೂ ಅಭಿನಂದನಾ ಗ್ರಂಥ ಬಿಡುಗಡೆ ಮಾಡಲು ರಂಗ ವಿಜಯಾ ಸಂಸ್ಥೆ ಸಿದ್ಧತೆಯನ್ನು ಮಾಡಿಕೊಳ್ಳುತ್ತಿದೆ.

ಕಳೆದ ಹಲವು ವರ್ಷಗಳಿಂದ ಕಾವ್ಯ ಕ್ಷೇತ್ರದಲ್ಲಿ ಮತ್ತು ನಾಟಕ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸುತ್ತಾ ಬಂದಿರುವ ಜಗದೀಶ ನಾಯ್ಕ್ ಅವರ ಮೊಟ್ಟ ಮೊದಲ ಕವನ ಸಂಕಲನ ಇದಾಗಿದ್ದು, ಇದರ ವಿನ್ಯಾಸವನ್ನು ಖ್ಯಾತ ನಾಟಕಕಾರ ಹಾಗೂ ದ್ರಾವಿಡ ವಿಶ್ವವಿದ್ಯಾನಿಲಯದ ಜಾನಪದ ಚಿತ್ರಕಲಾ ವಿಷಯದ ಬಗ್ಗೆ ಪ್ರಬುದ್ಧ ಪ್ರಬಂದ ಮಂಡಿಸಿ ಡಾಕ್ಟರೇಟ್ ಪಡೆದಿರುವ ಡಾ. ಟಿ. ಲಕ್ಷ್ಮೀನಾರಾಯಣ್ ಮಾಡಿದ್ದಾರೆ.
ಕಳೆದ ಹಲವು ವರ್ಷಗಳಿಂದ ಕಾವ್ಯ ಕ್ಷೇತ್ರದಲ್ಲಿ ಮತ್ತು ನಾಟಕ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪನ್ನು ಮೂಡಿಸುತ್ತಾ ಬಂದಿರುವ ಜಗದೀಶ ನಾಯ್ಕ್ ಅವರ ಮೊಟ್ಟ ಮೊದಲ ಕವನ ಸಂಕಲನ ಇದಾಗಿದ್ದು, ಇದರ ವಿನ್ಯಾಸವನ್ನು ಖ್ಯಾತ ನಾಟಕಕಾರ ಹಾಗೂ ದ್ರಾವಿಡ ವಿಶ್ವವಿದ್ಯಾನಿಲಯದ ಜಾನಪದ ಚಿತ್ರಕಲಾ ವಿಷಯದ ಬಗ್ಗೆ ಪ್ರಬುದ್ಧ ಪ್ರಬಂದ ಮಂಡಿಸಿ ಡಾಕ್ಟರೇಟ್ ಪಡೆದಿರುವ ಡಾ. ಟಿ. ಲಕ್ಷ್ಮೀನಾರಾಯಣ್ ಮಾಡಿದ್ದಾರೆ.
ಜೊತೆಗೆ ಅವರ ಅಭಿನಂದನಾ ಗ್ರಂಥಕ್ಕೂ ಅವರೇ ಸಂಪಾದಕರಾಗಿ ಕಾರ್ಯನಿರ್ವಹಿಸಿದ್ದಾರೆ. ಕುಣಿಗಲ್‌ನ ಅನೇಕ ಮಹನೀಯರು ಲೇಖನಗಳನ್ನು ಬರೆದಿದ್ದಾರೆ. ಈ ಕಾರ್ಯಕ್ರಮ ಇದೇ 15ರ ಭಾನುವಾರ ಬೆಳಗ್ಗೆ 10ಗಂಟೆಯಿಂದ ಸಂಜೆ 5 ವರೆಗೂ ನಡೆಯಲಿದೆ.
ಜೊತೆಗೆ ಅವರ ಅಭಿನಂದನಾ ಗ್ರಂಥಕ್ಕೂ ಅವರೇ ಸಂಪಾದಕರಾಗಿ ಕಾರ್ಯನಿರ್ವಹಿಸಿದ್ದಾರೆ. ಕುಣಿಗಲ್‌ನ ಅನೇಕ ಮಹನೀಯರು ಲೇಖನಗಳನ್ನು ಬರೆದಿದ್ದಾರೆ. ಈ ಕಾರ್ಯಕ್ರಮ ಇದೇ 15ರ ಭಾನುವಾರ ಬೆಳಗ್ಗೆ 10ಗಂಟೆಯಿಂದ ಸಂಜೆ 5 ವರೆಗೂ ನಡೆಯಲಿದೆ.

ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ನಮ್ಮ ನಾಡಿನ ಹೆಮ್ಮೆಯ ಏಳು ಭಾಷೆಗಳ ನಟರಾದ ಶರತ್ ಲೋಹಿತಾಶ್ವ, ಹಾಸ್ಯ ನಟರಾಗಿ ತಮ್ಮದೇ ಛಾಪನ್ನು ಮೂಡಿಸಿರುವ ತಬಲ ನಾಣಿ ಹಾಸ್ಯ ಯೂಟ್ಯೂಬ್ ಚಾನೆಲ್ ನಲ್ಲಿ ಪ್ರಖ್ಯಾತರಾದ ಗೀತಾ ರಾಘವೇಂದ್ರ ಹಾಗೂ ಮಂಜು ದೊಡ್ಡಿರಪ್ಪ ಮುಂತಾದವರು ಭಾಗವಹಿಸಲಿದ್ದಾರೆ, ಎಂದು ರಂಗ ವಿಜಯಾ ಟ್ರಸ್ಟ್ ತಿಳಿಸಿದೆ. ಹತ್ತು ಹಲವು ಸಾಂಸ್ಕೃತಿಕ ಕಾರ್ಯಕ್ರಮ ಹಾಗೂ ಕವಿಯೊಂದಿಗೆ ಸಂವಾದ, ಕವಿತಾ ವಾಚನ, ರಂಗ ವಿಜಯಾ ಟ್ರಸ್ಟ್ ನ ವತಿಯಿಂದ ಪ್ರಾರಂಭವಾಗುತ್ತಿರುವ ಕಾಮಿಡಿ ಕಟ್ಟೆ ಯುಟ್ಯೂಬ್ ಚಾನೆಲ್‌ನ ಮೊದಲ ಕಂತನ್ನು ಆ ದಿನ ಬಿಡುಗಡೆ ಮಾಡಲಾಗುವುದು. ಇದೇ ರೀತಿಯ ಅನೇಕ ಕಾರ್ಯಕ್ರಮಗಳು ಆ ದಿನ ನಡೆಯಲಿದೆ ಎಂದು ಮಾಲೂರು ವಿ.ಜಿ. ತಿಳಿಸಿದ್ದಾರೆ.

17/03/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಹೆಗ್ಗಡಗೆರೆಯಲ್ಲಿ ಆನೆ ಹಾವಳಿ ಸ್ಥಳಕ್ಕೆ ಶಾಸಕ ಬಾಲಕೃಷ್ಣ ಭೇಟಿ



ರಾಮನಗರ

ಬಿಡದಿ ಹೋಬಳಿಯ ಹೆಗ್ಗಡಗೆರೆ ಹಾಗೂ ಸುತ್ತಮುತ್ತಲ ಗ್ರಾಮಗಳಲ್ಲಿ ಕಾಡಾನೆಗಳು ನಿರಂತರವಾಗಿ ರೈತರ ಜಮೀನುಗಳಿಗೆ ನುಗ್ಗಿ ಬೆಳೆ ನಾಶಪಡಿಸುತ್ತಿರುವ ಹಿನ್ನೆಲೆಯಲ್ಲಿ, ಶಾಸಕ ಎಚ್.ಸಿ. ಬಾಲಕೃಷ್ಣ ಅವರು ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಇತ್ತೀಚೆಗೆ ಬಿಡದಿ ಪುರಸಭೆ ವ್ಯಾಪ್ತಿಯ ಹೆಗ್ಗಡಗೆರೆ ಗ್ರಾಮದಲ್ಲಿ ಒಂಟಿ ಸಲಗವೊಂದು ರೈತರ ಕಾಂಪೌಂಡ್ ಕೆಡವಿ, ತೆಂಗು, ಬಾಳೆ, ಮಾವು ಹಾಗೂ ರಾಗಿ ಬೆಳೆಯನ್ನು ಸಂಪೂರ್ಣ ನಾಶಪಡಿಸಿತ್ತು. ಈ ಕುರಿತು 'ವಿಕ' ಪತ್ರಿಕೆಯು ಸರಣಿ ವರದಿಗಳನ್ನು ಪ್ರಕಟಿಸಿ ಸರ್ಕಾರದ ಗಮನ ಸೆಳೆದಿತ್ತು.

ಅಧಿಕಾರಿಗಳಿಂದ ಮಾಹಿತಿ ಪಡೆದ ಶಾಸಕರು: ಸ್ಥಳ ಪರಿಶೀಲನೆ ನಡೆಸಿದ ಶಾಸಕರು, ಡಿಎಫ್ಒ ರಾಮಕೃಷ್ಣಯ್ಯ ಅವರಿಂದ ಆನೆಗಳ ಚಲನವಲನದ ಬಗ್ಗೆ ಮಾಹಿತಿ ಪಡೆದರು. ಕಾವೇರಿ ವನ್ಯಜೀವಿ ಧಾಮ ಹಾಗೂ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನದ ನಡುವೆ ಸುಮಾರು 25 ರಿಂದ 30 ಆನೆಗಳು ಸಂಚರಿಸುತ್ತಿದ್ದು, ರೈತರ ಬೆಳೆಗಳ ರುಚಿ ಕಂಡಿರುವ ಪುಂಡಾನೆಗಳು ಕಾಡಿಗೆ ಮರಳದೆ ಪುನಃ ಜಮೀನುಗಳಿಗೆ ಲಗ್ಗೆ ಹಾಕುತ್ತಿವೆ ಎಂದು ಅಧಿಕಾರಿಗಳು ವಿವರಿಸಿದರು.

ಪರಿಹಾರಕ್ಕೆ ತಾಂತ್ರಿಕ ಕ್ರಮಗಳ ಅಗತ್ಯ:
ಕಾಡಾನೆ ಹಾವಳಿ ತಡೆಗೆ ಡಿಎಫ್ಒ ಹಲವು ಆಧುನಿಕ ಕ್ರಮಗಳನ್ನು ಶಾಸಕರ ಮುಂದೆ ಪ್ರಸ್ತಾಪಿಸಿದರು.

ರೈಲ್ವೆ ಕಂಬಿ ಬ್ಯಾರಿಕೇಟ್: ಆನೆಗಳು ಗ್ರಾಮಕ್ಕೆ ನುಗ್ಗದಂತೆ ತಡೆಯಲು ಭದ್ರವಾದ ರೈಲ್ವೆ ಹಳಿಗಳ ಬೇಲಿ.

ಎಐ ಕ್ಯಾಮರಾ (ಫಾರಂ ಗಾರ್ಡ್): ಜಮೀನಿನ ಅಂಚಿನಲ್ಲಿ ಕೃತಕ ಬುದ್ಧಿಮತ್ತೆಯ ಕ್ಯಾಮೆರಾಗಳ ಅಳವಡಿಕೆ.

ಡ್ರೋಣ್ ಕಣ್ಗಾವಲು: ಆನೆಗಳ ಚಲನವಲನ ಗುರುತಿಸಲು ಡ್ರೋಣ್ ಬಳಕೆ.

ಆನೆ ನಿರೋಧಕ ಕಂದಕ: ಅರಣ್ಯದ ಅಂಚಿನಲ್ಲಿ ಆಳವಾದ ಕಂದಕಗಳ ನಿರ್ಮಾಣ.

ಸದನದಲ್ಲಿ ಚರ್ಚಿಸುವ ಭರವಸೆ: ಜಿಲ್ಲೆಯಲ್ಲಿ ಆನೆ ಕಾರ್ಯಪಡೆ ತಂಡ ಹಾಗೂ ಸಿಬ್ಬಂದಿ ಕೊರತೆ ಇರುವುದನ್ನು ಗಂಭೀರವಾಗಿ ಪರಿಗಣಿಸಿದ ಶಾಸಕರು, "ರೈತರು ಕಷ್ಟಪಟ್ಟು ಬೆಳೆದ ಬೆಳೆ ಕಣ್ಣೆದುರೇ ನಾಶವಾಗುತ್ತಿರುವುದು ಆತಂಕಕಾರಿ. ಈ ಕುರಿತು ಅರಣ್ಯ ಸಚಿವರೊಂದಿಗೆ ಚರ್ಚಿಸಿ, ಜಿಲ್ಲೆಗೆ ಹೆಚ್ಚುವರಿ ಕಾರ್ಯಪಡೆ ಹಾಗೂ ಅಗತ್ಯ ಸೌಲಭ್ಯ ಒದಗಿಸಲು ಸದನದಲ್ಲಿ ಒತ್ತಾಯಿಸಲಾಗುವುದು," ಎಂದು ರೈತರಿಗೆ ಅಭಯ ನೀಡಿದರು.

ಈ ಸಂದರ್ಭದಲ್ಲಿ ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜಿ.ಎನ್. ನಟರಾಜು ಗಾಣಕಲ್, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎಲ್. ಚಂದ್ರಶೇಖರ್, ಪುರಸಭೆ ವಿಪಕ್ಷ ನಾಯಕ ಸಿ. ಉಮೇಶ್ ಹಾಗೂ ಅರಣ್ಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಚಿತ ನೋಟ್ ಪುಸ್ತಕ ವಿತರಣೆ

ಮಾಗಡಿ

ತಾಲ್ಲೂಕಿನ ಹರ್ತಿಗೇಟ್‌ನ ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಬೆಳಗುಂಬ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸರ್ಕಾರಿ ಶಾಲಾ ಮಕ್ಕಳಿಗೆ ಸರಸ್ವತಿ ಪೂಜೆಯ ಅಂಗವಾಗಿ ಉಚಿತ ನೋಟ್ ಪುಸ್ತಕ ಹಾಗೂ ಲೇಖನಿ ಸಾಮಗ್ರಿಗಳನ್ನು ವಿತರಿಸಲಾಯಿತು.

ತಗ್ಗಿಕುಪ್ಪೆ ಗ್ರಾಮ ಪಂಚಾಯಿತಿಯ ಮಾಜಿ ಅಧ್ಯಕ್ಷೆ ತೇಜಸ್ವಿನಿ ರಮೇಶ್ ಅವರು ಈ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಪುಸ್ತಕ ವಿತರಿಸಿ ಮಾತನಾಡಿದ ತೇಜಸ್ವಿನಿ ರಮೇಶ್ ಅವರು, "ಈ ಸಾಲಿನ ವಿದ್ಯಾಭ್ಯಾಸವು ಮುಕ್ತಾಯದ ಹಂತಕ್ಕೆ ಬರುತ್ತಿದೆ. ವಿದ್ಯಾರ್ಥಿಗಳ ಮುಂದಿನ ವ್ಯಾಸಂಗಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಈ ಶೈಕ್ಷಣಿಕ ಪರಿಕರಗಳನ್ನು ನೀಡುತ್ತಿದ್ದೇವೆ. ಮಕ್ಕಳು ಇವುಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮವಾಗಿ ಓದಿ ಸಮಾಜದ ಆಸ್ತಿಯಾಗಬೇಕು," ಎಂದು ಆಶಿಸಿದರು.

ಈ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಶ್ರೀನಿವಾಸ್, ಬೆಳಗುಂಬ ಗ್ರಾಮ ಪಂಚಾಯಿತಿ ಸದಸ್ಯ ಹೊನ್ನ ಶಾಮಯ್ಯ ಹಾಗೂ ಶಾಲೆಯ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು. ವಿವಿಧ ಸಂಘ–ಸಂಸ್ಥೆಗಳ ಸದಸ್ಯರು ಹಾಗೂ ಶಾಲೆಯ ನೂರಾರು ವಿದ್ಯಾರ್ಥಿಗಳು ಈ ಶೈಕ್ಷಣಿಕ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು.

## ಮಾ.18 ರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆ–ಪೋಷಕರೇ ಮಕ್ಕಳನ್ನು ನಿಂದಿಸದೇ ಪ್ರೋತ್ಸಾಹಿಸಿ ಮಕ್ಕಳು ಸಕಾರಾತ್ಮಕ ಭಾವನೆ ಬೆಳೆಸಿಕೊಳ್ಳಿ

ಕೋಲಾರ

ಜೀವನದಲ್ಲೇ ಮೊದಲ ಬಾರಿಗೆ ಪಬ್ಲಿಕ್ ಪರೀಕ್ಷೆ ಎದುರಿಸುತ್ತಿರುವ ಎಸ್ಸೆಸ್ಸೆಲ್ಸಿ ವಿದ್ಯಾರ್ಥಿಗಳನ್ನು ನಿಂದಿಸದಿರಿ, ಆತ್ಮಸ್ಥೈರ್ಯ ತುಂಬಿ ಎಂದು ಪೋಷಕರಲ್ಲಿ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕಿ ಅಲ್ಮಾಸ್ ಫರ್ವಿನ್ ತಾಜ್ ಮನವಿ ಮಾಡಿದ್ದಾರೆ.

ರಾಜ್ಯಾದ್ಯಂತ ಮಾ.18 ರಿಂದ ಆರಂಭಗೊಳ್ಳುವ ಎಸ್ಸೆಸ್ಸೆಲ್ಸಿ ಪರೀಕ್ಷೆಗೆ ವಿದ್ಯಾರ್ಥಿಗಳು ಸಿದ್ದರಾಗಿದ್ದಾರೆ, ಅವರಲ್ಲಿ ಸಕಾರಾತ್ಮಕ ಭಾವನೆ ಬೆಳೆಸಿ, ಮನಸ್ಸಿಗೆ ನೋವಾಗುವ ರೀತಿ ನಿಂದಿಸದಿರಿ ಎಂದು ಸಲಹೆ ನೀಡಿದ್ದಾರೆ.

ಪರೀಕ್ಷೆಗೆ ಸಿದ್ದರಾಗಿರುವ ಮಕ್ಕಳಿಗೆ ಶಾಲಾ ಶಿಕ್ಷಣ ಇಲಾಖೆ ಪರವಾಗಿ ಶುಭ ಕೋರಿರುವ ಅವರು, ಗುಣಾತ್ಮಕ ಫಲಿತಾಂಶದ ದೃಷ್ಟಿಯಿಂದ ಮತ್ತು ಮಕ್ಕಳಲ್ಲಿನ ಪರೀಕ್ಷಾ ಭಯ ಹೋಗಲಾಡಿಸಲು ಮಕ್ಕಳಲ್ಲಿ ಧೈರ್ಯ ಮತ್ತು ಆತ್ಮವಿಶ್ವಾಸ ತುಂಬಲು ಹಲವಾರು ಸೂಚನೆ,ಸಲಹೆಗಳನ್ನು ನೀಡಿದ್ದಾರೆ.

ಆತ್ಮವಿಶ್ವಾಸ ಇರಲಿ

ಭಯ ಬೇಡ ಉತ್ತೀರ್ಣನಾಗುತ್ತೇನೆಂಬ ಆತ್ಮವಿಶ್ವಾಶದಿಂದ ಹಾಗೂ ಶಿಕ್ಷಕರ ಮಾರ್ಗದರ್ಶನದಂತೆ ಅಭ್ಯಾಸ ಮಾಡಿ ಪಠ್ಯಪುಸ್ತಕ ಅಧ್ಯಯನಕ್ಕೆ ಒತ್ತು ನೀಡಿ ಎಂದು ಕರೆ ನೀಡಿದ್ದಾರೆ.

ಬರವಣಿಗೆ ಸುಂದರವಾಗಿರಲಿ, ಕಾಗುಣಿತ ತಪ್ಪಾಗದಂತೆ ಎಚ್ಚರವಹಿಸಿ, ಓದುವ ಸಂದರ್ಭದಲ್ಲಿ ಏಕಾಗ್ರತೆ ಇರಲಿ, ಓದುವಾಗ ಮುಖ್ಯ ಅಂಶಗಳನ್ನು ಗುರುತು ಮಾಡಿಕೊಳ್ಳಿ, ಸ್ನೇಹಿತರೊಂದಿಗೆ ಪಠ್ಯಕ್ಕೆ ಸಂಬಂಧಿಸಿದಂತೆ ಪರಸ್ಪರ ಚರ್ಚೆ ಮಾಡಿ ಎಂದು ತಿಳಿಸಿದ್ದಾರೆ.

ಎಸ್ಸೆಸ್ಸೆಲ್ಸಿ ಮುಂದಿನ ಶಿಕ್ಷಣಕ್ಕೆ ಬುನಾದಿಎಸ್ಸೆಸ್ಸೆಲ್ಸಿ ಪರೀಕ್ಷೆ ನಿಮ್ಮ ಮುಂದಿನ ಶಿಕ್ಷಣಕ್ಕೆ ಬುನಾದಿಯಾಗಿದೆ, ಪರೀಕ್ಷಾ ಭಯ ಬಿಡಿ, ನಾನು ಫೇಲಾಗುತ್ತೇನೆ,ಪಾಸಾಗಲು ಸಾಧ್ಯವಿಲ್ಲ ಎಂಬ ಋಣಾತ್ಮಕ ಮನೋಭಾವ ಬಿಡಿ,ನೀವು ಯಾರೂ ದಡ್ಡರಲ್ಲ, ಎಲ್ಲರಲ್ಲೂ ಒಂದೇ ಮಾದರಿ ಗ್ರಹಿಕೆ ಇರುವುದಿಲ್ಲ, ಗ್ರಹಿಕೆ ಕಡಿಮೆ ಇರುವವರು ನಿರಂತರ ಓದು, ಗುಂಪು ಚಟುವಟಿಕೆ ಮೂಲಕ ಗ್ರಹಿಕೆ ಶಕ್ತಿ ಹೆಚ್ಚಿಸಿಕೊಳ್ಳಬೇಕು ಎಂದರು.ಪೋಷಕರಿಗೆ ಸಲಹೆ:ಅಘಾತ ಮಾಡದಿರಿ ಪರೀಕ್ಷೆಗೆ ತೆರಳುವ ಮಕ್ಕಳನ್ನು ಕ್ಷುಲ್ಲಕ ಕಾರಣಗಳಿಗೆ ನಿಂದಿಸುವುದು, ಬೈಯುವುದರಿಂದ ಅವರ ಮನಸ್ಸಿಗೆ ಘಾಸಿಯಾಗುತ್ತದೆ. ಆದ್ದರಿಂದ ಮನೆಯಿಂದ ಹೊರಡುವಾಗ ಸಂತೋಷದಿಂದ ಹಾರೈಸಿ ಕಳುಹಿಸಿಕೊಡಿ ಎಂದು ಪೋಷಕರಲ್ಲಿ ಮನವಿ ಮಾಡಿದ್ದಾರೆ.

# ತಹಶೀಲ್ದಾರ್ ಕಚೇರಿ ಸಿಬ್ಬಂದಿ ಮನೆಯಾಳುಗಳೇ?

ಶ್ರೀನಿವಾಸಪುರ

ಸಾರ್ವಜನಿಕರ ಕೆಲಸ ಮಾಡಿಕೊಡಬೇಕಾದ ಸರ್ಕಾರಿ ನೌಕರರನ್ನು ತಹಶೀಲ್ದಾರ್ ಅವರು ತಮ್ಮ ವೈಯಕ್ತಿಕ ಕೆಲಸಕ್ಕೆ ಬಳಸಿಕೊಳ್ಳುತ್ತಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಪಟ್ಟಣದ ತಹಶೀಲ್ದಾರ್ ಕಚೇರಿ ಆವರಣದಲ್ಲೇ ತಾಲೂಕು ದಂಡಾಧಿಕಾರಿಗಳು ತಮ್ಮ ಸ್ವಂತ ಕಾರನ್ನು ಇಲಾಖೆಯ ಜೀಪ್ ಚಾಲಕನಿಂದ ತೊಳೆಸುತ್ತಿರುವ ದೃಶ್ಯ ಸಾರ್ವಜನಿಕರ ಕೆಂಗಣ್ಣಿಗೆ ಗುರಿಯಾಗಿದೆ.

ಈ ಹಿಂದೆಯೂ ಸಹ ತಹಶೀಲ್ದಾರ್ ಅವರು ತಮ್ಮ ಇಲಾಖೆಯ ಸಿಬ್ಬಂದಿಯಿಂದ ವೈಯಕ್ತಿಕ ಕೆಲಸ ಮಾಡಿಸಿಕೊಂಡಿದ್ದರು ಎಂಬ ದೂರುಗಳಿದ್ದವು. ಇದೀಗ ಮತ್ತೆ ಅದೇ ರೀತಿಯ ಘಟನೆ ಮರುಕಳಿಸಿದೆ. ಕಚೇರಿ ಕೆಲಸ ಬಿಟ್ಟು ಸರ್ಕಾರಿ ಚಾಲಕ ಅಧಿಕಾರಿಯ



ಖಾಸಗಿ ಕಾರು ತೊಳೆಯುತ್ತಿರುವ ದೃಶ್ಯ ಕ್ಯಾಮರಾದಲ್ಲಿ ಸೆರೆಯಾಗಿದ್ದು, ಇದು ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.

ಲಕ್ಷಾಂತರ ರೂಪಾಯಿ ಸಂಬಳ ಪಡೆಯುವ ಉನ್ನತ ಅಧಿಕಾರಿಯೊಬ್ಬರು, ಜನರ ತೆರಿಗೆ ಹಣದಲ್ಲಿ ವೇತನ ಪಡೆಯುವ ನೌಕರರನ್ನು ತಮ್ಮ ಮನೆಯಾಳುಗಳಂತೆ ಬಳಸಿಕೊಳ್ಳುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂಬ ಪ್ರಶ್ನೆ ಕೇಳಿಬರುತ್ತಿದೆ. "ತಾಲ್ಲೂಕು ಕಚೇರಿಯ ಸಿಬ್ಬಂದಿ ಎಂದರೆ ಜನರ ಕೆಲಸ ಮಾಡುವವರೇ ಅಥವಾ ಸಾಹೇಬರ ಮನೆಯ ಕೆಲಸ ಮಾಡುವವರೇ?" ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಕಚೇರಿಗಳಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಈಗಾಗಲೇ ಸಾಮಾನ್ಯ ಜನರ ಕೆಲಸಗಳು ಕುಂಠಿತವಾಗುತ್ತಿವೆ. ಇಂತಹ ಪರಿಸ್ಥಿತಿಯಲ್ಲಿ ಇರುವ ಸಿಬ್ಬಂದಿಯನ್ನು ತಮ್ಮ ವೈಯಕ್ತಿಕ ಲಾಭಕ್ಕೆ ಬಳಸಿಕೊಳ್ಳುವುದು ಅಧಿಕಾರ ದುರುಪಯೋಗವಲ್ಲವೇ ಎಂಬ ಪ್ರಶ್ನೆ ಮೂಡಿದೆ. ಈ ಘಟನೆಯ ಬಗ್ಗೆ ಮೇಲಧಿಕಾರಿಗಳು ತನಿಖೆ ನಡೆಸಿ, ಶಿಸ್ತು ಕ್ರಮ ಕೈಗೊಳ್ಳುತ್ತಾರೆಯೇ ಎಂಬುದನ್ನು ಕಾದು ನೋಡಬೇಕಿದೆ.

# 'ಅಭಿವೃದ್ಧಿ ಕೆಲಸಗಳೇ ಟೀಕಾಕಾರರಿಗೆ ಉತ್ತರ; ಪಾದರಸದಂತೆ ಕೆಲಸ ಮಾಡುವೆ'

ಪಾವಗಡ

"ನನ್ನನ್ನು ಮತ್ತು ಮಾಜಿ ಸಚಿವ ವೆಂಕಟರವಣಪ್ಪ ಅವರನ್ನು ಸಾಮಾಜಿಕ ಜಾಲತಾಣಗಳಲ್ಲಿ ಟೀಕೆ ಮಾಡುವವರಿಗೆ ಮುಂದಿನ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಚುನಾವಣೆಯಲ್ಲಿ ಮತದಾರರೇ ತಕ್ಕ ಉತ್ತರ ನೀಡಲಿದ್ದಾರೆ," ಎಂದು ತುಮುಲ್ ಅಧ್ಯಕ್ಷ ಹಾಗೂ ಶಾಸಕ ಎಚ್.ವಿ. ವೆಂಕಟೇಶ್ ಖಡಕ್ ಎಚ್ಚರಿಕೆ ನೀಡಿದರು.

ತಾಲ್ಲೂಕಿನ ಲಿಂಗದಹಳ್ಳಿಯಲ್ಲಿ ಜೂಲಪ್ಪನಪಾಳ್ಯ ರಸ್ತೆ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ, ಸಣ್ಣ ನೀರಾವರಿ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ಮೋಟಾರ್ ಪಂಪ್ ಸೆಟ್ ಹಾಗೂ ಇತರ ಸಾಮಗ್ರಿಗಳನ್ನು ವಿತರಿಸಿ ಅವರು ಮಾತನಾಡಿದರು.

ರೈತರಿಗಾಗಿ 80 ಹೊಸ ಕೊಳವೆಬಾವಿ: "ತಾಲ್ಲೂಕಿನ ಬಡ ರೈತರ ಬದುಕು ಹಸನಾಗಲು ನೀರಾವರಿ ಅಗತ್ಯ. ಈ ನಿಟ್ಟಿನಲ್ಲಿ ಮುಂದಿನ ಒಂದು ತಿಂಗಳ ಅವಧಿಯಲ್ಲಿ ತಾಲ್ಲೂಕಿನಾದ್ಯಂತ 70 ರಿಂದ 80 ಹೊಸ ಕೊಳವೆಬಾವಿಗಳನ್ನು ಕೊರೆಯಲಾಗುವುದು. ವದನಕಲ್ಲು ಮತ್ತು ಸಾಸಲಕುಂಟೆ ಪಂಚಾಯತ್ ವ್ಯಾಪ್ತಿಯಲ್ಲಿ ಅತಿ ಶೀಘ್ರದಲ್ಲೇ 10 ಕೊಳವೆಬಾವಿಗಳನ್ನು ಮಂಜೂರು ಮಾಡಲಾಗುವುದು," ಎಂದು ಭರವಸೆ ನೀಡಿದರು.



ಅಲ್ಲದೆ, ಯುವಕರಿಗೆ ಉದ್ಯೋಗ ನೀಡುವ ನಿಟ್ಟಿನಲ್ಲಿ ಪ್ರವಾಸೋದ್ಯಮ ನಿಗಮದ ಮೂಲಕ 40 ಕಾರುಗಳನ್ನು ವಿತರಿಸಲಾಗುತ್ತಿದ್ದು, ಮುಂದೆ ಈ ಸಂಖ್ಯೆಯನ್ನು 60ಕ್ಕೆ ಹೆಚ್ಚಿಸಲಾಗುವುದು ಎಂದರು.

ಸಾಮಾಜಿಕ ಜಾಲತಾಣದ ಟೀಕೆಗೆ ಕಿಡಿ: "ನಾನು ಮಾಡುತ್ತಿರುವ ಅಭಿವೃದ್ಧಿ ಕೆಲಸಗಳು ಕಾಣದ ಕೆಲವು 'ಯೂಸ್‌ಲೆಸ್ ಫೆಲೋ'ಗಳು ಸೋಶಿಯಲ್ ಮೀಡಿಯಾದಲ್ಲಿ ಅಪಪ್ರಚಾರ ಮಾಡುತ್ತಿದ್ದಾರೆ. ಇಂತಹ ಟೀಕೆಗಳಿಗೆ ನಾನು ಹೆದರುವುದಿಲ್ಲ, ಅಭಿವೃದ್ಧಿಯ ಮೂಲಕವೇ ಟೀಕಾಕಾರರನ್ನು ಮಟ್ಟ ಹಾಕುತ್ತೇವೆ," ಎಂದು ಎಚ್ಚರಿಸಿದರು.

ಪರೀಕ್ಷಾರ್ಥಿಗಳಿಗೆ ಧೈರ್ಯ ತುಂಬಿದ ಶಾಸಕರು: ಕೋಡಿಗೆಹಳ್ಳಿಯ ಮುರಾರ್ಜಿ ದೇಸಾಯಿ ವಸತಿ ಶಾಲೆಗೆ ಭೇಟಿ ನೀಡಿದ ಶಾಸಕರು, ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. "ಪರೀಕ್ಷೆ ಎಂಬುದು ನಿಮ್ಮ ಬುದ್ಧಿಶಕ್ತಿ ಹೊರಹಾಕುವ ಒಂದು ವೇದಿಕೆ ಮಾತ್ರ. ಯಾವುದೇ ಕಾರಣಕ್ಕೂ ಧೈರ್ಯಗುಂದದೆ, ಪ್ರಶ್ನೆಗಳನ್ನು ಅರ್ಥೈಸಿಕೊಂಡು ನಗುನಗುತ್ತಾ ಪರೀಕ್ಷೆ ಎದುರಿಸಿ ಉತ್ತಮ ಜೀವನ ರೂಪಿಸಿಕೊಳ್ಳಿ," ಎಂದು ವಿದ್ಯಾರ್ಥಿಗಳಿಗೆ ಹಿತನುಡಿಗಳನ್ನು ನುಡಿದರು.

ಈ ಸಂದರ್ಭದಲ್ಲಿ ತುಮುಲ್ ನಿರ್ದೇಶಕ ಚಂದ್ರಶೇಖರ ರೆಡ್ಡಿ, ಮಾಜಿ ಜಿಪಂ ಸದಸ್ಯ ಪಾಪಣ್ಣ, ಎಪಿಎಂಸಿ ಮಾಜಿ ಅಧ್ಯಕ್ಷ ಮಾರಣ್ಣ, ಮುಖಂಡರಾದ ವೇಣುಗೋಪಾಲ ರೆಡ್ಡಿ, ರಾಮಲಿಂಗ ರೆಡ್ಡಿ, ಮದನ್ ರೆಡ್ಡಿ ಹಾಗೂ ಗುತ್ತಿಗೆದಾರ ಮಂಜುನಾಥ್ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

# 60ರ ಗ್ಯಾಸ್ ಬೆಲೆ ದಿಢೀರ್ 90ಕ್ಕೆ ಏರಿಕೆ; ಚಾಲಕರು ಕಂಗಾಲು

ಕನಕಪುರ

ಕೊಲ್ಲಿ ಯುದ್ಧದ ಕಾರ್ಮೋಡ ಹಾಗೂ ಗ್ಯಾಸ್ ಸರಬರಾಜಿನ ಕೊರತೆಯ ನೆಪವೊಡ್ಡಿ ಆಟೋ ಗ್ಯಾಸ್ ಬೆಲೆಯನ್ನು ದಿಢೀರನೆ ಏರಿಕೆ ಮಾಡಿರುವುದನ್ನು ಖಂಡಿಸಿ ನಗರದ ಆಟೋ ಚಾಲಕರು ಮತ್ತು ಮಾಲೀಕರು ಬಂಕ್ ಮುಂದೆ ಆಕ್ರೋಶಭರಿತ ಪ್ರತಿಭಟನೆ ನಡೆಸಿದರು.

ಕೊಲ್ಲಿ ಯುದ್ಧದ ಪರಿಣಾಮ ದೇಶದಲ್ಲಿ ಗ್ಯಾಸ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿದೆ. ನಗರದ ಮಳಗಾಳು ರಸ್ತೆಯಲ್ಲಿರುವ ಗ್ಯಾಸ್ ಬಂಕ್ ದಾಸ್ತಾನು ಇಲ್ಲದೆ ಬಂದ್ ಆಗಿದ್ದರಿಂದ, ಹೌಸಿಂಗ್ ಬೋರ್ಡ್ ಬಳಿಯ ಬಂಕ್ ಒಂದರಲ್ಲೇ ಆಟೋಗಳು ಕಿಲೋಮೀಟರ್‌ಗಟ್ಟಲೆ ಸಾಲುಗಟ್ಟಿ ನಿಂತಿದ್ದವು. ಇದನ್ನೇ ಬಂಡವಾಳ ಮಾಡಿಕೊಂಡ ಬಂಕ್ ಮಾಲೀಕರು ಹಾಗೂ ವಿತರಕರು ಬೆಲೆಯನ್ನು ಗಗನಕ್ಕೇರಿಸಿದ್ದಾರೆ ಎಂದು ಚಾಲಕರು ಆರೋಪಿಸಿದ್ದಾರೆ. ನಿನ್ನೆಯವರೆಗೂ ಲೀಟರ್‌ಗೆ ರೂ. 55 ರಿಂದ 60ರ ಆಸುಪಾಸಿನಲ್ಲಿದ್ದ ಗ್ಯಾಸ್ ಬೆಲೆಯನ್ನು ಶನಿವಾರ ಏಕಾಏಕಿ 90ಕ್ಕೆ ಏರಿಸಲಾಗಿದೆ. ಇದರಿಂದ ಕಂಗೆಟ್ಟ ಚಾಲಕರು ಬಂಕ್ ಎದುರು ಜಮಾಯಿಸಿ ಸರ್ಕಾರದ ಹಾಗೂ ಬಂಕ್ ಮಾಲೀಕರ ವಿರುದ್ಧ ಘೋಷಣೆ ಕೂಗಿದರು. "ದಿನವಿಡೀ ಕಷ್ಟಪಟ್ಟು ದುಡಿದ ಹಣ ಗ್ಯಾಸ್‌ಗೇ ಹೋದರೆ ನಮ್ಮ ಸಂಸಾರ ನಿರ್ವಹಣೆ ಮಾಡುವುದು ಹೇಗೆ?" ಎಂದು ಚಾಲಕರು ಅಳಲು ತೋಡಿಕೊಂಡಿದ್ದಾರೆ. ಗ್ಯಾಸ್ ಬೆಲೆ ಇಳಿಕೆಯಾಗುವವರೆಗೂ ನಗರದಲ್ಲಿ ಆಟೋಗಳನ್ನು ಓಡಿಸುವುದಿಲ್ಲ ಎಂದು ಚಾಲಕರು ಒಮ್ಮತದ ತೀರ್ಮಾನ ಕೈಗೊಂಡಿದ್ದಾರೆ. ಇದರಿಂದಾಗಿ ಶಾಲಾ ವಿದ್ಯಾರ್ಥಿಗಳು ಹಾಗೂ ನಿತ್ಯ ಪ್ರಯಾಣಿಕರು ಪರದಾಡುವಂತಾಗಿದೆ. ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ಕೃತಕ ಅಭಾವ ಸೃಷ್ಟಿಸಿ ಬೆಲೆ ಏರಿಕೆ ಮಾಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದ್ದಾರೆ.

## 25 ಕೋಟಿ ರೂ. ವೆಚ್ಚದಲ್ಲಿ ಭೂಗತ ವಿದ್ಯುತ್ ಕೇಬಲ್ ಅಳವಡಿಕೆ: ಮುನಿಯಪ್ಪ



ವಿಜಯಪುರ

ಪಟ್ಟಣದಲ್ಲಿ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ನಿಧಿ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ 2 ಕೋಟಿ ಅನುದಾನದಲ್ಲಿ, ಪುರಸಭೆ ವ್ಯಾಪ್ತಿಯಲ್ಲಿ ರಸ್ತೆಗಳ ಅಭಿವೃದ್ಧಿ ಹಾಗೂ ಬೆಸ್ಕಾಂ ಇಲಾಖೆಯಿಂದ 25 ಕೋಟಿ ರೂಗಳ ವೆಚ್ಚದಲ್ಲಿ ಭೂಗತ ಕೇಬಲ್ ಅಳವಡಿಸುವ ಮತ್ತು ಎಲ್.ಟಿ.ಮೇಲ್ ತಂತಿ ಕೇಬಲ್ ತೆಗೆದು ಎಲ್.ಟಿ.ಎ.ಬಿ.ಕೇಬಲ್ ಅಳವಡಿಸುವ ಕಾಮಗಾರಿಗಳ ಗುದ್ದಲಿ ಪೂಜೆಯನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ನೆರವೇರಿಸಿದರು.

ಸಚಿವ ಕೆ.ಹೆಚ್.ಮುನಿಯಪ್ಪ ಮಾತನಾಡಿ, ದೇವನಹಳ್ಳಿಯಲ್ಲಿ 40 ಕೋಟಿ, ವಿಜಯಪುರದಲ್ಲಿ 25 ಕೋಟಿ ವೆಚ್ಚದಲ್ಲಿ, ಭೂಗತ ಕೇಬಲ್ ಅಳವಡಿಕೆ ಹಾಗು ಕಂಬಿಮುಕ್ತ ವಿದ್ಯುತ್ ತಂತಿಗಳ ಅಳವಡಿಕೆ ಕಾಮಗಾರಿ ನಡೆಯುತ್ತದೆ. ಪಟ್ಟಣದಲ್ಲಿ ಯು.ಜಿ.ಡಿ ಮಾಡಲು ಅಗತ್ಯ ಕ್ರಮ ವಹಿಸಲಾಗುತ್ತದೆ. ಪ್ರತಿಯೊಂದು ಗ್ರಾಮಕ್ಕೂ ಎತ್ತಿನಹೊಳೆ ಯೋಜನೆಯಡಿ ನೀರು ಹರಿಸಲು ತೀರ್ಮಾನಿಸಿದ್ದೇವೆ. ನೈರ್ಮಲ್ಯ ಕಾಪಾಡಲು ಆಧ್ಯತೆ ನೀಡುತ್ತಿದ್ದೇವೆ. ಕಾವೇರಿ ನೀರನ್ನು ಎರಡೂ ಪಟ್ಟಣಗಳಿಗೆ ಹರಿಸುವುದಕ್ಕೆ ಯೋಜನೆ ರೂಪಿಸಲಾಗಿದೆ. ಇನ್ನೂ ಒಂದು ವರ್ಷ ಸಮಯಾವಕಾಶ ಬೇಕಾಗುತ್ತದೆ. ಅದನ್ನೂ ಮಾಡುತ್ತೇವೆ. ಯುಜಿಡಿ ಮಾಡಲು ಡಿಪಿಆರ್ ಮಾಡಿದ್ದೇವೆ ಎಂದರು.

ಅಡುಗೆ ಅನಿಲ ಸಮಸ್ಯೆಯಾಗಲ್ಲ: ಗೃಹಬಳಕೆ ಸಿಲಿಂಡರುಗಳಿಗೆ ಯಾವುದೇ ಸಮಸ್ಯೆಯಿಲ್ಲ. ವಾಣಿಜ್ಯ ಸಿಲಿಂಡರುಗಳಿಗೆ ಮಾತ್ರ ಸ್ವಲ್ಪ ವ್ಯತ್ಯಯವಾಗಿದೆ. ಶೀಘ್ರವಾಗಿ ಅದನ್ನು ಸರಿಪಡಿಸುವ ಕೆಲಸ ಮಾಡುತ್ತೇವೆ ಎಂದರು.

ಪುರಸಭೆ ಅಧ್ಯಕ್ಷೆ ಎಸ್.ಭವ್ಯಾಮಹೇಶ್, ಮುಖ್ಯಾಧಿಕಾರಿ ಸತ್ಯನಾರಾಯಣ, ಸದಸ್ಯರಾದ ಎಂ.ಸತೀಶ್ ಕುಮಾರ್, ಸೈಯದ್ ಎಕ್ಬಾಲ್, ಎಂ.ರಾಜಣ್ಣ, ಬೆಸ್ಕಾಂ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಹೊಸಕೋಟೆ ವಿಭಾಗದ ವೆಂಕಟೇಶಪ್ಪ, ಎಇಇ ಲಕ್ಷ್ಮೀಕಾಂತ್, ಇಂಜಿನಿಯರ್, ಭವಾನಿಶಂಕರ್, ಗ್ರಾಮೀಣ ಇಂಜಿನಿಯರ್ ನಾರಾಯಣಸ್ವಾಮಿ, ಲೋಕೋಪಯೋಗಿ ಇಲಾಖೆಯ ಎಇಇ ರವೀಂದ್ರಸಿಂಗ್, ಇಂಜಿನಿಯರ್ ಮುರಳಿ, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀನಾಥ್ ಗೌಡ, ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ದಿನ್ನೂರು ವೆಂಕಟೇಶ್, ಸಂಪತ್ ಕುಮಾರ್, ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಗೌಸ್ ಖಾನ್, ಉಪಾಧ್ಯಕ್ಷ ವಲ್ಲಿಜಾನ್, ಗ್ಯಾಸ್ ಶ್ರೀನಿವಾಸ್, ಟೌನ್ ಕಾಂಗ್ರೆಸ್ ಅಧ್ಯಕ್ಷ ವಿ.ಎಂ.ನಾಗರಾಜ್, ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಅಫ್ಜಲ್ ಪಾಷ, ಮಂಡಿಬೆಲೆ ದೇವರಾಜಪ್ಪ, ಕೆ.ಎಂ.ಮಧುಮಹೇಶ್, ಎಂ.ವೇಣುಗೋಪಾಲ್, ರಾಜಬಾಬು, ಹರೀಶ್, ಧರ್ಮಪುರ ಕೃಷ್ಣಪ್ಪ, ಮುನಿಚಿನ್ನಪ್ಪ ಮುಂತಾದವರು ಹಾಜರಿದ್ದರು.

## ಕೋರ್ಟ್ ಮುಂದೆ ಬೀದಿದೀಪ ಸರಿಪಡಿಸಿ

ಕನಕಪುರ

ನಗರದ ನ್ಯಾಯಲಯದ ಮುಂದೆ ಇರುವ ಬೆಂಗಳೂರು ಮುಖ್ಯ ರಸ್ತೆಯಲ್ಲಿ ಸುಮಾರು ದಿನಗಳಿಂದ ಬೀದಿ ದೀಪಗಳು ಕೆಟ್ಟು ವಾಹನ ಸವಾರರು, ಪಾದ ಚಾರಿಗಳ ಓಡಾಟಕ್ಕೆ ಕಷ್ಟವಾಗಿದೆ ಎಂದು ಕನ್ನಡ ಸೇನೆ ತಾಲೂಕು ಅಧ್ಯಕ್ಷ ಜಯಸಿಂಹ ಕಳವಳ ವ್ಯಕ್ತಪಡಿಸಿದ್ದಾರೆ. ಕನಕಪುರದಿಂದ ಬೆಂಗಳೂರಿಗೆ ದಿನನಿತ್ಯ ಇದೇ ರಸ್ತೆಯಲ್ಲಿ ಸಾವಿರಾರು ವಾಹನಗಳು ಸಂಚರಿಸುತ್ತವೆ. ಜೊತೆಗೆ ಪಾದಚಾರಿಗಳುವಾಯುವಿಹಾರಕ್ಕೆ ಬರುವುದರಿಂದ ಬೀದಿ ದೀಪಗಳು ಕೆಟ್ಟು ಸುಮಾರು ದಿನಗಳಾಗಿದ್ದರು ಇತ್ತ ಸಂಬಂಧಪಟ್ಟ ಯಾರೂ ಕೂಡ ಗಮನಹರಿಸುತ್ತಿಲ್ಲ ಜೊತೆಗೆ ಇದೇ ರಸ್ತೆಯಲ್ಲಿ ಗ್ರಾಮಾಂತರ ಪೊಲೀಸ್ ಠಾಣೆ ಇದ್ದು ನ್ಯಾಯಾಧೀಶರ ಮನೆಯೂ ಪಕ್ಕದಲ್ಲೇ ಇದೆ. ಇನ್ನೆರಡು ದಿನಗಳಲ್ಲಿ ಬೀದಿ ದೀಪಗಳನ್ನು ಸರಿಪಡಿಸಿ ಸಾರ್ವ ಜನಿಕರು ಹಾಗೂ ವಾಹನ ಸವಾರರ ಮುಕ್ತ ಓಡಾಟಕ್ಕೆ ಅವಕಾಶ ಮಾಡಿಕೊಡುವಂತೆ ಮನವಿ ಮಾಡಿದ್ದಾರೆ.

## 1.7 ಲಕ್ಷ ರೂ.ಗೆ ತಿಂಗಳ ಮಗು ಮಾರಾಟ ಮಾಡಿದ ತಂದೆ

ಮೇದಕ್ (ತೆಲಂಗಾಣ)

ಮೇದಕ್ ಜಿಲ್ಲೆಯ ಹವೇಲಿ ಘನಪುರ ತಾಲೂಕಿನ ಲಿಮ್ಲಾನ್‌ಪಲ್ಲಿ ಎಂಬಲ್ಲಿ ತಿಂಗಳ ಮಗುವನ್ನು 1.70 ಲಕ್ಷ ರೂ.ಗೆ ಮಾರಾಟ ಮಾಡಿದ ಆರೋಪ ಪ್ರಕರಣಕ್ಕೆ ಸಂಬಂಧಪಟ್ಟಂತೆ ಮದ್ಯ ವ್ಯಸನಿ ತಂದೆ ಸೇರಿದಂತೆ ಆರು ಜನ ಆರೋಪಿಗಳ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ. ಆರೋಪಿ ತಂದೆಯು ಮಧ್ಯವರ್ತಿಗಳ ಸಹಾಯದಿಂದ ತನ್ನ ಒಂದು ತಿಂಗಳ ಮಗುವನ್ನು ಕಾಮರೆಡ್ಡಿ ಜಿಲ್ಲೆಯ ಮಕ್ಕಳಿಲ್ಲದ ದಂಪತಿಗೆ ಮಾರಾಟ ಮಾಡಿದ್ದ. ಆದರೆ, ಅಂಗನವಾಡಿ ಶಿಕ್ಷಕಿಗೆ ಬಂದ ಒಂದು ಸಣ್ಣ ಅನುಮಾನದಿಂದ ಈ ಘಟನೆ ಬಹಿರಂಗಗೊಂಡಿದೆ.

# ಚಿಗುರು ಟ್ರಸ್ಟ್‌ನಿಂದ 115ನೇ ಮಹಿಳಾ ದಿನಾಚರಣೆ ಸಂಭ್ರಮ



ಬಂಗಾರಪೇಟೆ

"ಮಹಿಳೆಯರು ಕೇವಲ ಕುಟುಂಬಕ್ಕೆ ಸೀಮಿತವಾಗದೆ ಸಮಾಜದ ಅಭಿವೃದ್ಧಿಯ ಅಡಿಗಲ್ಲುಗಳಾಗಿದ್ದಾರೆ. ಅವರ ಹಕ್ಕುಗಳು ಮತ್ತು ಸಾಧನೆಗಳನ್ನು ಗೌರವಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ," ಎಂದು ಕರ್ನಾಟಕ ರಾಜ್ಯ ಜಾನಪದ ಅಕಾಡೆಮಿ ಪ್ರಶಸ್ತಿ ಪುರಸ್ಕೃತ ಜಿ. ಮುನಿರೆಡ್ಡಿ ತಿಳಿಸಿದರು.

ಪಟ್ಟಣದ ಅಕ್ಕಚ್ಚಮ್ಮ ಕಲ್ಯಾಣ ಮಂಟಪದಲ್ಲಿ ಚಿಗುರು ಟ್ರಸ್ಟ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 115ನೇ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು. ಮಹಿಳೆಯರ ಶಿಕ್ಷಣ, ಆರೋಗ್ಯ ಮತ್ತು ಆರ್ಥಿಕ ಸಬಲೀಕರಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕೆಂದು ಅವರು ಕರೆ ನೀಡಿದರು.

ವಿವಿಧ ಕ್ಷೇತ್ರಗಳಲ್ಲಿ ಮಹಿಳೆಯರ ಛಾಪು: ಕ್ಷೇತ್ರ ಶಿಕ್ಷಣಾಧಿಕಾರಿ ಎಂ.ಕೆ. ಶಶಿಕಲಾ ಮಾತನಾಡಿ, "ಇಂದು ವೈದ್ಯಕೀಯ, ಆಡಳಿತ ಹಾಗೂ ರಾಜಕೀಯ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ಅವರಿಗೆ ಸಮಾನ ಅವಕಾಶ ಒದಗಿಸಿದರೆ ದೇಶದ ಪ್ರಗತಿಗೆ ದೊಡ್ಡ ಕೊಡುಗೆ ನೀಡಬಲ್ಲರು. ಮಹಿಳೆಯರಲ್ಲಿ ಆತ್ಮವಿಶ್ವಾಸ ಮೂಡಿಸುವ ಇಂತಹ ಜಾಗೃತಿ ಕಾರ್ಯಕ್ರಮಗಳು ಇಂದಿನ ಅಗತ್ಯವಾಗಿದೆ," ಎಂದರು.

ಸ್ವಾವಲಂಬಿ ಬದುಕಿಗೆ ಆದ್ಯತೆ: ಚಿಗುರು ಟ್ರಸ್ಟ್ ಅಧ್ಯಕ್ಷೆ ಎಸ್. ಪ್ರಭಾವತಿ ಮಾತನಾಡಿ, ಮಹಿಳೆಯರು ತಮ್ಮ ಸಾಮರ್ಥ್ಯವನ್ನು ಅರಿತು ಸ್ವಾವಲಂಬಿಯಾಗಿ ಬದುಕಬೇಕು. ಚಿಗುರು ಟ್ರಸ್ಟ್ ವತಿಯಿಂದ ಮಹಿಳೆಯರ ಅಭಿವೃದ್ಧಿಗೆ ನಿರಂತರ ಸಾಮಾಜಿಕ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಆರಕ್ಷಕ ನಿರೀಕ್ಷಕ ಸಿ. ರವಿಕುಮಾರ್, ಸಿಡಿಪಿಓ ರವಿ, ಭಾರತ್ ಫೌಂಡೇಷನ್‌ನ ಸಯ್ಯದ್ ನದೀಮ್, ವೈದ್ಯರಾದ ಡಾ. ಅರುಣ್ ಕುಮಾರ್, ಡಾ. ಮಹೇಶ್, ಶಿಕ್ಷಣ ತಜ್ಞರಾದ ಬಿ.ಆರ್. ರವಿ, ವಿ. ಭಾಗ್ಯಲಕ್ಷ್ಮಮ್ಮ, ಡಾ. ಮಾಲತಿ, ನಾರಾಯಣಮ್ಮ, ಬೈರಕೂರು ಬೌದ್ಧ ಉಪಾಸಕ ಎಂ. ರವಿ ಹಾಗೂ ಚಿಗುರು ಸಂಸ್ಥೆಯ ಸಂಯೋಜಕಿ ಅಂಜಲಿ ಮತ್ತಿತರರು ಉಪಸ್ಥಿತರಿದ್ದರು.

# ಯಶಸ್ವಿಯಾಗಿ ಜರುಗಿದ ಬೃಹತ್ ರಕ್ತದಾನ ಶಿಬಿರ

ಮಾಲೂರು

"ರಕ್ತದಾನವು ಜೀವನದ ಮಹತ್ವದ ಘಟ್ಟವಾಗಿದೆ. ರಕ್ತ ನೀಡಿ ಇನ್ನೊಬ್ಬರ ಜೀವ ಉಳಿಸುವುದು ಅತ್ಯಂತ ಶ್ರೇಷ್ಠ ಹಾಗೂ ಮಹತ್ತರ ಕಾರ್ಯ," ಎಂದು ಮುಖಂಡರಾದ ಕಲ್ಕೆರೆ ಪ್ರೇಮ್ ಕುಮಾರ್ ತಿಳಿಸಿದರು.

ತಾಲ್ಲೂಕಿನ ಪ್ರಸಿದ್ಧ ಪ್ರವಾಸಿ ಹಾಗೂ ಧಾರ್ಮಿಕ ತಾಣವಾದ ಚಿಕ್ಕತಿರುಪತಿಯ ಶ್ರೀ ಪ್ರಸನ್ನ ವೆಂಕಟರಮಣ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ಚಿಕ್ಕತಿರುಪತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಯುವಕರ ಬಳಗ, ಕೋಲಾರ ಜಿಲ್ಲಾ ಆಸ್ಪತ್ರೆ ಹಾಗೂ ಲಕ್ಕೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ **'ಸ್ವಯಂಪ್ರೇರಿತ ರಕ್ತದಾನ ಶಿಬಿರ'**ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜೀವ ಉಳಿಸುವ ಆಶಾಕಿರಣ: "ಅಪಘಾತಗಳು ಹಾಗೂ ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭದಲ್ಲಿ ರಕ್ತದ ಅಗತ್ಯತೆ ಹೆಚ್ಚಾಗಿರುತ್ತದೆ. ಒಬ್ಬ ವ್ಯಕ್ತಿಯ ರಕ್ತದಾನದಿಂದ ಕನಿಷ್ಠ ಮೂವರು ವ್ಯಕ್ತಿಗಳ ಜೀವ ಉಳಿಸಬಹುದು. ರಕ್ತದಾನದಿಂದ ಆರೋಗ್ಯಕ್ಕೆ ಯಾವುದೇ ಹಾನಿಯಾಗುವುದಿಲ್ಲ, ಬದಲಾಗಿ ಹೊಸ ರಕ್ತ ಉತ್ಪತ್ತಿಯಾಗಿ ದೇಹದ ಆರೋಗ್ಯ ವೃದ್ಧಿಸುತ್ತದೆ. ಯುವಜನತೆ ಇಂತಹ ಮಾನವೀಯ ಕಾರ್ಯಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಬೇಕು," ಎಂದು ಅವರು ಕರೆ ನೀಡಿದರು.

ಉತ್ಸಾಹದ ಭಾಗವಹಿಸುವಿಕೆ: ಶಿಬಿರದಲ್ಲಿ ನೂರಕ್ಕೂ ಹೆಚ್ಚು ಜನರು ಭಾಗವಹಿಸಿದ್ದರು. ವೈದ್ಯಕೀಯ ತಪಾಸಣೆಯ ನಂತರ 52 ಮಂದಿ ರಕ್ತದಾನ ಮಾಡಿದರು. ರಕ್ತದಾನ ಮಾಡಿದವರಿಗೆ ಆರೋಗ್ಯ ಇಲಾಖೆಯಿಂದ ಪ್ರಮಾಣ ಪತ್ರ ವಿತರಿಸಲಾಯಿತು ಹಾಗೂ ಆಯೋಜಕರಿಂದ ಎಲ್ಲರಿಗೂ ಊಟದ ವ್ಯವಸ್ಥೆ ಮಾಡಲಾಗಿತ್ತು.

ಕಾರ್ಯಕ್ರಮದಲ್ಲಿ ಲಕ್ಕೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಶೃತಿ, ಆರೋಗ್ಯ ಇಲಾಖೆಯ ಮಧು, ನಿಕಟಪೂರ್ವ ಗ್ರಾಪಂ ಸದಸ್ಯರಾದ ರಾಜಶೇಖರ್, ಎಟ್ಟಕೋಡಿ ಸತೀಶ್ ರೆಡ್ಡಿ, ಮುಖಂಡರಾದ ಗಿರೀಶ್, ಕಲ್ಕೆರೆ ಸತೀಶ್, ಸಂದೀಪ್ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.



# ಬಯಲುಸೀಮೆಗೆ 'ಶುದ್ಧ' ನೀರು ಕೊಡಿ, ಇಲ್ಲವೇ ಪಾದಯಾತ್ರೆ ಗ್ಯಾರಂಟಿ!

ಚಿಕ್ಕಬಳ್ಳಾಪುರ

"ಎಚ್.ಎನ್ ಹಾಗೂ ಕೆ.ಸಿ ವ್ಯಾಲಿ ಯೋಜನೆಗಳ ನೀರನ್ನು ತೃತೀಯ ಹಂತದಲ್ಲಿ ಸಂಸ್ಕರಿಸಲು ಕಾಂಗ್ರೆಸ್ ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ನಿರ್ಲಕ್ಷ್ಯ ಮುಂದುವರಿದರೆ ಬಯಲುಸೀಮೆಯ ಜಿಲ್ಲೆಗಳಲ್ಲಿ ಬೃಹತ್ ಪಾದಯಾತ್ರೆ ನಡೆಸಿ ಹೋರಾಟ ಮಾಡಲಾಗುವುದು," ಎಂದು ಸಂಸದ ಡಾ. ಕೆ. ಸುಧಾಕರ್ ಎಚ್ಚರಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂಸ್ಕರಿತ ನೀರಿನ ಗುಣಮಟ್ಟದ ಕುರಿತು ಸಾರ್ವಜನಿಕರಲ್ಲಿ ಆತಂಕವಿದೆ. ಸರ್ಕಾರ ಆಧುನಿಕ



ತಂತ್ರಜ್ಞಾನ ಬಳಸಿ ಸಿಂಗಾಪುರ ಮಾದರಿಯಲ್ಲಿ ನೀರನ್ನು ಸಂಪೂರ್ಣ ಶುದ್ಧೀಕರಿಸಬೇಕು ಎಂದು ಒತ್ತಾಯಿಸಿದರು.

ಬಂದ್ ಪರಿಹಾರವಲ್ಲ, ಪಾದಯಾತ್ರೆ ನಮ್ಮ ಹಾದಿ:
"ನೀರಿಗಾಗಿ ಬಿಜೆಪಿ ಹೋರಾಟ ಮಾಡುವುದು ನಿಶ್ಚಿತ. ಆದರೆ, ಪರೀಕ್ಷಾ ಸಮಯದಲ್ಲಿ 'ಬಂದ್' ಮಾಡುವುದು ವಿದ್ಯಾರ್ಥಿಗಳಿಗೆ ಮತ್ತು ಬೀದಿ ಬದಿ ವ್ಯಾಪಾರಿಗಳಿಗೆ ತೊಂದರೆ ನೀಡಿದಂತಾಗುತ್ತದೆ. ಜನರಿಗೆ ಕಷ್ಟ ಕೊಡದೆ ಹೋರಾಟ ಮಾಡಬೇಕಿದೆ. ಹೀಗಾಗಿ ನಾನು ಬಂದ್ ಬೆಂಬಲಿಸುವುದಿಲ್ಲ. ಬದಲಾಗಿ, ಹಳ್ಳಿ ಹಳ್ಳಿಗಳಿಗೆ ಭೇಟಿ ನೀಡಿ ಜನರಲ್ಲಿ ಅರಿವು ಮೂಡಿಸಲು ಪಾದಯಾತ್ರೆ ಹಮ್ಮಿಕೊಳ್ಳುತ್ತೇನೆ," ಎಂದು ಸ್ಪಷ್ಟಪಡಿಸಿದರು.

ರಾಜಕೀಯದ ಹುಚ್ಚು– ಅಭಿವೃದ್ಧಿ ಬಲಿ: ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ ಮತ್ತು ಶಾಸಕರ ಗುಂಪುಗಾರಿಕೆಯಿಂದ ಆಡಳಿತ ಹಳಿ ತಪ್ಪಿದೆ ಎಂದು ಆಕ್ರೋಶ ವ್ಯಕ್ತಪಡಿಸಿದ ಸುಧಾಕರ್, "ಕಾಂಗ್ರೆಸ್ ಸರ್ಕಾರ ಕೇಂದ್ರದ ಮೇಲೆ ಗೂಬೆ ಕೂರಿಸುವುದನ್ನು ಬಿಟ್ಟು ಅಭಿವೃದ್ಧಿಯತ್ತ ಗಮನಹರಿಸಲಿ. ಮೋದಿ ಸರ್ಕಾರ ರೈಲ್ವೆ ಮತ್ತು ಆರೋಗ್ಯ ಕ್ಷೇತ್ರದಲ್ಲಿ (ಕ್ಯಾನ್ಸರ್ ಲಸಿಕೆ ಇತ್ಯಾದಿ) ಐತಿಹಾಸಿಕ ಕೊಡುಗೆ ನೀಡಿದೆ. ಅದನ್ನು ಬಳಸಿಕೊಂಡು ರಾಜ್ಯದ ಅಭಿವೃದ್ಧಿಗೆ ಕೈಜೋಡಿಸಬೇಕಿತ್ತು," ಎಂದರು.

"2014ರಲ್ಲಿ ಆರಂಭವಾದ ಎತ್ತಿನಹೊಳೆ ಯೋಜನೆ 12 ವರ್ಷ ಕಳೆದರೂ ಪೂರ್ಣಗೊಂಡಿಲ್ಲ. 8 ಸಾವಿರ ಕೋಟಿ ಯೋಜನೆಯ ವೆಚ್ಚ ಈಗ 30 ಸಾವಿರ ಕೋಟಿಗೆ ಏರಿದೆ. ಕಾಂಗ್ರೆಸ್‌ಗೆ ನಿಜವಾದ ಬದ್ಧತೆ ಇದ್ದಿದ್ದರೆ ಈ ಭಾಗದ 80 ಲಕ್ಷ ಜನರಿಗೆ ಈಗಾಗಲೇ ನೀರು ಸಿಗುತ್ತಿತ್ತು. ತರಕಾರಿ, ರೇಷ್ಮೆ ಬೆಳೆಯುವ ನಮ್ಮ ರೈತರ ಋಣ ತೀರಿಸಲು ಸರ್ಕಾರ ಕೂಡಲೇ ಕಾಮಗಾರಿ ಮುಗಿಸಬೇಕು," ಎಂದು ಆಗ್ರಹಿಸಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy